ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ


ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

| VOLUME - 13 ಸಂಪುಟ-13 | ISSUE - 176 ಸಂಚಿಕೆ- 176 | PAGE-8 ಪುಟ-8 | ಶನಿವಾರ 23.08.2025 | RS.2/- ಬೆಲೆ 2/- |
|---|---|---|---|---|



ಬಾಗಲಕೋಟ:ಘಟಪ್ರಭಾ ನದಿ ಪ್ರವಾಹದಿಂದಾಗಿ ಬಾಗಲಕೋಟೆ ಜಿಲ್ಲೆಯ ಮುಧೋಳ ತಾಲೂಕಿನ ಮಾಚಕನೂರ ಗ್ರಾಮದ ಪ್ರಸಿದ್ಧ ಹೊಳೆಬಸವೇಶ್ವರ ದೇವಾಲಯ ಸಂಪೂರ್ಣ ಜಲಾವೃತಗೊಂಡಿದೆ.

## ಜೈಲಿನಲ್ಲಿ ಕೂತು ಆದೇಶ ನೀಡುವುದು ಬೇಡ: ಮೋದಿ



ಮಲ್ಲಮ್ಮ ನುಡಿ ವಾರ್ತೆ ಪಾಟ್ನಾ:ಅ.22: ಬಂಧನದ ಬಳಿಕ ಸರ್ಕಾರಿ ಉದ್ಯೋಗಿಗಳು ಕೆಲಸ ಕಳೆದುಕೊಳ್ಳಾರೆ, ಪ್ರಧಾನಿ, ಸಿಎಂಗೆ ಯಾಕೆ ಹೀಗಾಗಬಾರದು? ಎಂದು ಕ್ರಿಮಿನಲ್ ಕಾನೂನಿನ ವಿಚಾರದ ಕುರಿತು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಬೋಧ್‌ಗಯಾದ ಮಗಧ ವಿಶ್ವವಿದ್ಯಾಲಯದ ಮೈದಾನದಲ್ಲಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ 13 ಸಾವಿರ ಕೋಟಿ ರೂ.ಗಳಿಗೂ ಹೆಚ್ಚು ವೆಚ್ಚದ ರೈಲು, ರಸ್ತೆ, ವಿದ್ಯುತ್, ವಸತಿ, ನೀರು ಸರಬರಾಜು ಮತ್ತು ಆರೋಗ್ಯ ಕ್ಷೇತ್ರಗಳಿಗೆ ಸಂಬಂಧಿಸಿದ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಿದರು.

ಅಧಿಕಾರದ ಉನ್ನತ ಹಂತಗಳಲ್ಲಿನ ಭ್ರಷ್ಟಾಚಾರವನ್ನು ಬೇರುಸಹಿತ ಕಿತ್ತುಹಾಕುವ ಮತ್ತು "ನುಸುಳುಕೋರರಿಂದ" ದೇಶದ ಜನಾಂಗ ಸ್ಥಿತಿಗಳನ್ನು ಬದಲಾಯಿಸುವ "ಬೆದರಿಕೆ"ಯನ್ನು ನಿಭಾಯಿಸಲು ತೆಗೆದುಕೊಂಡ ಕ್ರಮಗಳನ್ನು ಕಾಂಗ್ರೆಸ್ ನೇತೃತ್ವದ ಇಂಡಿ ಮೈತ್ರಿಕೂಟ ವಿರೋಧಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಆರೋಪಿಸಿದ್ದಾರೆ.ಈ ವಾರದ ಆರಂಭದಲ್ಲಿ ತಮ್ಮ ಸರ್ಕಾರ ಪರಿಚಯಿಸಿದ ಸಂವಿಧಾನ (130 ನೇ ತಿದ್ದುಪಡಿ) ಮಸೂದೆ, 2025 ಮತ್ತು ಚುನಾವಣಾ ಆಯೋಗ ಬಿಹಾರದಲ್ಲಿ ಪ್ರಸ್ತುತ ನಡೆಸುತ್ತಿರುವ ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆ ಬಗ್ಗೆ ಪ್ರಧಾನಿ ಪರೋಕ್ಷವಾಗಿ ಉಲ್ಲೇಖಿಸಿದರು.

"ಅಧಿಕಾರದ ಸ್ಥಾನದಲ್ಲಿರುವ ಜನರು ಜೈಲಿನಿಂದ ಸರ್ಕಾರಗಳನ್ನು ನಡೆಸುತ್ತಿದ್ದಾರೆ, ಕಂಬಿಗಳ ಹಿಂದಿನಿಂದ ಫೈಲ್‌ಗಳಿಗೆ ಸಹಿ ಮಾಡುತ್ತಿದ್ದಾರೆ, ಸಾಂವಿಧಾನಿಕ ಔಚಿತ್ಯವನ್ನು ಹರಿದು ಹಾಕುತ್ತಿದ್ದಾರೆ ಎಂಬ ವಿಷಾದಕರ ಪರಿಸ್ಥಿತಿಯನ್ನು ನಾವು ನೋಡಿದ್ದೇವೆ" ಎಂದು ದೆಹಲಿಯ ಮಾಜಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರನ್ನು ಪರೋಕ್ಷವಾಗಿ ಉಲ್ಲೇಖಿಸಿ ಮೋದಿ ಹೇಳಿದ್ದಾರೆ.

ತಮ್ಮ 11 ವರ್ಷಗಳ ಸರ್ಕಾರದಲ್ಲಿ "ಭ್ರಷ್ಟಾಚಾರದ ಕಲೆ ಇಲ್ಲ" ಎಂದು ಹೆಮ್ಮೆಯಿಂದ ಹೇಳಿಕೊಂಡ ಪ್ರಧಾನಿ, ಹಿಂದಿನ ಕಾಂಗ್ರೆಸ್ ಆಡಳಿತದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಇದರಲ್ಲಿ ಅನೇಕ ಹಗರಣಗಳು ಬೆಳಕಿಗೆ ಬಂದವು, ಮತ್ತು ಬಿಹಾರದಲ್ಲಿ ಅಧಿಕಾರದಲ್ಲಿದ್ದಾಗ ಭ್ರಷ್ಟಾಚಾರವು "ಬೀದಿಯಲ್ಲಿರುವ ಮನುಷ್ಯನಿಗೂ ತಿಳಿದಿದೆ" ಎಂದು ಆರ್‌ಜೆಡಿ ವಿರುದ್ಧವಾಗಿ ಮಾತನಾಡಿದರು.

"ಆದ್ದರಿಂದ, ಭ್ರಷ್ಟ ಮುಖ್ಯಮಂತ್ರಿ ಅಥವಾ ಪ್ರಧಾನಿಯನ್ನು 30 ದಿನ ಜೈಲಿನಲ್ಲಿ ಕಳೆದರೆ ಅವರನ್ನು ವಜಾಗೊಳಿಸಲು ಅವಕಾಶ ನೀಡುವ ಕಾನೂನನ್ನು ತರಲು

(2ನೇ ಪುಟ ನೋಡಿ)

## ವಿವಿಧ ಬೇಡಿಕೆಗಳ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಮನವಿಗೆ ಸ್ಪಂದಿಸಿದ ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು :ಅ.22: ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಬೇಡಿಕೆಗಳನ್ನು ಈಡೇರಿಸಿ ಕೊಡುವಂತೆ ಕೋರಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಪರವಾಗಿ ಮನವಿ ಸ್ವೀಕರಿಸಿದ ಮುಖ್ಯಮಂತ್ರಿಯವರ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರು, ಸಂಘದ ಬೇಡಿಕೆಗಳ ಕುರಿತು ಸಂಘದ ರಾಜ್ಯಾಧ್ಯಕ್ಷ ಎ.ಸಿ.

ತಿಪ್ಪೇಸ್ವಾಮಿಯವರ ನೇತೃತ್ವದ ನಿಯೋಗದೊಂದಿಗೆ ಶುಕ್ರವಾರ

(2ನೇ ಪುಟ ನೋಡಿ)

## ಬಿಜೆಪಿ ಆಡಳಿತವಿರುವ ರಾಜ್ಯಗಳಲ್ಲಿ 20 ಕಾಲ್ತುಳಿತ ಘಟನೆ: ಸಿಎಂ ಸಿದ್ದರಾಮಯ್ಯ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಅ.22: ಬಿಜೆಪಿ ಆಡಳಿತವಿರುವ ರಾಜ್ಯಗಳಲ್ಲಿಯೂ 20 ಕಾಲ್ತುಳಿತಗಳು ಸಂಭವಿಸಿವೆ ಮತ್ತು 11 ಜನರ ಸಾವಿಗೆ ಕಾರಣವಾದ ಎಂ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತ ಘಟನೆಗೆ 'ಸಾಮೂಹಿಕ ಉನ್ಮಾದ'ವೇ ಕಾರಣ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಹೇಳಿದ್ದಾರೆ

ಜೂನ್ 4 ರಂದು ನಡೆದ ಕಾಲ್ತುಳಿತದ ಕುರಿತು ವಿಧಾನಸಭೆಯಲ್ಲಿ ನಡೆದ ಚರ್ಚೆಗೆ ಉತ್ತರಿಸಿದ ಅವರು, ಪ್ರೇಮ್ ಸಿಂಗ್ ಧುಮಾಲ್ ಮುಖ್ಯಮಂತ್ರಿಯಾಗಿದ್ದಾಗ ಹಿಮಾಚಲ ಪ್ರದೇಶದ ಬಿಲಾಸ್ಪುರ್ ಜಿಲ್ಲೆಯ ನೈನಾ ದೇವಿ ದೇವಸ್ಥಾನದಲ್ಲಿ 2008ರ ಆಗಸ್ಟ್ 3 ರಂದು ಸಂಭವಿಸಿದ ಕಾಲ್ತುಳಿತದಿಂದ ಪ್ರಾರಂಭಿಸಿ, 2008 ರಲ್ಲಿ ಜೋಧ್‌ಪುರದಲ್ಲಿ 250 ಜನರನ್ನು ಬಲಿತೆಗೆದುಕೊಂಡ ಕಾಲ್ತುಳಿತದ ಪಟ್ಟಿಯನ್ನು ಓದಿದರು.

ಅವರು ಉಲ್ಲೇಖಿಸಿದ ಕಾಲ್ತುಳಿತಗಳಲ್ಲಿ

(2ನೇ ಪುಟ ನೋಡಿ)

## ವಿಧಾನಸಭೆ ಮುಂಗಾರು ಅಧಿವೇಶನಕ್ಕೆ ತೆರೆ 39 ಮಸೂದೆ ಅಂಗೀಕಾರ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಅ.22: ಎರಡು ವಾರಗಳ ಕಾಲ ನಡೆದ ವಿಧಾನಸಭೆಯ ಮುಂಗಾರು ಅಧಿವೇಶನಕ್ಕೆ ಶುಕ್ರವಾರ ಅಧಿಕೃತವಾಗಿ ತೆರೆ ಬಿದಿದ್ದು, ಪ್ರತಿಪಕ್ಷಗಳ ವಿರೋಧದ ನಡವೆಯೇ ಒಟ್ಟು 39 ಮಸೂದೆಗಳನ್ನು ಅಂಗೀಕರಿಸಲಾಗಿದೆ.

ಈ ಬಗ್ಗೆ ಅಧಿವೇಶನದ ಸಮಾರೋಪದ ವೇಳೆ ಮಾಹಿತಿ ನೀಡಿರುವ ವಿಧಾನಸಭೆಯ ಸ್ಪೀಕರ್ ಯು ಟಿ ಖಾದರ್ ಅವರು, ಕಳೆದ 9 ದಿನಗಳಲ್ಲಿ ಒಟ್ಟು 70 ಗಂಟೆಗಳ ಕಾಲ ಅಧಿವೇಶನ ನಡೆಸಲಾಗಿದೆ ಎಂದು ಹೇಳಿದ್ದಾರೆ.

ಈ ಬಾರಿಯ ಮುಂಗಾರು ಅಧಿವೇಶನದಲ್ಲಿ ಅತಿ ಹೆಚ್ಚು ಅಂದರೆ 39 ವಿಧೇಯಕಗಳನ್ನು ಆಡಳಿತ ಪಕ್ಷ ಮಂಡನೆ ಮಾಡಿ ಅದಕ್ಕೆ ಅನುಮೋದನೆ ಪಡೆದಿದ್ದು, ಒಂದು ಇತಿಹಾಸ ಸೃಷ್ಟಿಯಾಗಿದೆ. ಇತಿಹಾಸದಲ್ಲೇ ಮೊದಲ ಬಾರಿಗೆ ಅತಿ ಹೆಚ್ಚು ಮಸೂದೆಗಳ ಮಂಡನೆ ಮಾಡಿ, ಅನುಮೋದನೆ ನೀಡಲಾಗಿದೆ. ಇದಕ್ಕೆ ಸಹಕರಿಸಿದ ಎಲ್ಲ ಆಡಳಿತ ಮತ್ತು ವಿಪಕ್ಷಗಳ ಶಾಸಕರಿಗೆ ಧನ್ಯವಾದ ಸಲ್ಲಿಸುತ್ತೇನೆ ಎಂದು ಸ್ಪೀಕರ್ ತಿಳಿಸಿದ್ದಾರೆ.

ಈ ಮೊದಲು ಅಧಿವೇಶನಗಳಲ್ಲಿ ಸುಮಾರು 20 ವಿಧೇಯಕಗಳ ಮಂಡನೆಯಾಗುತ್ತಿದ್ದವು. ಆದರೆ ಈ ಬಾರಿಯ ಅಧಿವೇಶನದಲ್ಲಿ ಅದಕ್ಕೂ ಎರಡು ಪಟ್ಟು ವಿಧೇಯಕಗಳ ಮಂಡನೆ ಮಾಡಿ ಅವುಗಳಿಗೆ ಅನುಮೋದನೆ ಪಡೆದದ್ದು ದಾಖಲೆಯಾಗಿದೆ.

ಮುಂಗಾರು ಅಧಿವೇಶನದಲ್ಲಿ ಒಟ್ಟು 2,306 ಪ್ರಶ್ನೆಗಳು ಸ್ವೀಕೃತವಾಗಿದ್ದು, ಈ ಪೈಕಿ 2,199 ಪ್ರಶ್ನೆಗಳನ್ನು ಅಂಗೀಕರಿಸಲಾಗಿತ್ತು.

## 'ಬೂಕರ್' ಪ್ರಶಸ್ತಿ ವಿಜೇತೆ ಬಾನು ಮುಷ್ತಾಕ್‌ರಿಂದ ಮೈಸೂರು ದಸರಾ ಉದ್ಘಾಟನೆ: ಸಿಎಂ ಘೋಷಣೆ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಅ.22: ಪ್ರತಿಷ್ಠಿತ ಬೂಕರ್ ಪ್ರಶಸ್ತಿ ವಿಜೇತರಾದ ಬಾನು ಮುಷ್ತಾಕ್ ಅವರು ಈ ಬಾರಿ ವಿಶ್ವವಿಖ್ಯಾತ ಮೈಸೂರು ದಸರಾವನ್ನು ಉದ್ಘಾಟಿಸಲಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ ಘೋಷಿಸಿದ್ದಾರೆ.

ಇಂದು ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ ಸಿದ್ದರಾಮಯ್ಯ ಅವರು, ಬಾನು ಮುಷ್ತಾಕ್ ಅವರ 'ಹೃದಯ ದೀಪ' ಕೃತಿಗೆ ಬೂಕರ್ ಪ್ರಶಸ್ತಿ ಸಿಕ್ಕಿದೆ. ಕರ್ನಾಟಕದ ಮಹಿಳೆಗೆ ಬೂಕರ್ ಸಿಕ್ಕಿದ್ದು ಬಹಳ ಸಂತೋಷವಾಗಿದೆ. ಹೋರಾಟದ ಹಿನ್ನೆಲೆಯಿಂದ ಬಂದವರು ಬಾನು ಮುಷ್ತಾಕ್. ರೈತ ಮತ್ತು ಕನ್ನಡ ಚಳವಳಿಯಲ್ಲೂ ಕೆಲಸ ಮಾಡಿದ್ದಾರೆ. ಹೀಗಾಗಿ ಅವರನ್ನು ದಸರಾ ಮಹೋತ್ಸವದ ಉದ್ಘಾಟನೆಗೆ ಆಹ್ವಾನಿಸಿದ್ದೇವೆ ಎಂದರು.

ಈ ಬಾರಿ ಮೈಸೂರು ದಸರಾ ಸೆಪ್ಟೆಂಬರ್ 22ರಿಂದ ಅಕ್ಟೋಬರ್ 2ರವರೆಗೆ 11 ದಿನಗಳ ಕಾಲ ನಡೆಯಲಿದ್ದು, ಉದ್ಘಾಟನೆಗೆ ಮೈಸೂರು ಜಿಲ್ಲಾಡಳಿತವು, ಕನ್ನಡದ ಲೇಖಕಿ ಬಾನು ಮುಷ್ತಾಕ್

ಅವರನ್ನು ಗೌರವದಿಂದ ಅಧಿಕೃತವಾಗಿ ಆಹ್ವಾನಿಸಲಿದೆ ಎಂದು ಸಿಎಂ ತಿಳಿಸಿದರು.

ಇನ್ನು ದಸರಾದಲ್ಲಿ ಏರ್ ಶೋಗೆ ಅನುಮತಿ ಸಿಕ್ಕಿದೆ. ಇದಕ್ಕಾಗಿ ನಾನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರಿಗೆ ಪತ್ರ ಬರೆದಿದ್ದೆ. ಅವರಿಗೂ ದಸರಾಗೆ ಆಹ್ವಾನಿಸಿದ್ದೇನೆ ಎಂದು ಸಿಎಂ ಹೇಳಿದರು.

## ಆನ್‌ಲೈನ್ ಗೇಮಿಂಗ್ ಮಸೂದೆಗೆ ರಾಷ್ಟ್ರಪತಿ ಅಂಕಿತ



ಮಲ್ಲಮ್ಮನುಡಿವಾರ್ತೆ ನವದೆಹಲಿ:ಅ.22: ಸಂಸತ್ತಿನ ಉಭಯ ಸದನಗಳಲ್ಲಿ ಅಂಗೀಕಾರವಾಗಿದ್ದ ಆನ್‌ಲೈನ್ ಗೇಮ್‌ಗಳನ್ನು ನಿಷೇಧಿಸುವ ಮಸೂದೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಶುಕ್ರವಾರ ಅಂಕಿತ ಹಾಕಿದ್ದಾರೆ.

ಹಣ ಕಟ್ಟಿ ಆಡಲಾಗುವ ಎಲ್ಲಾ ಆನ್‌ಲೈನ್ ಗೇಮ್‌ಗಳನ್ನು ಕಾನೂನು ನಿಷೇಧಿಸುತ್ತದೆ. ಆನ್‌ಲೈನ್ ಗೇಮ್ ಆಡುವುದಕ್ಕೆ ಅವಕಾಶ ಹಾಗೂ ಪ್ರೋತ್ಸಾಹ ನೀಡುವವರಿಗೆ 3 ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು 1 ಕೋಟಿಯವರೆಗೆ ದಂಡ ವಿಧಿಸಲಾಗುವುದು.

ಅಂತಹ ಆಟಗಳ ಕುರಿತು ಜಾಹೀರಾತು ಪ್ರಕಟಿಸಿದರೆ ಎರಡು ವರ್ಷಗಳವರೆಗೆ ಶಿಕ್ಷೆ ಮತ್ತು 50 ಲಕ್ಷ ದಂಡ ವಿಧಿಸಬಹುದಾಗಿದೆ. ಅಪರಾಧಗಳ ಪುನರಾವರ್ತನೆ ಕಂಡುಬಂದಲ್ಲಿ 3-5 ವರ್ಷ ಜೈಲು ಮತ್ತು 2 ಕೋಟಿ ವರೆಗೆ ದಂಡ ವಿಧಿಸಬಹುದಾಗಿದೆ.

ಆನ್‌ಲೈನ್ ಗೇಮ್ ಒಂದು ವ್ಯಸನವಾಗಿ ಮಾರ್ಪಟ್ಟಿದೆ. ಇದಕ್ಕೆ ಮಾರುಹೋಗುವವರ ಸಂಖ್ಯೆಯೂ ಹೆಚ್ಚುತ್ತಿದೆ. ಈ ಗೇಮಿಂಗ್ ಆಪ್‌ಗಳ ಮೂಲಕ ಹಣ ಅಕ್ರಮ ವರ್ಗಾವಣೆ ಆಗುತ್ತಿದೆ. ಅಲ್ಲದೇ, ಹಣಕಾಸು ವಂಚನೆ ಪ್ರಕರಣಗಳು ಹೆಚ್ಚುತ್ತಿವೆ. ಇದಕ್ಕೆ ಕಡಿವಾಣ ಹಾಕಲು ಕೇಂದ್ರ ಸರ್ಕಾರ ಈ ಮಸೂದೆ ರೂಪಿಸಿದೆ.

## ಇಂದಿನಿಂದ ಹಿಂದುಳಿದ ವರ್ಗಗಳ ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು: ಆ.22: ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ನಾಳೆ ಆಗಸ್ಟ್ 23 ರಿಂದ ಪ್ರಾರಂಭಿಸುತ್ತಿದೆ, ವಿದ್ಯುತ್ ಮೀಟರ್ ರೀಡರುಗಳು ಎಲ್ಲ ಮನೆಗಳನ್ನು ಜಿಯೋಟ್ಯಾಗಿಂಗ್ ಮಾಡುವ ಕಾರ್ಯ ಪ್ರಾರಂಭಿಸಲಿದ್ದಾರೆ. ಯಾವುದೇ ಮನೆಗಳು ತಪ್ಪಿ ಹೋಗದಂತೆ ಯಶಸ್ವಿಯಾಗಿ ಸಮೀಕ್ಷೆ ಕೈಗೊಳ್ಳಲು ರಾಜ್ಯದ ಜನತೆ ಸಹಕರಿಸಬೇಕು ಎಂದು ಆಯೋಗದ ಅಧ್ಯಕ್ಷ ಮಧುಸೂಧನ್ ಆರ್ ನಾಯ್ಕ ತಿಳಿಸಿದ್ದಾರೆ.

ಈ ಕುರಿತು ಮಾಧ್ಯಮ ಪ್ರಕಟಣೆ ನೀಡಿರುವ ಅವರು, ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು 90 ದಿನಗಳಲ್ಲಿ ಪೂರ್ಣಗೊಳಿಸುವ ಬದ್ಧತೆಯೊಂದಿಗೆ ಹಮ್ಮಿಕೊಳ್ಳಲಾಗಿದೆ. ಮೊದಲ ಹಂತದಲ್ಲಿ ಸಮೀಕ್ಷೆಗೆ ಸಂಬಂಧಿಸಿದ ಪೂರ್ವಭಾವಿ ಕೆಲಸಗಳಾಗಿರುವ ಮನೆ ಪಟ್ಟಿ ಮತ್ತು ಅವುಗಳ ನಕ್ಷೆ (ಮ್ಯಾಪಿಂಗ್) ಸಿದ್ಧಪಡಿಸುವ ಕಾರ್ಯವನ್ನು ಒಳಗೊಂಡಿರುತ್ತದೆ. ಅದು ರಾಜ್ಯದಾದ್ಯಂತ ಎಲ್ಲಾ ಮನೆಗಳ ಸಂಪೂರ್ಣ ಎಣಿಕೆ, ಅನುಕ್ರಮ ಸಂಖ್ಯೆಗಳನ್ನು ನೀಡುವುದು ಮತ್ತು ಮ್ಯಾಪಿಂಗ್ ಮಾಡುವ ಕೆಲಸವನ್ನು ಸಾಧ್ಯವಾಗಿಸುತ್ತದೆ. ರಾಜ್ಯದಲ್ಲಿರುವ ಎಲ್ಲಾ ವಾಸದ ಮನೆಗಳಿಗೆ ವಿದ್ಯುತ್ ಸಂಪರ್ಕವಿರುವುದರಿಂದ ವಾಸದ ಮನೆಗಳ ಆರ್. ಆರ್. ಮೀಟರ್ ಆಧಾರದ ಮೇಲೆ ಮನೆಗಳನ್ನು ಗುರುತಿಸಿ ಅಲ್ಲಿರುವ ಜನರ ಸಮೀಕ್ಷೆ

(2ನೇ ಪುಟ ನೋಡಿ)

## ಭೀಮೆಗೆ ಒಳ ಹರಿವು ಹೆಚ್ಚಾದಲ್ಲಿ ನದಿ ದಂಡೆಯ ಜನರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಿ:ಬಿ.ಫೌಜಿಯಾ ತರನ್ನುಮ್



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಆ.22: ಮಹಾರಾಷ್ಟ್ರದ ವೀರ್ ಮತ್ತು ಉಜನಿ ಜಲಾಶಯದಿಂದ ಅಪಾರ ಪ್ರಮಾಣದಲ್ಲಿ ನೀರು ಭೀಮಾ ನದಿಗೆ ಹರಿಬಿಡಲಾಗುತ್ತಿದ್ದು, ಮುಂದೆ ಇದು ಇನ್ನು ಹೆಚ್ಚಾದಲ್ಲಿ ನದಿ ದಂಡೆಯಲ್ಲಿರುವ ಗ್ರಾಮಸ್ಥರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲು ಎಲ್ಲಾ ಅಗತ್ಯ ಕ್ರಮ ತೆಗೆದುಕೊಳ್ಳಬೇಕೆಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶುಕ್ರವಾರ ಅಫಜಲಪೂರಗೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು ತಾಲೂಕಾ ಮಟ್ಟದ ಅಧಿಕಾರಿಗಳ ಸಭೆ ನಡೆಸಿ, ತಾಲೂಕು ಮತ್ತು ಗ್ರಾಮ ಮಟ್ಟದ ಎಲ್ಲಾ ಹಂತದ ಅಧಿಕಾರಿ-ಸಿಬ್ಬಂದಿಗಳು ಕೇಂದ್ರಸ್ಥಾನದಲ್ಲಿದ್ದು ಜನ ಮತ್ತು ಜಾನವಾರುಗಳ ಪ್ರಾಣ ಹಾನಿಯಾಗದಂತೆ ಎಚ್ಚರಿಕೆ ವಹಿಸಬೇಕು. ಸಾರ್ವಜನಿಕರು ನದಿ ದಂಡೆ ಕಡೆ ಬಟ್ಟೆ ಒಗೆಯಲು, ದನ-ಕರು ಮೇಯಿಸಲು ಹೋಗದಂತೆ ಗ್ರಾಮವಾರು ಡಂಗೂರ ಸಾರಬೇಕು ಎಂದರು.

ತಾಲೂಕಿನ ಧಾರ್ಮಿಕ ಸ್ಥಾನಗಳಾದ ದೇವಲ ಗಾಣಗಾಪೂರ ಮತ್ತು ಘತ್ತರಗಾ ಬಳಿ ಸೇತುವೆ ಮೇಲೆ ನೀರು ಹರಿದು ಸಂಪರ್ಕ ಕಡಿತಗೊಂಡಲ್ಲಿ ಭಕ್ತಾದಿಗಳು ಸಂಕಷ್ಟಕ್ಕೆ ಸಿಲುಕುವ

(2ನೇ ಪುಟ ನೋಡಿ)

## ಕಲಬುರಗಿಯಲ್ಲಿ ಗಣೇಶ ಹಬ್ಬ ಆಚರಣೆಗೆ ಷರತ್ತು ಬಿಜೆಪಿಯಿಂದ ವಿಧಾನ ಪರಿಷತ್‌ನಲ್ಲಿ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಅ.22: ಕಲಬುರಗಿಯಲ್ಲಿ ಗಣೇಶ ಹಬ್ಬ ಆಚರಣೆಗೆ ವಿಧಿಸಿರುವ ಷರತ್ತುಗಳ ವಿರುದ್ಧ ವಿಧಾನ ಪರಿಷತ್ ಕಲಾಪದಲ್ಲಿ ಬಿಜೆಪಿ ಸದಸ್ಯರು ಪ್ರತಿಭಟನೆ ನಡೆಸಿದರು.

ಬಿಜೆಪಿ ಸದಸ್ಯ ಶಶೀಲ್ ನಮೋಶಿ ವಿಷಯ ಪ್ರಸ್ತಾಪ ಮಾಡಿ, ಗಣೇಶ ಹಬ್ಬಕ್ಕೆ ನಮ್ಮ ಜಿಲ್ಲೆಯಲ್ಲಿ ಡಿಜೆ, ಸೌಂಡ್ ಹಾಕಬಾರದು ಎಂದು ಸರ್ಕಾರ ಆದೇಶ ಮಾಡಿದೆ. ಬೆಂಗಳೂರಿನಲ್ಲಿ ಇಲ್ಲದ ನಿಯಮ ನಮಗೆ ಯಾಕೆ? ನಮ್ಮ ಜಿಲ್ಲೆಯಲ್ಲಿ ಗಣೇಶ ಹಬ್ಬ ವಿಜೃಂಭಣೆಯಿಂದ ಮಾಡಲು ಅವಕಾಶ ಕೊಡಿ. ಸ್ವಾತಂತ್ರ್ಯಕ್ಕಾಗಿ ತಿಲಕರು ಹಬ್ಬ ಶುರು ಮಾಡಿದರು. ಆಗ ಬ್ರಿಟಿಷರೇ ಅದಕ್ಕೆ ಅವಕಾಶ ಕೊಟ್ಟಿದ್ದರು. ಈಗ ಯಾಕೆ ಕಂಡೀಷನ್ ಹಾಕ್ತೀರಾ? ಎಂದು ಸರ್ಕಾರದ ವಿರುದ್ಧ ಕಿಡಿಕಾರಿದರು.

ಪ್ರದೀಪ್ ಶೆಟ್ಟರ್ ಮಾತನಾಡಿ, ಹಿಂದೂ ಹಬ್ಬಕ್ಕೆ ಯಾಕೆ ನಿಯಮ ಹಾಕ್ತೀರಾ? ಬೇರೆ ಅವರು ರಾತ್ರಿ

(2ನೇ ಪುಟ ನೋಡಿ)

# ಒಂದನೇ ಪುಟದಿಂದ

## ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆ

ಮಾಡುವುದರಿಂದ ಯಾವುದೇ ಮನೆಗಳು ಸಮೀಕ್ಷಾ ವ್ಯಾಪ್ತಿಯಿಂದ ತಪ್ಪಿ ಹೋಗುವುದಿಲ್ಲ.

ಇದರಿಂದ ಎರಡನೇ ಹಂತದಲ್ಲಿ ಸಮೀಕ್ಷೆಯ ಕಾರ್ಯವನ್ನು ವ್ಯವಸ್ಥಿತವಾಗಿ ಮತ್ತು ವೈಜ್ಞಾನಿಕವಾಗಿ ಕಾರ್ಯಗತಗೊಳಿಸಲು ಅನುಕೂಲವಾಗುತ್ತದೆ.ಎರಡನೇಯ ಹಂತದ ಸಮೀಕ್ಷೆಯ ಕಾರ್ಯವನ್ನು ದಸರಾ ರಜೆಯ ಅವಧಿಯಲ್ಲಿ 22 ನೇ ಸೆಪ್ಟೆಂಬರ್ ನಿಂದ 7 ನೇ ಅಕ್ಟೋಬರ್ 2025 ರವರೆಗೆ ನಡೆಸಲು ಗುರಿ ಹೊಂದಲಾಗಿದೆ. ಈ ಸಮಯದಲ್ಲಿ ಶಾಲಾ ರಜಾದಿನಗಳು ಇರುವುದರಿಂದ ಸಮೀಕ್ಷೆ ಕಾರ್ಯಕ್ಕೆ ಪೂರಕವಾಗುತ್ತದೆ.

ಇ-ಆಡಳಿತ ಮತ್ತು ಇಂಧನ ಇಲಾಖೆಗಳು ವಿದ್ಯುಚ್ಛಕ್ತಿ ಮೀಟರ್ ಸಂಪರ್ಕದ (ಆರ್.ಆರ್. ನಂಬರ್) ಆಧಾರದ ಮೇಲೆ ವಿನ್ಯಾಸಗೊಳಿಸಿದ ಈ ನವೀನ, ಕ್ರಿಯಾತ್ಮಕ ಮತ್ತು ವಿಶಿಷ್ಟ ವ್ಯವಸ್ಥೆಯು ಉತ್ತಮವಾಗಿದೆ. ಅದಕ್ಕನುಗುಣವಾಗಿ ಒಂದು ಅಗತ್ಯವಾದ 'ಆ್ಯಪ್' ಅಭಿವೃದ್ಧಿಪಡಿಸಲಾಗಿದೆ. ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಸದಸ್ಯರು ಸೇರಿದಂತೆ, ಆಯೋಗದ ಇಂಧನ ಇಲಾಖೆಯ, ಇ.ಡಿ.ಸಿ.ಎಸ್ ಸಂಸ್ಥೆಯ ಉತ್ಸಾಹಿ ಹಾಗೂ ಸೃಜನಶೀಲ ಸಲಹಾ ತಂಡದ ಸಹಕಾರದೊಂದಿಗೆ ಈ ಪ್ರಕ್ರಿಯೆಯನ್ನು ವಿನ್ಯಾಸಗೊಳಿಸಲಾಗಿದೆ. ಸಮೀಕ್ಷೆಯ ಕಾರ್ಯವನ್ನು ತ್ವರಿತವಾಗಿ ಪ್ರಾರಂಭಿಸಲು ಸಹಾಯ ಮಾಡುತ್ತದೆ.

ಇದು ರಾಜ್ಯದಾದ್ಯಂತ ಇರುವ ಇಂಧನ ಇಲಾಖೆಯ ಎಲ್ಲ ವಿದ್ಯುತ್ ಸರಬರಾಜು ಕಂಪನಿಗಳ (ಇಖಅಔಐ) ಗಳ ಅಪಾರ ಸಂಖ್ಯೆಯ 'ಮೀಟರ್ ರೀಡರ್' (ಒಜಣಜಡಿ ಖಜಚಿಜಜಥಿ) ಗಳನ್ನು ಒಳಗೊಂಡಿರುತ್ತದೆ. ಕರ್ನಾಟಕ ರಾಜ್ಯವು ಎಲ್ಲಾ ಮನೆಗಳನ್ನು ವಿದ್ಯುದ್ದೀಕರಣ ಗೊಳಿಸುವುದರಲ್ಲಿ ದೇಶದಲ್ಲಿಯೇ ಪ್ರಥಮ ಸ್ಥಾನದಲ್ಲಿದೆ ಎಂಬುದು ಹೆಮ್ಮೆಯ ವಿಷಯವಾಗಿರುವುದರಿಂದ ಎಸ್ಕಾಂಗಳ ಮೀಟರ್ ರೀಡರ್ ಗಳು, ಗ್ರಾಹಕರ ಮನೆ ಬಳಕೆ ವಿದ್ಯುತ್ ಸಂಪರ್ಕದ ಮೀಟರ್ ಅನ್ನು ಓದುವುದು ಮತ್ತು ಬಿಲಿಂಗ್ ಮಾಡುವುದರ ಜೊತೆಗೆ ಮನೆಗಳನ್ನು 'ಜಿಯೋ ಟ್ಯಾಗ್' ಮಾಡಿ, ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ವ್ಯಾಪ್ತಿಗೆ ಒಳಪಟಿಸುತ್ತಾರೆ.

ಮೀಟರ್ ರೀಡರ್ ಗಳು ಸೆರೆಹಿಡಿದ ಮನೆ ಪಟ್ಟಿ ಡೇಟಾವನ್ನು ಇಆಅಖ (ನಾಗರಿಕ ಸೇವೆಗಳ ಎಲೆಕ್ಟ್ರಾನಿಕ್ ವಿತರಣೆ) ನ ಸರ್ವರ್‌ಗಳಲ್ಲಿ ಅಪ್‌ಲೋಡ್ ಮಾಡಲಾಗುತ್ತದೆ. ನಂತರ ದ್ವಿತೀಯ ದತ್ತಾಂಶಗಳನ್ನು ಆಧರಿಸಿ, ಮೌಲೀಕರಿಸಿದ ನಂತರ 'ಮನೆ ಪಟ್ಟಿ' ಸಮೀಕ್ಷೆಯ ಉದ್ದೇಶಕ್ಕಾಗಿ 'ಮ್ಯಾಪಿಂಗ್' ಮಾಡಲಾಗುತ್ತದೆ. ಅಭಿವೃದ್ಧಿಪಡಿಸಲಾದ ಅಪ್ಲಿಕೇಶನ್ ನಲ್ಲಿ ಮನೆಯ 'ಸ್ಥಳ' (ಐಠಛಿಚಿಣಿಠಿ) ವನ್ನು ಸೆರೆಹಿಡಿಯಲಾಗುತ್ತದೆ ಮತ್ತು ಪ್ರತಿ ಮನೆಗಳಿಗೆ 'ವಿಶಿಷ್ಟ (ಗಟಿಡಣಜ ಓಣಟಭಜಡಿ) ಸಂಖ್ಯೆಯನ್ನು' ನೀಡಲಾಗುತ್ತದೆ. [ಅಪಾರ್ಟ್ ಮೆಂಟ್ ಗಳು / ವಾಸಸ್ಥಳಗಳ ಕ್ಲಸ್ಟರ್ ಸೇರಿದಂತೆ].

ತಮ್ಮ 'ಬಿಲ್ಲಿಂಗ್ ಸೈಕಲ್'ನಲ್ಲಿ ಮೀಟರ್ ರೀಡರ್ ಗಳು ಆಗಸ್ಟ್ 23, 2025 ರಿಂದ ಸದರಿ ಕೆಲಸವನ್ನು ಪ್ರಾರಂಭಿಸುತ್ತಾರೆ ಮತ್ತು ಅಭಿವೃದ್ಧಿ ಪಡಿಸಲಾದ ಆ್ಯಪ್ ನಲ್ಲಿ ದಾಖಲಿಸುತ್ತಾರೆ. ಇದಾದ ನಂತರ ಪ್ರತಿ ಮನೆಗೂ ಸ್ಟಿಕ್ಕರ್ ಅಂಟಿಸಿ ಸಮೀಕ್ಷಾ ದಾರರಿಗೆ ಮನೆಯ ಗುರುತಿಸುವಿಕೆ ಸುಲಭವಾಗುವಂತೆ ಮಾತ್ತಾರೆ.

ಪ್ರಸ್ತಾವಿತ ಸಮೀಕ್ಷೆಯು ಹಿಂದುಳಿದ ವರ್ಗಗಳು ಮತ್ತು ಇತರ ಎಲ್ಲಾ ಜನರ 'ದತ್ತಾಂಶಗಳನ್ನು ಸೆರೆಹಿಡಿಯುವುದು' ಮಾತ್ರವಲ್ಲದೆ, ಅಂದಾಜು 7 ಕೋಟಿ ಜನರಿಗೆ ಸರ್ಕಾರಿ ಇಲಾಖೆಗಳಿಂದ ಪ್ರಾರಂಭಿಸಲಾಗಿರುವ ಹಾಗೂ ಮುಂದೆ ಪ್ರಾರಂಭಿಸಲಿರುವ ಎಲ್ಲಾ ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಬಳಸಬಹುದಾದ ಉಪಯುಕ್ತ ದತ್ತಾಂಶವಾಗಲಿದೆ.

ಮನೆ ಪಟ್ಟಿ ಕಾರ್ಯಾಚರಣೆಗಳ ಈ ಮೊದಲ ಹಂತವು ತುಂಬಾ ಸವಾಲಿನದ್ದಾಗಿದ್ದರೂ ರಾಜ್ಯದ ಎಲ್ಲಾ ಮನೆಗಳನ್ನು ಒಳಗೊಂಡಂತೆ ವ್ಯವಸ್ಥಿತವಾಗಿ ಸಮೀಕ್ಷೆಯನ್ನು ನಡೆಸುವ ಉದ್ದೇಶಕ್ಕಾಗಿ ಇದು ಬಹಳ ಪ್ರಮುಖ ಕಾರ್ಯವಾಗಿದೆ. ಆದ್ದರಿಂದ, ಸಾರ್ವಜನಿಕರು ಮತ್ತು ಪ್ರತಿಯೊಂದು ಕುಟುಂಬದ ಸದಸ್ಯರು [ವಿಶೇಷವಾಗಿ ಅಪಾರ್ಟ್‌ಮೆಂಟ್ ಮತ್ತು ಕ್ಲಸ್ಟರ್ ವಾಸಸ್ಥಳಗಳಲ್ಲಿ ವಾಸಿಸುವವರು] ಮೀಟರ್ ರೀಡರ್ ಗಳಿಗೆ ವಹಿಸಲಾಗಿರುವ ಮನೆ ಪಟ್ಟಿ ಕೆಲಸವನ್ನು ಸುಗಮವಾಗಿ ಪೂರ್ಣಗೊಳಿಸುವ ದಿಸೆಯಲ್ಲಿ ಸಹಕರಿಸಲು ಮತ್ತು ಅನುಕೂಲ ಮಾಡಿಕೊಡಲು ಆಯೋಗ ಮನವಿ ಮಾಡಿದೆ.

## ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಿ:ಬಿ.ಫೌಜಿಯಾ ತರನ್ನುಮ್

ಸಾಧ್ಯತೆ ಇದ್ದು, ಇಂತಹ ಸಮಯದಲ್ಲಿ ಸ್ಥಳೀಯ ಆಡಳಿತ ಅವರ ನೆರವಿಗೆ ಧಾವಿಸಬೇಕು ಎಂದು ತಾಲೂಕಾ ಅಧಿಕಾರಿಗಳಿಗೆ ಡಿ.ಸಿ. ನಿರ್ದೇಶನ ಅನೀಡಿದರು.

ಪ್ರವಾಹ ಪೀಡಿತ ಪ್ರದೇಶದಲ್ಲಿ ಬೆಳೆ ಹಾನಿ ಸಮೀಕ್ಷೆ ಕೈಗೊಂಡು ವರದಿ ಸಲಿಸಬೇಕು. ಮನೆ ಕುಸಿದು ಬಿದ್ದಲ್ಲಿ, ಭಾಗಶ: ಹಾನಿಯಯಾದಲ್ಲಿ ಎನ್.ಡಿ.ಆರ್.ಎಫ್./ ಎಸ್.ಡಿ.ಆರ್.ಎಫ್. ನಿಯಮಾವಳಿ ಪ್ರಕಾರ ತಕ್ಷಣವೇ ಪರಿಹಾರ ಒದಗಿಸಬೇಕು. ಸತತ ಮಳೆಯಾಗುತ್ತಿರುವುದರಿಂದ ಸಾಂಕ್ರಾಮಿಕ ರೋಗಗಳ ಕಾಟ ಹೆಚ್ಚಲಿದ್ದು, ಆರೋಗ್ಯ ಇಲಾಖೆ ಇದರ ನಿಯಂತ್ರಣಕ್ಕೆ ಮುಂದಾಗಬೇಕು. ಹಳ್ಳಿಯಲ್ಲಿ ಜನರಿಗೆ ಶುದ್ಧ ಕುಡಿಯುವ ನೀರು ಪೂರೈಕೆಯಾಗುವಂತೆ ನೋಡಿಕೊಳ್ಳಬೇಕೆಂದ ಅವರು ಒಟ್ಟಾರೆಯಾಗಿ ಗ್ರಾಮವಾರು ಟಾಸ್ಟ್ ಫೋರ್ಸ್ ಕಮಿಟಿ ಚುರುಕಾಗಬೇಕು ಎಂದರು.

ಸೊನ್ನ-ಘತ್ತರಗಾ ಬ್ಯಾರೇಜ್ ವೀಕ್ಷಣೆ: ಗುರುವಾರ ಅಪಾರ ಪ್ರಮಾಣದ ನೀರು ವೀರ್ ಜಲಾಶಯದಿಂದ ಹರಿಬಿಟ್ಟಿದ್ದ ಪರಿಣಾಮ ಸೊನ್ನ ಬ್ಯಾರೇಜಿಗೆ ಒಳ ಹರಿವು ಹೆಚ್ಚಾಗಿರುವುದರಿಂದ ಬ್ಯಾರೇಜಿನ ಸ್ಥಿತಿಗತಿ ಅರಿಯಲು ಡಿ.ಸಿ. ಬಿ.ಫೌಜಿಯಾ ತರನ್ನುಮ್ ಅವರು ಅಧಿಕಾರಿಗಳೊಂದಿಗೆ ಬ್ಯಾರೇಜಿಗೆ ಭೇಟಿ ನೀಡಿ ಒಳ ಹರಿವು ಹಾಗೂ ಹೊರ ಹರಿವಿನ ಮಾಹಿತಿ ಪಡೆದರು. ತದನಂತರ ಘತ್ತರಗಾ ಸೇತುವೆಗೆ ಭೇಟಿ ನೀಡಿ ಅಲ್ಲಿ ಭಕ್ತಾಧಿಗಳೊಂದಿಗೆ ಸಮಾಲೋಚನೆ ನಡೆಸಿದ ಅವರು, ಬ್ರಿಡ್ಜ್ ಮೇಲೆ ನೀರು ಬಂದಿರುವುದರಿಂದ ಅಪಾಯ ಮಟ್ಟದಲ್ಲಿದ್ದು, ಯಾರು ನದಿ ದಂಡೆ ಮತ್ತು ಸೇತುವೆ ಕಡೆ ಹೋಗಬಾರದು ಎಂದು ಮನವಿ ಮಾಡಿದರು.

ಜಿಲ್ಲಾ ಪಂಚಾಯತ್ ಸಿ.ಇ.ಓ ಭವರ್ ಸಿಂಗ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು, ಸಹಾಯಕ ಆಯುಕ್ತೆ ಸಾಹಿತ್ಯ, ತಹಶೀಲ್ದಾರ ಸಂಜೀವ್ ಕುಮಾರ್ ದಾಸರ್, ಕೆ.ಬಿ.ಜೆ.ಎನ್.ಎಲ್ ರಾಂಪೂರ್ ವಿಭಾಗದ ಅಧೀಕ್ಷಕ ಅಭಿಯಂತ ಮನೋಜಕುಮಾರ, ಕೆ.ಎನ್.ಎನ್.ಎಲ್ ಬಿ.ಎಲ್.ಐ.ಎಸ್. ವಿಭಾಗದ ಇ.ಇ ಶಿವಕುಮಾರ ಸ್ವಾಮಿ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಕಾಲ್ತುಳಿತ ಘಟನೆ: ಸಿಎಂ ಸಿದ್ದರಾಮಯ್ಯ

2013 ರಲ್ಲಿ ರತನ್‌ಗಢ, 2021 ರಲ್ಲಿ ಹರಿದ್ವಾರ, 2023 ರಲ್ಲಿ ಮಧ್ಯಪ್ರದೇಶದ ಸೆಹೋರ್ ಮತ್ತು 2024 ರಲ್ಲಿ 121 ಜನರು ಸಾವಿಗೀಡಾದ ಉತ್ತರ ಪ್ರದೇಶದ ಹತ್ರಾಸ್ ಸೇರಿವೆ. ಈ ವರ್ಷದ ಜನವರಿಯಲ್ಲಿ 39 ಜನರ ಪ್ರಾಣವನ್ನು ಬಲಿತೆಗೆದುಕೊಂಡ ಕುಂಭಮೇಳದ ಸಮಯದಲ್ಲಿ ಪ್ರಯಾಗ್‌ರಾಜ್‌ನಲ್ಲಿ ನಡೆದ ಕಾಲ್ತುಳಿತದ ಬಗ್ಗೆಯೂ ಅವರು ಮಾತನಾಡಿದರು.

2022ರಲ್ಲಿ ಗುಜರಾತ್‌ನ ಮೊರ್ಬಿ ಸೇತುವೆ ಕುಸಿತದಿಂದಾಗಿ 135 ಜನರು ಸಾವಿಗೀಡಾದ ಬಗ್ಗೆಯೂ ಸಿಎಂ ಪ್ರಸ್ತಾಪಿಸಿದರು.

ಪ್ರಯಾಗ್‌ರಾಜ್‌ನಲ್ಲಿ ಕುಂಭಮೇಳದ ಕಾಲ್ತುಳಿತದಲ್ಲಿ 39 ಜನರು ಸಾವಿಗೀಡಾದ ನಂತರ 'ಯೋಗಿ ಆದಿತ್ಯನಾಥ್ ಯುಪಿ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆಯೇ' ಎಂದು ಸಿದ್ದರಾಮಯ್ಯ ಪ್ರಶ್ನಿಸಿದರು.

'ನನ್ನ 42 ವರ್ಷಗಳ ರಾಜಕೀಯ ಜೀವನದಲ್ಲಿ, ಅಂತಹ ಘಟನೆ ಎಂದಿಗೂ ನಡೆದಿಲ್ಲ. ಕಾಲ್ತುಳಿತದಲ್ಲಿ 11 ಜನರು ಸಾಯುವುದನ್ನು ನಾನು ಎಂದಿಗೂ ನೋಡಿರಲಿಲ್ಲ. ನನಗೆ ನೋವಾಗಿದೆ. ಅದೇ ದಿನ ನಾನು ನನ್ನ ದುಃಖವನ್ನು ವ್ಯಕ್ತಪಡಿಸಿದೆ' ಎಂದು ಮುಖ್ಯಮಂತ್ರಿ ಹೇಳಿದರು.

'ಐಪಿಎಲ್ ಪಂದ್ಯದಲ್ಲಿ ಆರ್‌ಸಿಬಿಯ ಗೆಲುವನ್ನು ಜನರು ಬೆಂಗಳೂರಿನ ಹೆಮ್ಮೆ ಎಂದು ಗ್ರಹಿಸಿದ್ದಾರೆ. ಅದ-ರಿಂದ ಸೃಷ್ಟಿಯಾದ ಸಾಮೂಹಿಕ ಉನ್ಮಾದವೇ ಈ ಕಾಲ್ತುಳಿತದ ಹಿಂದಿನ ಕಾರಣವಾಗಿದೆ. ಪ್ರಜಾಪ್ರಭುತ್ವದಲ್ಲಿ ನಾವು ಕೆಲವೊಮ್ಮೆ ಜನರ ನಿರೀಕ್ಷೆಗಳಿಗೆ ತಲೆಬಾಗಬೇಕಾಗುತ್ತದೆ. ಅದು ಪ್ರಜಾಪ್ರಭುತ್ವದ ಸಂಕೇತ. ಹೀಗಾಗಿಯೇ, ಆರ್‌ಸಿಬಿಯ ವಿಜಯೋತ್ಸವದಲ್ಲಿ ಭಾಗವಹಿಸಬೇಕಾಯಿತು' ಎಂದು ಹೇಳಿದರು.

## ಆದೇಶ ನೀಡುವುದು ಬೇಡ: ಮೋದಿ

ನಾವು ನಿರ್ಧರಿಸಿದ್ದೇವೆ. ಅಲ್ಪಾವಧಿಗೆ ಜೈಲಿನಲ್ಲಿದ್ದ ಒಬ್ಬ ಗುಮಾಸ್ತನನ್ನು

ಅಮಾನತುಗೊಳಿಸಲಾಗುತ್ತದೆ. ಆದರೆ ನಾವು ಕಠಿಣ ಕಾನೂನನ್ನು ತಂದಾಗ, ಆರ್‌ಜೆಡಿ, ಕಾಂಗ್ರೆಸ್ ಮತ್ತು ಎಡಪಂಥೀಯರು ಕೋಪಗೊಂಡಿದ್ದಾರೆ. ಅವರು ತಮ್ಮ ಸ್ವಂತ ಪಾಪಗಳಿಗೆ ಶಿಕ್ಷೆಯನ್ನು ಎದುರಿಸುವ ಭಯದಿಂದ ಕೋಪಗೊಂಡಿದ್ದಾರೆ" ಎಂದು ಮೋದಿ ಆರೋಪಿಸಿದ್ದಾರೆ."ಕಾಂಗ್ರೆಸ್ ಮತ್ತು ಆರ್‌ಜೆಡಿ ಅಧಿಕಾರದಲ್ಲಿದ್ದಾಗ, ಸಾರ್ವಜನಿಕ ಹಣದಿಂದ ತಮ್ಮ ಖಜಾನೆಗಳನ್ನು ತುಂಬಿಸಿಕೊಂಡವು. ಈ ಉದ್ದೇಶಕ್ಕಾಗಿ, ಅವರು ಯೋಜನೆಗಳನ್ನು ದೀರ್ಘಕಾಲ ವಿಳಂಬ ಮಾಡುತ್ತಾರೆ. ಇದಕ್ಕೆ ವ್ಯತಿರಿಕ್ತವಾಗಿ, ನಾನು ಇಂದು ಸೇತುವೆಯನ್ನು ಉದ್ಘಾಟಿಸುತ್ತಿದ್ದೇನೆ, ಅದಕ್ಕಾಗಿ ನಾನು ಕೆಲವೇ ವರ್ಷಗಳ ಹಿಂದೆ ಅಡಿಪಾಯ ಹಾಕಿದ್ದೆ" ಎಂದು ಅವರು ಹೇಳಿದರು."ನಮ್ಮ ರಾಷ್ಟ್ರ ಎದುರಿಸುತ್ತಿರುವ ಇನ್ನೊಂದು ಬೆದರಿಕೆ ಇದೆ. ಅದು ಒಳನುಸುಳುವವರ ಬೆದರಿಕೆಯಾಗಿದೆ, ಅದರ ಬಗ್ಗೆ ನಾನು ನನ್ನ ಸ್ವಾತಂತ್ರ್ಯ ದಿನಾಚರಣೆಯ ಭಾಷಣದಲ್ಲಿಯೂ ಮಾತನಾಡಿದ್ದೇನೆ. ಅವರು ನಮ್ಮ ದೇಶದ ಸಂಪನ್ಮೂಲಗಳಲ್ಲಿ ಭಾಗವಹಿಸಲು ಬಿಡಲಾಗುವುದಿಲ್ಲ. ಆದ್ದರಿಂದ, ನಾನು ಡೆಮಾಗ್ರಫಿ ಕಾರ್ಯಾಚರಣೆಗೆ ಕರೆ ನೀಡಿದ್ದೇನೆ. ಆದರೆ ಕಾಂಗ್ರೆಸ್ ಮತ್ತು ಆರ್‌ಜೆಡಿ ತಮ್ಮ ಮತ ಬ್ಯಾಂಕ್ ರಾಜಕೀಯಕ್ಕಾಗಿ ಈ ಒಳನುಸುಳುವವರನ್ನು ರಕ್ಷಿಸಲು ಬಯಸುತ್ತವೆ" ಎಂದು ಮೋದಿ ಆರೋಪಿಸಿದ್ದಾರೆ.ಮತದಾರರ ಪಟ್ಟಿಯಿಂದ "ಬಾಂಗ್ಲಾದೇಶ, ನೇಪಾಳ ಮತ್ತು ಮ್ಯಾನ್ಮಾರ್‌ನಿಂದ ಅಕ್ರಮ ವಲಸಿಗರನ್ನು" ತೆಗೆದುಹಾಕುವುದು ಇದರ ಉದ್ದೇಶಗಳಲ್ಲಿ ಒಂದಾಗಿರುವ ಎಸ್‌ಐಆರ್‌ಗೆ ಈ ಪ್ರಸ್ತಾಪವಿತ್ತು.ವಿಧಾನಸಭಾ ಚುನಾವಣೆಗೆ ಮುಂಚಿತವಾಗಿ ಬಿಹಾರದಲ್ಲಿ ಈ ವ್ಯಾಯಾಮವನ್ನು ಆದೇಶಿಸಿರುವ ಇಸಿ, ದೇಶಾದ್ಯಂತ ಎಸ್‌ಐಆರ್ ಅನ್ನು ಸರಿಯಾದ ಸಮಯದಲ್ಲಿ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದೆ. ಆದಾಗ್ಯೂ, ಬಿಹಾರದಲ್ಲಿ ನಡೆದ ಈ ಕಾರ್ಯಾಚರಣೆಯು ಮತದಾರರ ಹೆಸರುಗಳನ್ನು ತಪ್ಪಾಗಿ ಅಳಿಸುವ ಮೂಲಕ ಬಿಜೆಪಿ ನೇತೃತ್ವದ ಎನ್‌ಡಿಎಗೆ ವಿಧಾನಸಭಾ ಚುನಾವಣೆಯಲ್ಲಿ "ಸಹಾಯ ಮಾಡುವ" ಗುರಿಯನ್ನು ಹೊಂದಿದೆ ಎಂದು ಇಂಡಿಯಾ ಬ್ಲಾಕ್ ಆರೋಪಿಸುತ್ತಿದೆ ಎಂದರು.

## ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರ ಪ್ರವಾಸ

ಕಲಬುರಗಿ:ಆ.22-ರಾಜ್ಯದ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರಾದ ಶರಣಬಸಪ್ಪ ದರ್ಶನಾಪೂರ ಅವರು ಬೆಂಗಳೂರಿನಿಂದ ವಿಮಾನದ ಮೂಲಕ ಆಗಸ್ಟ್ 23 ರಂದು ಶನಿವಾರ ಬೆಳಿಗ್ಗೆ 11.45 ಗಂಟೆಗೆ ಕಲಬುರಗಿಗೆ ಆಗಮಿಸಿ, ಕಲಬುರಗಿ ನಾಗನಹಳ್ಳಿ ರಸ್ತೆಯ ಕೊರಂಟಿ ಹನುಮಾನ ಟೆಂಪಲ್ ಹತ್ತಿರದ (ಜೆಸ್ಟ್ ಕ್ಲಬ್ ಆಂಡ್ ರೆಸಾರ್ಟ್ ಉಪ್ಪಿನ ಫಾರಂ) ದಲ್ಲಿ ಕರ್ಮಯೋಗಿ ಡಾ. ಎಸ್.ಎಸ್. ಪಾಟೀಲರವರ 3ನೇ ಪುಣ್ಯಸ್ಮರಣೆ ಹಾಗೂ ಕರ್ಮಯೋಗಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸುವರು. ನಂತರ ಕಲಬುರಗಿಯಿಂದ ರಸ್ತೆ ಮೂಲಕ ಯಾದಗಿರಿ ಜಿಲ್ಲೆಯ ಶಹಾಪೂರಕ್ಕೆ ಪ್ರಯಾಣಿಸಿ ನಿಗದಿತ ಕಾರ್ಯಕ್ರಮದಲ್ಲಿ ಭಾಗವಹಿಸಿ ನಂತರ ಕಲಬುರಗಿಗೆ ಆಗಮಿಸಿ ವಾಸ್ತವ್ಯ ಮಾಡುವರು.

## ಸಂಘದ ಮನವಿಗೆ ಸ್ಪಂದಿಸಿದ ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್

ವಿಧಾನಸೌಧದ ತಮ್ಮ ಕಚೇರಿಯಲ್ಲಿ ಚರ್ಚಿಸಿದರು.

ಸಂಪಾದಕರ ಸಂಘದ ಪ್ರಮುಖ ಬೇಡಿಕೆಗಳಾದ ಕಳೆದ 5 ವರ್ಷಗಳಿಂದ ಬಾಕಿ ಉಳಿದ ಜಾಹೀರಾತು ದರ ಹೆಚ್ಚಳ, ಒಬಿಸಿ, ಬ್ರಾಹ್ಮಣ ಸಮುದಾಯದ 5 ವರ್ಷದೊಳಗಿನ ಪತ್ರಿಕೆಗಳಿಗೆ ಜಾಹೀರಾತು ಬಿಡುಗಡೆ, ಕಾನೂನು ಬಾಹಿರವಾಗಿ ಎಜೆನ್ಸಿಗಳು ಕಡಿತಗೊಳಿಸುವ ಕಮಿಷನ್ ನಿಲುಗಡೆ, ಕೆಕೆಆರ್ ಡಿಬಿಯಿಂದ ಪ್ರತಿ ಮಾಹೆ 2 ಪುಟಗಳ ಜಾಹೀರಾತು ಬಿಡುಗಡೆ ಬಗ್ಗೆ ಮಾಧ್ಯಮ ಸಲಹೆಗಾರರೊಂದಿಗೆ ಸವಿಸ್ತಾರವಾಗಿ ಚರ್ಚಿಸಲಾಯಿತು.

ಸಂಘದ ಎಲ್ಲಾ ಬೇಡಿಕೆಗಳ ಕುರಿತು ತಾಳ್ಮೆಯಿಂದ ಆಲಿಸಿದ ಕೆ.ವಿ.ಪ್ರಭಾಕರ್ ಅವರು ಮಾನ್ಯ ಮುಖ್ಯಮಂತ್ರಿಯವರ ಗಮನಕ್ಕೆ ತಂದು ಶೀಘ್ರವೇ ಬೇಡಿಕೆಗಳನ್ನು ಈಡೇರಿಸುವುದಾಗಿ ನಿಯೋಗಕ್ಕೆ ಭರವಸೆ ನೀಡಿದರು.

ಪರಿಷ್ಕೃತ ಜಾಹೀರಾತು ನೀತಿಯನ್ನು ಜಾರಿಗೆ ತರಲಾಗುತ್ತಿದೆ ಎಂದು ಮುಖ್ಯಮಂತ್ರಿಯವರು ಗುರುವಾರ ಸದನದಲ್ಲಿ ಹೇಳಿದ್ದಾರೆ. ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳಿಗೆ ಮಾರಕವಾಗುವ ಯಾವುದೇ ನಿಯಮಗಳನ್ನು ಅಳವಡಿಸಬೇಡಿ. ಹಾಲೀ ಜಾಹೀರಾತು ನೀತಿಯಲ್ಲಿ ಯಾವ ಯಾವ ಸೌಲಭ್ಯಗಳನ್ನು ಪತ್ರಿಕೆಗಳಿಗೆ ನೀಡಲಾಗುತ್ತದೆಯೋ ಅವುಗಳನ್ನೆಲ್ಲ ಪರಿಷ್ಕೃತ ಜಾಹೀರಾತು ನೀತಿಯಲ್ಲಿ ಮುಂದುವರೆಸುವಂತೆ ನಿಯೋಗ ಕೆ.ವಿಮಪ್ರಭಾಕರ್ ಅವರಿಗೆ ವಿನಂತಿ ಮಾಡಿತು.

ಸಂಘದ ಬೇಡಿಕೆಗಳಿಗೆ ಸ್ಪಂದಿಸದ ಅಧಿಕಾರಿಗಳು

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳಿಗೆ ನ್ಯಾಯ ಒದಗಿಸಿ ಕೊಡುವಂತೆ ಜನವರಿ 2024 ರ ಮಾಹೆಯಿಂದ ಇದುವರೆಗೆ ಆನೇಕ ಬಾರಿ ಮನವಿ ಪತ್ರಗಳನ್ನು ಮುಖ್ಯಮಂತ್ರಿಯವರಿಗೆ, ತಮಗೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸರ್ಕಾರದ ಕಾರ್ಯದರ್ಶಿಯವರಿಗೆ, ಇಲಾಖೆಯ ಆಯುಕ್ತರಿಗೆ ಸಲ್ಲಿಸಿ ವಿನಂತಿ ಮಾಡಲಾಗಿದೆ. ಹಲವು ಬಾರಿ ಸರ್ಕಾರದ ಕಾರ್ಯದರ್ಶಿಯವರನ್ನು ಮತ್ತು ಇಲಾಖೆ ಆಯುಕ್ತರನ್ನು ಸಂಘದ ಪದಾಧಿಕಾರಿಗಳು ಖುದ್ದಾಗಿ ಭೇಟಿ ಮಾಡಿ ಮನವಿ ಮಾಡಿರುತ್ತೇವೆ. ಆದರೆ ಇದುವರೆಗೆ ಈ ಬೇಡಿಕೆಗಳ ಈಡೇರಿಸಲು ಈ ಅಧಿಕಾರಿಗಳು ಮುಂದಾಗಿರುವುದಿಲ್ಲ. ಇದರಿಂದ ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳ ಸಂಪಾದಕರು ತೊಂದರೆ ಅನುಭವಿಸುತ್ತಿದ್ದಾರೆ ಎಂದು ಕೆ.ವಿ.ಪ್ರಭಾಕರ್ ಅವರಿಗೆ ಸಂಘದ ನಿಯೋಗ ಮನವರಿಕೆ ಮಾಡಿಕೊಟ್ಟಿತು.ಆದ್ದರಿಂದ ಸಂಘದ ಪ್ರಮುಖವಾದ 04 ಬೇಡಿಕೆಗಳನ್ನು ಈಡೇರಿಸಿ ಕೊಡುವುದರ ಮೂಲಕ ರಾಜ್ಯದ ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳ ಬೆಳವಣಿಗೆಗೆ ಎಲ್ಲಾ ರೀತಿಯ ಸಹಾಯ ಮತ್ತು ಸಹಕಾರವನ್ನು ನೀಡುವಂತೆ ಮನವಿ ಸಲ್ಲಿಸಿ ಸಂಘದ ನಿಯೋಗ ವಿನಂತಿಸಿತು.

ಸಂಘದ ನಿಯೋಗದಲ್ಲಿ ರಾಜ್ಯಾಧ್ಯಕ್ಷ ಎ.ಸಿ. ತಿಪ್ಪೇಸ್ವಾಮಿ, ಉಪಾಧ್ಯಕ್ಷರಾದ ರಾಮಕೃಷ್ಣ ಮಾಮರ, ಹೆಚ್.ಎಸ್.ಹರೀಶ, ಪ್ರಧಾನ ಕಾರ್ಯದರ್ಶಿ ಟಿ.ಎಸ್. ಎಸ್.ಕೃಷ್ಣಮೂರ್ತಿ, ಖಜಾಂಚಿವೇದಮೂರ್ತಿ ಎಸ್.ಟಿ, ಸಂಘಟನಾ ಕಾರ್ಯದರ್ಶಿಗಳಾದ ಶಿವಶಂಕರ್. ಎಲ್, ಮಹಮ್ಮದ ಅಲ್ತಾಫ್ ಗೌಸಮೊದೀನ ಧಾರವಾಡ, ಬೀದರ್ ಜಿಲ್ಲಾಧ್ಯಕ್ಷ ವಿಜಯಕುಮಾರ ಪಾಟೀಲ್, ಕೊಪ್ಪಳ ಜಿಲ್ಲಾಧ್ಯಕ್ಷ ಶ್ರೀನಿವಾಸ.ಎಂ.ಜೆ, ಯಾದಗಿರಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಿರೇಮಠ, ಮಂಡ್ಯ ನಾಗೇಶ್ ಸೇರಿದಂತೆ ಸಂಘದ ಜಿಲ್ಲಾ ಘಟಕಗಳ ಪದಾಧಿಕಾರಿಗಳು, ಸದಸ್ಯರು ಉಪಸ್ಥಿತರಿದ್ದರು.

ಸಂಘದ ಪ್ರಮುಖ ಬೇಡಿಕೆಗಳು1. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳಿಗೆ ಜಾಹೀರಾತು ನೀತಿ 2013 ಅನುಷ್ಠಾನ ನಿಯಮಗಳು 2014 ರ ನಿಯಮ 14 ರ ಟಿಪ್ಪಣೆ 3 ರ ಪ್ರಕಾರ ದಿನಾಂಕ: 01-04-2023 ರಿಂದ ಅನ್ವಯವಾಗುವಂತೆ ಹಾಲೀ ಜಾಹೀರಾತು ದರಕ್ಕೆ ಶೇ. 12 ರಷ್ಟು ಜಾಹೀರಾತು ದರವನ್ನು ಹೆಚ್ಚಳ ಮಾಡಬೇಕು. ದಿನಾಂಕ: 01-04-2025 ರಿಂದ ಅನ್ವಯವಾಗುವಂತೆ ಹಾಲೀ ಜಾಹೀರಾತು ದರಕ್ಕೆ ಮತ್ತೇ ಶೇ. 12 ರಷ್ಟು ಹೀಗೆ ಶೇ.24 ರಷ್ಟು ಜಾಹೀರಾತು ದರವನ್ನು ಹೆಚ್ಚಳ ಮಾಡಬೇಕು.2. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಅಂಗೀಕೃತ ಜಾಹೀರಾತು ಸಂಸ್ಥೆಗಳ ಮೂಲಕ ಬಿಡುಗಡೆ ಮಾಡಲಾಗುವ ಎಲ್ಲಾ ಬಗೆಯ ಜಾಹೀರಾತು ವೆಚ್ಚದ ಬಿಲ್ಲುಗಳಲ್ಲಿ ಸರ್ಕಾರದ ಯಾವುದೇ ಆದೇಶ ಇಲ್ಲದಿದ್ದರೂ ಸಹ ಕಾನೂನು ಬಾಹಿರವಾಗಿ ಐಎನ್‌ಎಸ್ ಪ್ರಕಾರ ಕಡಿತಗೊಳಿಸುತ್ತಿರುವ ಶೇ. 15 ರಷ್ಟು ಕಮಿಷನ್ ಹಣವನ್ನು ಕಡಿತಗೊಳಿಸುವುದನ್ನು ತಕ್ಷಣವೇ ನಿಲ್ಲಿಸಬೇಕು. ಎಲ್ಲಾ ಬಗೆಯ ಜಾಹೀರಾತುಗಳನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದಲೇ ಬಿಡುಗಡೆ ಮಾಡಬೇಕು. ಖಾಸಗಿ ಜಾಹೀರಾತು ಏಜೆನ್ಸಿಗಳ ಕಮಿಷನ್ ಹಣವನ್ನು ಟೆಂಡರ್ ಮತ್ತು ವರ್ಗೀಕೃತ ಮತ್ತು ಆಕರ್ಷಕ ಜಾಹೀರಾತುಗಳನ್ನು ನೀಡುವ ಕಚೇರಿಗಳೇ ಅದರ ಶೇ.15 ರಷ್ಟು ಕಮಿಷನ್ ಹಣವನ್ನು ಪಾವತಿಸುವ ವ್ಯವಸ್ಥೆಯನ್ನು ಮಾಡಿ ಸರ್ಕಾರದಿಂದ ಆದೇಶ ಹೊರಡಿಸಬೇಕು.3. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ 5 ವರ್ಷ ಪೂರೈಸಿರುವ ಒಬಿಸಿ/ಬ್ರಾಹ್ಮಣ ಸಮುದಾಯದ ಪತ್ರಿಕೆಗಳಿಗೆ ಪ್ರತಿ ಮಾಹೆ 02 ಮಟಗಳ ಸರ್ಕಾರದ ಪ್ರೋತ್ಸಾಹ ರೂಪದ ಜಾಹೀರಾತನ್ನು ಇಲಾಖೆಯಿಂದ ಬಿಡುಗಡೆ ಮಾಡಲಾಗುತ್ತಿದೆ. ಇದರಿಂದ ಈ ಸಮುದಾಯದ ಪತ್ರಿಕೆಗಳ ಬೆಳವಣಿಗೆಗೆ ಸರ್ಕಾರವು ಸಹಾಯ, ಸಹಕಾರ ನೀಡುತ್ತಿದೆ. ಆದರೆ 5 ವರ್ಷ ಪೂರೈಸಿರದ ಒಬಿಸಿ /ಬ್ರಾಹ್ಮಣ ಸಮುದಾಯದ ಪತ್ರಿಕೆಗಳಿಗೆ ಪ್ರತಿ ಮಾಹೆ ಸರ್ಕಾರದ ಪ್ರೋತ್ಸಾಹ ರೂಪದ ಜಾಹೀರಾತನ್ನು ಇಲಾಖೆಯಿಂದ ಬಿಡುಗಡೆ ಮಾಡುವುದಕ್ಕೆ ಸರ್ಕಾರದ ಆದೇಶ ಇರುವುದಿಲ್ಲ. ಹೀಗಾಗಿ ಈ ಸಮುದಾಯದ ಪತ್ರಿಕೆಗಳ ಬೆಳವಣಿಗೆಗೆ ಮತ್ತು ಪತ್ರಿಕೆ ನಡೆಸಲು ತೊಂದರೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಸಾಮಾಜಿಕ ನ್ಯಾಯದ ಪರಿಕಲ್ಪನೆ ತಳಹದಿಯಲ್ಲಿ ಈ ಎರಡು ಸಮುದಾಯದ ಪತ್ರಿಕೆಗಳಿಗೆ ಮಾಸಿಕ 01 ಪುಟದ ಸರ್ಕಾರದ ಪ್ರೋತ್ಸಾಹ ರೂಪದ ಜಾಹೀರಾತನ್ನು ಸರ್ಕಾರದ ವತಿಯಿಂದ ಬಿಡುಗಡೆ ಮಾಡಲು ಸೂಕ್ತ ಆದೇಶವನ್ನು ಹೊರಡಿಸುವುದರ ಮೂಲಕ ಈ ಎರಡೂ ಸಮುದಾಯಗಳ ಪತ್ರಿಕೆಗಳಿಗೆ ಅನುಕೂಲ ಮಾಡಿಕೊಡಬೇಕು.4. ಕಲ್ಯಾಣ ಕರ್ನಾಟಕ ವ್ಯಾಪ್ತಿಯ ಜಿಲ್ಲೆಗಳಲ್ಲಿ ಪ್ರಕಟವಾಗಿ ಪ್ರಸಾರವಾಗುತ್ತಿರುವ ಜಿಲ್ಲಾ ಮತ್ತು ಪ್ರಾದೇಶಿಕ ವತ್ರಿಕೆಗಳಿಗೆ ಪ್ರತಿ ಮಾಹೆ 02 ಪುಟಗಳ ಸರ್ಕಾರದ ಪ್ರೋತ್ಸಾಹ ರೂಪದ ಜಾಹೀರಾತುಗಳನ್ನು ಕಲಬುರಗಿಯಲ್ಲಿರುವ ಕೆಕೆಆರ್‌ಡಿಬಿ ವತಿಯಿಂದ ಬಿಡುಗಡೆ ಮಾಡುವಂತೆ ಸರ್ಕಾರದ ವತಿಯಿಂದ ಆದೇಶ ಹೊರಡಿಸಬೇಕು. ಸರ್ಕಾರ ಪ್ರತಿ ವರ್ಷ ಸುಮಾರು 5 ಸಾವಿರ ಕೋಟಿಗಳ ಅನುದಾನವನ್ನು ಕೆಕೆಆರ್‌ಡಿಬಿಗೆ ಬಿಡುಗಡೆ ಮಾಡುತ್ತದೆ. ಈ ಅನುದಾನದಲ್ಲಿ ಸಾಕಷ್ಟು ಜನಪರವಾದ ಅಭಿವೃದ್ಧಿ ಕಾರ್ಯಗಳು 7 ಜಿಲ್ಲೆಗಳಲ್ಲಿ ನಡೆಯುತ್ತಿರುತ್ತವೆ. ಅಂತಹ ಅಭಿವೃದ್ಧಿ ಕಾಮಗಾರಿಗಳ ಮತ್ತು ಪೂರ್ಣಗೊಂಡ ಕಾಮಗಾರಿಗಳ ಕುರಿತ ಜಾಹೀರಾತುಗಳನ್ನು ಪತ್ರಿಕೆಗಳಿಗೆ ನೀಡಬೇಕು ಎಂದು ಮನವಿ ಯಲ್ಲಿ ಕೋರಲಾಗಿದೆ.



ಹುಮನಾಬಾದ:ಮಹೇಶ ಶೆಟ್ಟಿ ಸಾ ತಿಮರೋಡಿ ಸಾ : ಬೆಳ್ತಂಗಡಿ : ದಕ್ಷಿಣ ಕನ್ನಡ ಜಿಲ್ಲೆ ಇವರು ಸಾಮಾಜಿಕ ಜಾಲತಾಣಗಳಲ್ಲಿ ಆಧಾರ ರಹಿತವಾಗಿ ಬಿಜೆಪಿ ನಾಯಕರಾದ ಬಿ.ಎಲ್.ಸಂತೋಷರವರ ವಿರುದ್ಧ ಆರೋಪ ಮಾಡುತ್ತಿದ್ದು ಇವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಹುಮನಾಬಾದ ಸಿಪಿಐಗೆ ಗಜೇಂದ್ರ ತಂದೆ ಮಾಣಿಕಪ್ಪ ಕನಕಟ್ಟಕರ ಸಾ : ಗಡವಂತಿ ತಾ : ಹುಮನಾಬಾದ ಮನವಿ ಸಲ್ಲಿಸಿದರು.

## ಬಿಜೆಪಿಯಿಂದ ವಿಧಾನ ಪರಿಷತ್‌ನಲ್ಲಿ ಪ್ರತಿಭಟನೆ

ಎಲ್ಲಾ ಸೌಂಡ್ ಹಾಕೋಕೆ ಅವಕಾಶ ಕೊಡ್ತೀರಾ ಎಂದು ಆಗ್ರಹಿಸಿದರು. ಇದೇ ವೇಳೆ ಛಲವಾದಿ ನಾರಾಯಣಸ್ವಾಮಿ ಮಾತಾಡಿ, ಗಣೇಶ ಹಬ್ಬಕ್ಕೆ ಇಡೀ ರಾಜ್ಯಕ್ಕೆ ಒಂದು ನಿಯಮ ಆಗಿರಬೇಕು. ಕಲಬುರಗಿ ರಿಪಬ್ಲಿಕ್ ಕಲಬುರಗಿ ಆಗಿದೆ. ಅಲ್ಲಿ ಬೇರೆ ಬೇರೆ ಕಾನೂನು ಇದೆ. ನಮ್ಮ ಹಬ್ಬ ಮಾಡೋಕೆ ನಾವು ಪರ್ಮಿಷನ್ ತಗೋಬೇಕಾ? ರಾಜ್ಯಕ್ಕೆ ಒಂದೇ ಕಾನೂನು ಮಾಡಿ. ಜಿಲ್ಲೆಗೆ ಒಂದು ನಿಯಮ ಬೇಡ ಎಂದು ಸರ್ಕಾರವನ್ನ ಒತ್ತಾಯಿಸಿದರು.

ಇದಕ್ಕೆ ಸಭಾಪತಿ ನಾಯಕ ಬೋಸರಾಜು ಉತ್ತರ ಕೊಟ್ಟು, ಗಣೇಶ ಹಬ್ಬಕ್ಕೆ ಅನುಮತಿ ಕೊಡುವ, ನಿಯಮ ಮಾಡುವುದನ್ನ ಡಿಸಿಗಳಿಗೆ ಅಧಿಕಾರ ಕೊಡಲಾಗಿದೆ. ಸರ್ಕಾರದಿಂದ ಇಂತಹ ನಿಯಮ ಹಾಕಿಲ್ಲ. ಡಿಸಿಗಳಿಗೆ ಅಧಿಕಾರ ಕೊಟ್ಟಿದ್ದೇವೆ. ಜಿಲ್ಲೆಗೆ ಅನುಗುಣವಾಗಿ ಡಿಸಿಗಳು ನಿಯಮ ಹಾಕ್ತಾರೆ. ಜಿಲ್ಲೆಯ ನಿಯಮದ ಬಗ್ಗೆ ಪರಿಶೀಲನೆ ಮಾಡ್ತೀವಿ ಎಂದರು.

ಇದಕ್ಕೆ ಬಿಜೆಪಿ ಸದಸ್ಯರು ಒಪ್ಪಲಿಲ್ಲ. ಗಣೇಶ ಹಬ್ಬ ವಿಜೃಂಭಣೆಯಿಂದ ಆಚರಣೆಗೆ ಅವಕಾಶ ಕೊಡಬೇಕು ಅಂತ ಒತ್ತಾಯಿಸಿದರು. ಕಲಬುರಗಿಯಲ್ಲಿ ಗಣೇಶ ಹಬ್ಬಕ್ಕೆ ಪ್ರತ್ಯೇಕ ನಿಯಮ ಮಾಡೋದು ಸರಿಯಲ್ಲ. ಸರ್ಕಾರದ ನಡೆಗೆ ಬಿಜೆಪಿ ಸದಸ್ಯರ ವಿರೋಧ ವ್ಯಕ್ತಪಡಿಸಿ ಸದನದ ಬಾವಿಗಿಳಿದು ಪ್ರತಿಭಟನೆ ನಡೆಸಿದರು. ಹಿಂದೂ ವಿರೋಧ ಸರ್ಕಾರ ಎಂದು ಘೋಷಣೆ ಕೂಗಿದರು. ಗದ್ದಲ ಗಲಾಟೆ ಹೆಚ್ಚಾದ ಹಿನ್ನೆಲೆ ಕಲಾಪವನ್ನು ಸಭಾಪತಿಗಳು ಅನಿರ್ದಿಷ್ಟಾವಧಿಗೆ ಮುಂದೂಡಿಕೆ ಮಾಡಿದರು.

## ಶಾಸಕ ಯತ್ನಾಳ್ ವಿವಾದಾತ್ಮಕ ಹೇಳಿಕೆ ವಿರುದ್ಧ ದೂರು




ಯಾದಗಿರಿ:ಅ.22:ವಿಜಯಪೂರ ಶಾಸಕರಾದ ಬಸನಗೌಡ ಪಾಟೀಲ್ ಯತ್ನಾಳ್ ಅವರು ನೀಡಿದ ವಿವಾದಾತ್ಮಕ ಹೇಳಿಕೆಯ ವಿರುದ್ಧ ತೀವ್ರ ಆಕ್ರೋಶ ವ್ಯಕ್ತವಾಗಿದೆ. ಅವರು "ಮುಸ್ಲಿಂ ಹೆಣ್ಣು ಮಕ್ಕಳಿಗೆ ಮದುವೆಯಾದವರಿಗೆ ?5 ಲಕ್ಷ ನೀಡುತ್ತೇನೆ" ಎಂಬ ಹೇಳಿಕೆ ನೀಡಿರುವುದು ಮುಸ್ಲಿಂ ಮಹಿಳೆಯರ ಗೌರವಕ್ಕೆ ಧಕ್ಕೆ ಉಂಟುಮಾಡಿದಂತದ್ದು ಹಾಗೂ ಸಮಾಜದಲ್ಲಿ ಜಾತಿ-ಧರ್ಮಗಳ ಮಧ್ಯೆ ವೈಮನಸ್ಸು ಸೃಷ್ಟಿಸುವಂತದ್ದು ಎಂದು ಮನವಿ ಪತ್ರದಲ್ಲಿ ಉಲ್ಲೇಖಿಸಲಾಗಿದೆ.ಈ ಕುರಿತು ಸಭಾಧ್ಯಕ್ಷರಾದ ಯು.ಟಿ. ಖಾದರ್ ಅವರಿಗೆ ಯಾದಗಿರಿ ಜಿಲ್ಲಾಣಟಿಜಜಜುಟಿಜಜಧಿಕಾರಿಗಳ ಮುಖಾಂತರ ಮನವಿ ಸಲ್ಲಿಸಲಾಗಿದೆ."ಕರ್ನಾಟಕ ಶಾಂತಿಯುತ ರಾಜ್ಯವಾಗಿದ್ದು, ಇಂತಹ ಹೇಳಿಕೆಗಳು ಸಮಾಜದಲ್ಲಿ ವಿಷಬೀಜ ಬಿತ್ತುವಂತದ್ದು. ಈ ಹೇಳಿಕೆ ಮುಸ್ಲಿಂ ಹೆಣ್ಣುಮಕ್ಕಳಿಗೆ ಅವಮಾನಕಾರಿ ಹಾಗೂ ಅವಹೇಳನಕಾರಿ. ಆದ್ದರಿಂದ ಶಾಸಕರ ವಿರುದ್ಧ ದೇಶದ್ರೋಹದಡಿ ಪ್ರಕರಣ ದಾಖಲಿಸಿ, ಗಡಿಪಾರು ಮಾಡಿ, ಶಿಸ್ತು ಕ್ರಮ ಕೈಗೊಳ್ಳಬೇಕೆಂದು "ಕರ್ನಾಟಕ ನ್ಯಾಯ ಕ್ರಾಂತಿ ಸಂಘಟನೆಯ ಕಲ್ಯಾಣ ಕರ್ನಾಟಕದ ಅಧ್ಯಕ್ಷರಾದ ಬಿಕೆ ನಾಸಿ ಅವರು ಆಗ್ರಹಿಸಿದ್ದಾರೆ"

ಮನವಿದಾರರು ಇಂತಹ ಪ್ರಚೋದನಕಾರಿ ಹೇಳಿಕೆಗಳನ್ನು ತೀವ್ರವಾಗಿ ಖಂಡಿಸಿದ್ದು, ಶಾಂತಿ-ಸಾಮರಸ್ಯ ಕಾಪಾಡುವಂತೆ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ

## 'ನಾನ್ ಅಡ್ಜಸ್ಟ್‌ಮೆಂಟ್' ರಾಜಕೀಯ ಪಕ್ಷ ಸ್ಥಾಪನೆಯ ಘೋಷಣೆ ಮಾಡಿದ ಯತ್ನಾಳ್



ಬೆಂಗಳೂರು:ಅ.22:ಬಿಜೆಪಿಯಿಂದ ಉಚ್ಚಾಟಿತರಾಗಿರುವ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ನಾನ್ ಅಡ್ಜಸ್ಟ್‌ಮೆಂಟ್ ರಾಜಕೀಯ ಪಕ್ಷ ಸ್ಥಾಪಿಸುವುದಾಗಿ ಶುಕ್ರವಾರ ಘೋಷಿಸಿದ್ದಾರೆ.

ರಾಜ್ಯದ ಆರ್ಥಿಕ ಸಂಕಷ್ಟ ಪರಿಸ್ಥಿತಿಯನ್ನು ವಿವರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಹಿಂದಿನ ಬಿಜೆಪಿ ಸರ್ಕಾರವು 2019-23ರ ಅವಧಿಯಲ್ಲಿ ಹಣವಿಲ್ಲದೆ ಮಸೂದೆಗಳನ್ನು ಅಂಗೀಕರಿಸಿದೆ ಎಂದು ಆರೋಪಿಸಿದ ನಂತರ ಯತ್ನಾಳ್ ಹೊಸ ರಾಜಕೀಯ ಪಕ್ಷ ಸ್ಥಾಪಿಸುವುದಾಗಿ ಹೇಳಿದರು.

ಸಿದ್ದರಾಮಯ್ಯ ಅವರಿಗೆ ನಮ್ಮಿಬ್ಬರ ಬೆಂಬಲ ಸಿಕ್ಕಿದೆ. ನಿಮ್ಮನ್ನೂ ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡರು ಜೆಡಿಎಸ್‌ನಿಂದ ಉಚ್ಚಾಟಿಸಿದ್ದರು. ಹೀಗೆ ಉಚ್ಚಾಟಿಸಲ್ಪಟ್ಟವರು ಮುಂದೊಂದು ದಿನ ಮುಖ್ಯಮಂತ್ರಿಯಾಗುತ್ತಾರೆ ಅಂತಾ ಯತ್ನಾಳ್ ಹೇಳಿದರು. ಇದಕ್ಕೆ ಲಘು ಹಾಸ್ಯದ ದಾಟಿಯಲ್ಲಿ ಪ್ರತಿಕ್ರಿಯಿಸಿದ ಸಿಎಂ, ನೀವೂ ಮುಖ್ಯಮಂತ್ರಿಯಾದ್ರೆ ನನಗೆ ಸಂತೋಷ ಎಂದರು.

ಆದರೆ ಯಾವ ಪಕ್ಷದಿಂದ ಸಿಎಂ ಆಗ್ತೀರಾ? ಎಂದು ಯತ್ನಾಳ್ ಪ್ರಶ್ನಿಸಿದ ಸಿಎಂ ಸಿದ್ದರಾಮಯ್ಯ, ಹೊಸ ಪಕ್ಷ ಕಟ್ಟುವಂತೆ ಸೂಚಿಸಿದರು. ಅದ-ಕ್ಕೆ ಉತ್ತರಿಸಿದ ಯತ್ನಾಳ್, ನಾನ್ ಅಡ್ಜಸ್ಟ್‌ಮೆಂಟ್ ಪಕ್ಷ ಕಟ್ಟುತ್ತೇನೆ. ಅದು ಬಿಜೆಪಿಯ ಮತಗಳನ್ನು ಕಡಿಮೆ ಮಾಡಿದರೆ ಚಿಂತಿಸಬೇಡಿ. ಇದು ನಿಮಗೆ ಸಹಾಯ ಮಾಡುವುದಿಲ್ಲ ಎಂದು ಹೇಳಿದ್ದಾರೆ. ಕಾಂಗ್ರೆಸ್ ಅಧಿಕಾರಕ್ಕೆ ಬರಬೇಕಾದರೆ ಯತ್ನಾಳ್ ಹೊಸ ಪಕ್ಷ ಆರಂಭಿಸಲಿ ಎಂದು ಸಿದ್ದರಾಮಯ್ಯ ಹೇಳಿದ್ದಾರೆ.

ಮಾಜಿ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ ಮತ್ತು ಅವರ ಪುತ್ರ, ರಾಜ್ಯ ಬಿಜೆಪಿ ಅಧ್ಯಕ್ಷ ಬಿ ವೈ ವಿಜಯೇಂದ್ರ ಅವರ ಕುಟುಂಬ ಆಡಳಿತ ಹಾಗೂ ಸಿದ್ದರಾಮಯ್ಯ-ಯಡಿಯೂರಪ್ಪ ಅವರ ಹೊಂದಾಣಿಕೆ ರಾಜಕೀಯ ವಿರುದ್ಧ ವಿರುದ್ಧ ಪದೇ ಪದೇ ಟೀಕೆ ಮಾಡುವ ಮೂಲಕ ಆರು ವರ್ಷಗಳ ಕಾಲ ಬಿಜೆಪಿಯಿಂದ ಯತ್ನಾಳ್ ಉಚ್ಚಾಟಿತರಾಗಿದ್ದಾರೆ.

## ಹಬ್ಬಗಳನ್ನು ಸಹಬಾಳ್ವೆಯೊಂದಿಗೆ ಆಚರಿಸೋಣ: ಡಿವೈಎಸ್ಪಿ ಜಾವೇದ ಇನಾಮದಾರ್



ಕೆಂಭಾವಿ:ಅ.22:ಕೆಂಭಾವಿ ಎಂದರೆ ಐಕ್ಯತೆಯ ಪ್ರತೀಕ. ಸಮಾಜದಲ್ಲಿ ಶಾಂತಿ, ಸೌಹಾರ್ದ ಹಾಗೂ ಸುವ್ಯವಸ್ಥೆ ಕಾಪಾಡುವ ಹೊಣೆ ನಮ್ಮೆಲ್ಲರದು. ಆದ್ದರಿಂದ, ಹಿಂದೂ ಹಾಗೂ ಮುಸ್ಲಿಂ ಬಾಂಧವರು ಸೇರಿ, ಸೌಹಾರ್ದಯುತವಾಗಿ ಗಣೇಶ ಚತುರ್ಥಿ ಹಾಗೂ ಈದ್ ಮಿಲಾದ್ ಹಬ್ಬವನ್ನು ಆಚರಿಸಬೇಕು" ಎಂದು ಡಿವಾಯ್ ಎಸ್ ಪಿ ಸುರಪುರ ಜಾವೇದ ಇನಾಮ್ದಾರ ತಿಳಿಸಿದ್ದಾರೆ.

ಪೊಲೀಸ್ ಠಾಣೆ, ಕೆಂಭಾವಿಯಲ್ಲಿ ನಡೆದ ಶಾಂತಿ ಸಭೆಯಲ್ಲಿ ಅವರು ಮಾತನಾಡುತ್ತಾ,"ದೌರ್ಜನ್ಯ ತಪ್ಪಿಸಲು ಇಲಾಖೆಗಳು ಹೊರಡಿಸಿರುವ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಹಬ್ಬದ ಕಾರ್ಯಕ್ರಮಗಳಿಗೆ ಕಡ್ಡಾಯವಾಗಿ ಅನುಮತಿ ಪಡೆಯಬೇಕು. ಡಿಜೆ, ಡಾಲ್ಬಿ, ಪ್ಲಾಜಮಾ ಧ್ವನಿವರ್ಧಕಗಳ ಬಳಕೆ ಸಂಪೂರ್ಣ ನಿಷೇಧಿಸಲಾಗಿದೆ," ಎಂದರು.

ಅವರು ಮುಂದುವರಿದು,"ಯಾವುದೇ ಧರ್ಮವನ್ನು ಅವಹೇಳನ ಮಾಡುವ ರೀತಿಯಲ್ಲಿ ಭಾಷಣ ಮಾಡುವುದು ನಿಷೇಧ. ಅಧಿಕೃತ ಮಾಹಿತಿ ಇಲ್ಲದೆ ಅಂಥವರನ್ನು ಕಾರ್ಯಕ್ರಮಗಳಿಗೆ ಕರೆತಂದರೆ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ. ದೇವಾಲಯ, ಮಸೀದಿ ಮುಂತಾದ ಧಾರ್ಮಿಕ ಸ್ಥಳಗಳ ಬಳಿ ಧ್ವನಿವರ್ಧಕದ ಅತಿ ಬಳಕೆ ತಕ್ಷಣ ನಿಲ್ಲಿಸಬೇಕು," ಎಂದು ಹೇಳಿದ್ದಾರೆ.

ಸಿಪಿಐ ರವಿಕುಮಾರ್ (ಹುಣಸಗಿ )ಅವರು,"ಅಹಿತಕರ ಘಟನೆಗಳನ್ನು ತಡೆಗಟ್ಟಲು ಪಿಡಬ್ಲ್ಯೂಡಿ, ಜೆಸ್ಕಾಂ, ಪುರಸಭೆ,ಅಗ್ನಿಶಾಮಕ ಇಲಾಖೆಗಳೊಂದಿಗೆ ಸಹಕಾರ ಬೇಕಾಗುತ್ತದೆ. ಗಣೇಶ ವಿಗ್ರಹಗಳ ಪ್ರತಿಷ್ಠಾಪನೆ ಸ್ಥಳಗಳಲ್ಲಿ ಸಿಸಿಟಿವಿ, ಬೆಳಕು ವ್ಯವಸ್ಥೆ ಮಾಡುವುದು ಆಯೋಜಕರ ಜವಾಬ್ದಾರಿ. ಯಾವುದೇ ಗಲಾಟೆ, ಅವ್ಯವಸ್ಥೆಯ ವರದಿ ಬಂದರೆ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ," ಎಂದು ತಿಳಿಸಿದ್ದಾರೆ.

ಪಿಎಸ್‌ಐ ಅಮೋಜ ಕಾಂಬಳೆ ಅವರು, "ನಾವು ಎಲ್ಲ ರೀತಿಯ ರಕ್ಷಣೆ ಒದಗಿಸುತ್ತೇವೆ. ಆದರೆ ಎಲ್ಲರೂ ಕಾನೂನಿನ ಚೌಕಟ್ಟಿನಲ್ಲಿಯೇ ಇದ್ದು ಸೌಹಾರ್ದಯುತವಾಗಿ ಹಬ್ಬ ಆಚರಿಸಬೇಕು. ಇದು ನಮ್ಮ ಸಂಸ್ಕೃತಿ ಹಾಗೂ ಪರಂಪರೆಯ ಸಂರಕ್ಷಣೆ," ಎಂದರು.ಅದಮ ಖಾಜಿ ಅವರು, "ಕೆಂಭಾವಿಯು ಸೂಫಿ ಸಂತರು, ಶರಣರ ನಾಡು. ಇಲ್ಲಿ ಎಲ್ಲ ಧರ್ಮದವರು ಒಗ್ಗಟ್ಟಿನಿಂದ ಬದುಕುತ್ತಿದ್ದಾರೆ. ಹಬ್ಬಗಳಲ್ಲಿ ಸಹಭಾಗಿತ್ವವೇ ಐಕ್ಯತೆಯ ನಿಜಮುಖ" ಎಂದು ಹೇಳಿದರು.

ಕಾರ್ಯಕ್ರಮದ ನಿರೂಪಣೆ ಹನುಮಂತ್ರಾಯ ಪಿಎಸ್‌ಐ ನಿರ್ವಹಿಸಿದರು. ಕ್ರೈಂ ಪಿಎಸ್‌ಐ ಹನುಮಂತ್ರಾಯ ಸಿದ್ದಾಪುರ ವಂದಿಸಿದರು.

ಈ ಸಭೆಯಲ್ಲಿ ಮಾಜಿ ತಾಲೂಕು ಪಂಚಾಯತ್ ಸದಸ್ಯ ಖಾಜಾ ಪಟೇಲ್ ಕಾಚೂರ, ಪುರಸಭೆ ಅಧ್ಯಕ್ಷ ರಹಿಮಾನ್ ಪಟೇಲ್, ಸದಸ್ಯ ರಾಘವೇಂದ್ರ ಕವಲ್ದಾರ್, ಕೃಷ್ಣಾರೆಡ್ಡಿ ಮುದ್ನೂರ್, ಮಡಿವಾಳಪ್ಪ ಕಿರದಳ್ಳಿ, ಎನ್ ಆರ್ ದಾವಲ್ ಸಾಬ್, ವಿಶಾಲ್ ಗೌಡ, ಮಲ್ಲಿಕಾರ್ಜುನ ಹಂದಿಗನೂರ್, ಶಿವಶರಣೆ ಯಾಳಗಿ, ಮಂಜು ಕೊಂಬಿನ, ಶಿವಪ್ಪ ಕಂಬಾರ್, ಶಫೀಕ್ ದಫ್ಖೇದಾರ್, ಬಾಬಾ ತಾಳಿಕೋಟಿ, ಸುಗಪ್ಪ ನಗನೂರ ಸೇರಿದಂತೆ ಹಲವಾರು ಗ್ರಾಮಸ್ಥರು, ಯುವಕರು, ಮುಖಂಡರು, ಸಾರ್ವಜನಿಕರು ಉಪಸ್ಥಿತರಿದ್ದರು.

# ಅತಿಥಿ ಉಪನ್ಯಾಸಕರ ನೇಮಕಾತಿಗೆ ಆಗ್ರಹಿಸಿ ವಿದ್ಯಾರ್ಥಿಗಳ ಬೃಹತ್ ಪ್ರತಿಭಟನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಆ.22: 2024–2025ನೇ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅತಿಥಿ ಉಪನ್ಯಾಸಕರನ್ನು ಕೂಡಲೇ ನೇಮಕಾತಿ ಮಾಡಬೇಕು ಎಂದು ಒತ್ತಾಯಿಸಿ ಶುಕ್ರವಾರ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ನೇತೃತ್ವದಲ್ಲಿ ಪದವಿ ವಿದ್ಯಾರ್ಥಿಗಳು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಬೃಹತ್ ಪ್ರತಿಭಟನಾ ಧರಣಿಯನ್ನು ಮಾಡಿದರು. ಜಿಲ್ಲಾ ಸಂಚಾಲಕ ಮಂಜುನಾಥ್ ಕೊಣ್ಣೂರ್ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ನೂರಾರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.



ಪ್ರತಿಭಟನೆಕಾರರು ನಂತರ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿ, ರಾಜ್ಯದಲ್ಲಿ ಪದವಿ ಕಾಲೇಜುಗಳ ತರಗತಿಗಳು ಪ್ರಾರಂಭವಾಗಿ ತಿಂಗಳು ಕಳೆದರೂ ಅತಿಥಿ ಉಪನ್ಯಾಸಕರ ನೇಮಕಾತಿಯಾಗದೇ ವಿದ್ಯಾರ್ಥಿಗಳಿಗೆ ಸರಿಯಾದ ತರಗತಿಗಳು ನಡೆಯುತ್ತಿಲ್ಲ. ರಾಜ್ಯದ ಪದವಿ ಕಾಲೇಜುಗಳು ಅತಿಥಿ ಉಪನ್ಯಾಸಕರ ಮೇಲೆ ಅವಲಂಬಿತವಾಗಿದ್ದು, ಅತಿಥಿ ಉಪನ್ಯಾಸಕರು ಇಲ್ಲದೇ ಸರ್ಕಾರಿ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ತೊಂದರೆ ಉಂಟಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಬಡ ಕೃಷಿ ಕೂಲಿಕಾರರ ಮಕ್ಕಳು ಸರ್ಕಾರಿ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿದ್ದು, ಪ್ರತಿ ವರ್ಷ ಇಂತಹ ಸಮಸ್ಯೆಯಿಂದ ವ್ಯಾಸಂಗದಲ್ಲಿ ವಿದ್ಯಾರ್ಥಿಗಳು ಹಿಂದುಳಿಯುತ್ತಿದ್ದಾರೆ. ಖಾಸಗಿ ಕಾಲೇಜುಗಳಲ್ಲಿ ಸರಿಯಾಗಿ ತರಗತಿಗಳು ನಡೆದು ಉತ್ತಮ ಫಲಿತಾಂಶ ಬರುತ್ತಿದೆ. ಆದರೆ ಶೇಕಡಾ 50ರಷ್ಟು ಅತಿಥಿ ಉಪನ್ಯಾಸಕರ ಮೇಲೆ ಅವಲಂಬಿತವಾಗಿರುವ ಸರ್ಕಾರಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಅನ್ಯಾಯ ಮಾಡಿದಂತಾಗುತ್ತದೆ. ಕೂಡಲೇ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

ಪ್ರತಿ ವರ್ಷ ನೇಮಕಾತಿಯಲ್ಲಿ ಗೊಂದಲ ಉಂಟಾಗುತ್ತಿದ್ದು, ಶಾಶ್ವತ ಪರಿಹಾರವನ್ನು ಕಂಡು ಹಿಡಿಯುವಂತೆ, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಎಲ್ಲ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡುವಂತೆ, ಸರ್ಕಾರಿ ಕಾಲೇಜುಗಳ ಮೂಲಭೂತ ಸೌಲಭ್ಯಗಳಿಗೆ ಹೆಚ್ಚಿನ ಅನುದಾನ ಕೊಡುವಂತೆ, ಪ್ರಯೋಗಾಲಯಗಳು, ಕಂಪ್ಯೂಟರ್‌ಗಳು ಮುಂತಾದ ಸಲಕರಣೆಗಳನ್ನು ಒದಗಿಸುವಂತೆ ಅವರು ಆಗ್ರಹಿಸಿದರು.

# ನಾಳೆ ನುಲಿಯ ಚಂದಯ್ಯ 918ನೇ ಜಯಂತಿ



ಮಲ್ಲಮ್ಮ ನುಡಿ ವಾರ್ತೆ ಬೀದರ: ಆ.22 : ನಾಳೆ ಬೆ. 11–30ಕ್ಕೆ ಚಿಕ್ಕಪೇಟ್ ಸಮೀಪದ ಹೆಬ್ಬಾಳೆ ಕನ್ವೆನ್‌ಶನ್ ಹಾಲ್‌ನಲ್ಲಿ ಬೀದರ ಜಿಲ್ಲಾ ಕೊರಮ ಕೊರವ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ನುಲಿಯ ಚಂದಯ್ಯನವರ 918ನೇ ಜಯಂತಿ ಆಚರಣೆ ಮಾಡಲಾಗುತ್ತಿದೆ. ಸಮಾಜದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಸಂಘದ ಅಧ್ಯಕ್ಷ ಸಂತೋಷ ಕೊರವ ಮತ್ತು ಕಾರ್ಯದರ್ಶಿ ಸಂಜೀವಕುಮಾರ ಬೇಲೂರ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು ಅಂದು ಬೆ. 10 ಗಂಟೆಗೆ ಶಿವಾಜಿ ವೃತ್ತದಿಂದ ಅಂಬೇಡ್ಕರ್ ವೃತ್ತದ ಮಾರ್ಗವಾಗಿ ಚಿಕ್ಕಪೇಟ್ ಹೆಬ್ಬಾಳೆ ಕನ್ವೆನ್‌ಶನ್ ಹಾಲ್ ವರೆಗೆ ಜರುಗಲಿದೆ. ಬೆ.11–30ಕ್ಕೆ ನಡೆಯುವ ನುಲಿಯ ಚಂದಯ್ಯನವರ 918ನೇ ಜಯಂತಿಯನ್ನು ಅರಣ್ಯ ಜೀವಿಶಾಸ್ತ್ರ ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಉದ್ಘಾಟನೆ ಮಾಡಲಿದ್ದಾರೆ. ದಿವ್ಯ ಸಾನಿಧ್ಯವನ್ನು ಪೂಜ್ಯಶ್ರೀ ವೃಷಭೇಂದ್ರ ಚಂದೇಶ್ವರ ಮಹಾಸ್ವಾಮಿಗಳು ವಹಿಸಲಿದ್ದಾರೆ. ಘನ ಉಪಸ್ಥಿತಿಯನ್ನು ಪೌರಾಡಳಿತ ಸಚಿವ ರಹಿಂಖಾನ್, ಅಧ್ಯಕ್ಷತೆಯನ್ನು ವಿಶ್ವನಾಥ ಜಾಧವ್ ವಹಿಸಲಿದ್ದಾರೆ. ನುಲಿಯ ಚಂದಯ್ಯ ಭಾವಚಿತ್ರಕ್ಕೆ ಜ್ಯೋತಿಯನ್ನು ಸಂಸದ ಸಾಗರ ಖಂಡ್ರೆ ಹಾಗೂ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಬೆಳಗಿಸುವರು. ಮುಖ್ಯ ಭಾಷಣಕಾರರಾಗಿ ಪತ್ರಕರ್ತ ಮೋಹನರಾಜ್ ಮೈಸೂರ ಮಾತನಾಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ರಾಘವೇಂದ್ರ ಭಜಂತ್ರಿ, ಚಂದ್ರಕಾಂತ ಭಜಂತ್ರಿ, ಶ್ರೀದೇವಿ ಉತ್ಲಾಸರ್, ಈಶ್ವರ ಸಿಂಗ್ ಠಾಕೂರ್ ಸೇರಿದಂತೆ ಹಲವರು ಪಾಲ್ಗೊಳ್ಳಲಿದ್ದಾರೆ ಎಂದು ಜಂಟಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಳೆ ಗಾಂಧಿನಗರ ಬಸವೇಶ್ವರ ಮಂದಿರದಲ್ಲಿ ಶ್ರಾವಣ ಸಮಾಪ್ತಿ ಸಚಿವ ರಹಿಂಖಾನ್ ಅವರಿಂದ ಅಡಿಗಲ್ಲು ಪೂಜೆ : ನಾಗಭೂಷಣ

ಬೀದರ. ಆ. 22 : ನಾಳೆ ಭಾನುವಾರ ಸಾ. 5 ಗಂಟೆಗೆ ಮೈಲೂರ ರಸ್ತೆಯಲ್ಲಿರುವ ಗಾಂಧಿನಗರ ಬಸವೇಶ್ವರ ಮಂದಿರದಲ್ಲಿ ಪೂಜ್ಯಶ್ರೀ ಜಗದ್ಗುರು ಡಾ. ಚನ್ನಬಸವಾನಂದ ಸ್ವಾಮೀಜಿಯವರ ಶ್ರಾವಣ ಮಾಸ ವಿಶ್ವಧರ್ಮ ಪ್ರವಚನ ಸಮಾರೋಪ ಸಮಾರಂಭ ಜರುಗಲಿದೆ. ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಬಸವೇಶ್ವರ ಮಂದಿರದ ಅಧ್ಯಕ್ಷರು ಹಾಗೂ ಬೀದರ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ನಾಗಭೂಷಣ ಕಮಠಾಣೆ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು ದಿವ್ಯ ಸಮ್ಮುಖವನ್ನು ಬಸವ ಮಂಟಪದ ಪೂಜ್ಯ ಮಾತೆ ಸತ್ಯಾದೇವಿ ವಹಿಸಲಿದ್ದಾರೆ. ಬಸವೇಶ್ವರ ಮಂದಿರದಲ್ಲಿ ನಿರ್ಮಾಣ ಮಾಡಲಿರುವ ಕಲ್ಯಾಣ ಮಂಟಪದ ಅಡಿಗಲ್ಲು ಪೂಜೆಯನ್ನು ಪೌರಾಡಳಿತ ಮತ್ತು ಹಜ್ ಸಚಿವ ರಹಿಂಖಾನ್ ನೆರವೇರಿಸಲಿದ್ದಾರೆ. ಷಟಸ್ಥಲ ಧ್ವಜಾರೋಹಣವನ್ನು ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ನೆರವೇರಿಸಲಿದ್ದು, ಬೀದರ ದಕ್ಷಿಣ ಶಾಸಕ ಡಾ. ಶೈಲೇಂದ್ರ ಕೆ ಬೆಲ್ದಾಳೆ ಗುರುಬಸವ ಪೂಜೆಯನ್ನು ನೆರವೇರಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಬೀದರ ವಿ.ವಿ.ಯ



ಕುಲಪತಿ ಪ್ರೊ.ಬಿ.ಎಸ್.ಬಿರಾದಾರ, ಅಧ್ಯಕ್ಷತೆಯನ್ನು ಮಂದಿರದ ಅಧ್ಯಕ್ಷ ನಾಗಭೂಷಣ ಕಮಠಾಣೆ ವಹಿಸಲಿದ್ದಾರೆ. ಅತಿಥಿಗಳಾಗಿ ಬೀದರ ವಿ.ವಿ.ಯ ಕುಲಸಚಿವರಾದ ಪ್ರೊ. ಪರಮೇಶ್ವರ ನಾಯಕ್ ಹಾಗೂ ಸುರೇಖಾ, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಜೈಗೋಪಾಲ ಬಥಮೆ, ನಗರಸಭೆ ಆಯುಕ್ತ ಶಿವರಾಜ ರಾಠೋಡ್, ನಿವೃತ್ತ ಕೆಎಎಸ್ ಅಧಿಕಾರಿ ಕೆ.ದಿವಾಕರ್, ನಗರಸಭೆ ಅಧ್ಯಕ್ಷ ಮಹ್ಮದ್ ಗೌಸ್, ನಗರಸಭೆ ಸದಸ್ಯ ಶಶಿಧರ ಹೊಸಳ್ಳಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯವಸ್ಥಾಪಕ ಅಶೋಕ ಶೇರಿಕಾರ್, ಭೂಸೇನಾ ನಿಗಮದ ಇಇ ಅಭಿಷೇಕ ಪೋಲಾ, ಶಿವರಾಜ ಪಾಟೀಲ ಅತಿವಾಳ, ಶಿವಶರಣಪ್ಪ ಪಾಟೀಲ ಹಾರೂರಗೇರಿ ಸೇರಿದಂತೆ ಇತರರು ಆಗಮಿಸಲಿದ್ದಾರೆ.

ಗಾಂಧಿನಗರ ಪುಟಾಣಿ ಮಕ್ಕಳಿಂದ ವಿಶೇಷ ವಚನ ನೃತ್ಯ ಜರುಗಲಿದ್ದು, ಮಹಾಪ್ರಸಾದ ಆಯೋಜನೆ ಮಾಡಲಾಗಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕೆಂದು ನಾಗಭೂಷಣ ಕಮಠಾಣೆ ಕೋರಿದ್ದಾರೆ.

# 25 ರಂದು ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ






ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಆ.22: ಕಲ್ಯಾಣ ಕರ್ನಾಟಕ ಭಾಗದ ಚೇತನ ಶಕ್ತಿ, ಅಪ್ಪಟ ಬಸವತತ್ವ ಅನುಯಾಯಿ ಆಗಿರುವ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ಸಮಾರಂಭ ಆ.25ರಂದು ಪಟ್ಟಣದಲ್ಲಿ ಅರ್ಥಪೂರ್ಣವಾಗಿ ಆಚರಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಅಮೃತ ಮಹೋತ್ಸವ ಸ್ವಾಗತ ಸಮಿತಿ ಅಧ್ಯಕ್ಷರು ಮತ್ತು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ಈಶ್ವರ ಖಂಡ್ರೆ ತಿಳಿಸಿದ್ದಾರೆ.

ಪಟ್ಟಣದ ಚನ್ನಬಸವಾಶ್ರಮ ಪರಿಸರದಲ್ಲಿ ಅಮೃತ ಮಹೋತ್ಸವ ಸ್ವಾಗತ ಸಮಿತಿ ವತಿಯಿಂದ ಸೋಮವಾರ ಬೆಳಿಗ್ಗೆ 11 ಗಂಟೆಗೆ ಅಸಂಖ್ಯಾತ ಬಸವ ಭಕ್ತರ ಸಮ್ಮುಖದಲ್ಲಿ ಡಾ. ನಾಡೋಜ ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ಸಮಾರಂಭ ಉದ್ಘಾಟನೆಗೊಳ್ಳಲಿದೆ. ಸುತ್ತೂರು ಶ್ರೀಕ್ಷೇತ್ರ ವೀರಸಿಂಹಾಸನ ಮಠದ ಜಗದ್ಗುರು ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ.

ಸರ್ವೋಚ್ಚ ನ್ಯಾಯಾಲಯದ ಗೌರವಾನ್ವಿತ ನಿವೃತ್ತ ನ್ಯಾಯಮೂರ್ತಿ ಶಿವರಾಜ ಪಾಟೀಲ್ ಸಮಾರಂಭ ಉದ್ಘಾಟಿಸಲಿದ್ದಾರೆ. ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ನೇತೃತ್ವ ವಹಿಸುವರು. ಸಂಸದ ಸಾಗರ ಖಂಡ್ರೆ, ಮಾಜಿ ಶಾಸಕ ಪ್ರಕಾಶ ಖಂಡ್ರೆ ಸೇರಿದಂತೆ ಮುಂತಾದ ಗಣ್ಯರು, ಸಾಹಿತಿಗಳು, ಬುದ್ಧಿಜೀವಿಗಳು, ಚಿಂತಕರು ಭಾಗವಹಿಸಲಿದ್ದಾರೆ ಎಂದರು. ಗಡಿಭಾಗದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಶೈಕ್ಷಣಿಕ, ಸಾಮಾಜಿಕ, ಧಾರ್ಮಿಕ, ಸಾಹಿತ್ಯ ಮತ್ತು ಅಧ್ಯಾತ್ಮಿಕ ಕ್ಷೇತ್ರದಲ್ಲಿ ಕಳೆದ ನಾಲ್ಕು ದಶಕಗಳಿಂದ ದಣಿವರಿಯದ ಸೇವೆ ಸಲ್ಲಿಸುತ್ತಿದ್ದಾರೆ. ವಿಶ್ವಗುರು ಬಸವಣ್ಣನವರ ಆಶಯದಂತೆ ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರ ಮಾರ್ಗದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಈ ಭಾಗವನ್ನು ಬೆಳಗಿಸುವ ಕೆಲಸ ಮಾಡುತ್ತಿದ್ದಾರೆ. ಅಂತಹ ಪೂಜ್ಯರು 75ನೆಯ ವಸಂತಕ್ಕೆ ಪಾದಾರ್ಪಣೆ ಮಾಡುತ್ತಿರುವುದು ಅಸಂಖ್ಯಾತ ಬಸವ ಭಕ್ತರಲ್ಲಿ ಸಂತಸ ತರಿಸಿದೆ. ಸಮಾಜದಲ್ಲಿ ನಿಸ್ವಾರ್ಥ ಸೇವೆಗೈಯುತ್ತಿರುವ ಪೂಜ್ಯರ ಅಮೃತ ಮಹೋತ್ಸವ ಭಕ್ತರ ಆಶಯದಂತೆ ಸಂಭ್ರಮದಿಂದ ಆಚರಿಸಲಾಗುತ್ತಿದ್ದು ಬಸವ ಭಕ್ತರು, ವಿವಿಧ ಸಂಘ ಸಂಸ್ಥೆಯ ಮುಖಂಡರು, ಸಾಹಿತಿಗಳು, ಚಿಂತಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಈ ಐತಿಹಾಸಿಕ ಸಮಾರಂಭಕ್ಕೆ ಸಾಕ್ಷಿಯಾಗಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

> ಗಡಿಭಾಗದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಯಾವುದೇ ಫಲಾಪೇಕ್ಷೆ ಇಲ್ಲದೇ ನಿರಾಶ್ರಿತರು, ನಿರ್ಗತಿಕರು, ದುರ್ಬಲ ವರ್ಗದವರಿಗೆ ಅನ್ನ, ಆಶ್ರಯ, ಅಕ್ಷರ ಕಲ್ಪಿಸಿ ಅವರ ಬಾಳನ್ನು ಬೆಳಗಿಸುತ್ತಿದ್ದಾರೆ. ಅಂತಹ ಪೂಜ್ಯರ ಅಮೃತ ಮಹೋತ್ಸವ ಐತಿಹಾಸಿಕವಾಗಿ ಆಚರಿಸಲಾಗುತ್ತಿದ್ದು ನಾಡಿನ ಬಸವ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಈ ಸಮಾರಂಭ ಯಶಸ್ವಿಗೊಳಿಸಬೇಕು.
>
> –ಈಶ್ವರ ಖಂಡ್ರೆ ಅಧ್ಯಕ್ಷರು ಅಮೃತ ಮಹೋತ್ಸವ ಸ್ವಾಗತ ಸಮಿತಿ ಭಾಲ್ಕಿ

# ಚಿಟ್ಟಾ ಕ್ರಾಸದಿಂದ ಚಿಟ್ಟಾವಾಡಿ ಮಾರ್ಗವಾಗಿ ಘೋಡಂಪಳ್ಳಿ ಗ್ರಾಮದ ರಸ್ತೆ ದುರಸ್ತಿಗೆ ಆಗ್ರಹಿಸಿ ಮನವಿ



ಬೀದರ. ಆ. 22 : ಈ ಮೇಲ್ಕಂಡಕ್ಕೆ ವಿಷಯಕ್ಕೆ ಸಂಬಂಧಿಸಿದಂತೆ, ಮಹಾನಾಯಕ ರಕ್ಷಣಾ ವೇದಿಕೆ ಜಿಲ್ಲಾ ಘಟಕ ಬೀದರ್ ಹಾಗೂ ಚಿಟ್ಟಾವಾಡಿ ಮತ್ತು ಘೋಡಂಪಳ್ಳಿ ಗ್ರಾಮಸ್ಥರ ಪರವಾಗಿ ತಮ್ಮಲ್ಲಿ ವಿನಂತಿಸಿಕೊಳ್ಳುವುದೇನೆಂದರೆ. ಚಿಟ್ಟಾವಾಡಿ ಮುಖ್ಯರಸ್ತೆಯಾದ ಗುಂಪ ಚಿಟ್ಟಾ ಕ್ರಾಸದಿಂದ ಘೋಡಂಪಳ್ಳಿ ಗ್ರಾಮದ ವರೆಗೆ ಅಲ್ಲಲ್ಲಿ ತಗ್ಗು ಗುಂಡಿಗಳನ್ನು ಬಿದ್ದು, ಸಾರ್ವಜನಿಕರಿಗೆ ಓಡೋಳದಕ್ಕೆ ಹಾಗೂ ದ್ವಿಚಕ್ರಗಳ ವಾಹನಗಳು ವಿದ್ಯಾರ್ಥಿಗಳಿಗೆ ಸಾಗಿಸುವ ಶಾಲಾ ವಾಹನಗಳಿಗೆ ತುಂಬಾ ತೊಂದರೆಗೆ ಅನುಭವಿಸುತ್ತಲಿದ್ಧಾರೆ. ರಸ್ತೆಯ ಸಂಪೂರ್ಣವಾಗಿ ಹಾಳಾಗಿರುವುದರಿಂದ ದ್ವಿಚಕ್ರ ವಾಹನ ಸವಾರರು ಪದೇ ಪದೇ ಬಿದ್ದು ಸಣ್ಣ ಪುಟ್ಟ ಗಾಯಗಳು ಸಂಭವಿಸುತ್ತಲಿವೆ. ಇದರಿಂದ ಗ್ರಾಮಸ್ಥರು ತುಂಬಾ ತೊಂದರೆಯನ್ನು ಅನುಭವಿಸುತ್ತಲಿದ್ದಾರೆ. ಸದ್ಯ ಮಳೆಗಾಲ ಇದ್ದಿರುವುದರಿಂದ ರಸ್ತೆಯ ಮೇಲೆ ಬಿದ್ದು ತಗ್ಗು ಗುಂಡಿಯಲ್ಲಿ ನೀರು ನಿಂತು ಗುಂಡಿಗಳ ಆಳುಗಳನ್ನು ಗೊತ್ತಾಗದೆ ಆಟೋಗಳ ಸಹ ಸಿಕ್ಕಿಬೀಳುತ್ತಲಿವೆ. ಆದ್ದರಿಂದ ದಯಮಾಡಿ ತಾವುಗಳು ತಕ್ಷಣವೇ ತಗ್ಗು ಗುಂಡಿಗಳು ಓಡಾಡುವುದಕ್ಕೆ ವ್ಯವಸ್ಥೆ ಮಾಡಿ. ಮುಂದಿನ ದಿನಗಳಲ್ಲಿ ಪಕ್ಕ ರಸ್ತೆಯನ್ನು ಪೂರ್ಣಗೊಳಿಸಬೇಕೆಂದು ತಮ್ಮಲ್ಲಿ ನಮ್ಮ ಸಂಘಟನೆ ವತಿಯಿಂದ ವಿನಂತಿಸಿಕೊಳ್ಳುತ್ತೇವೆ.

ಒಂದು ವೇಳೆ ತಕ್ಷಣವೇ ರಸ್ತೆಯ ಮೇಲೆ ಬಿದ್ದು ತಗ್ಗು ಗುಂಡಿಗಳನ್ನು ಮುಚ್ಚದೆ ಹೋದಲ್ಲಿ ಚಿಟ್ಟವಾಡಿ ಘೋಡಂಬಳ್ಳಿ ಗ್ರಾಮಸ್ಥರು ಹಾಗೂ ನಮ್ಮ ಸಂಘಟನೆಯ ವತಿಯಿಂದ ಉಗ್ರವಾದ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸುತ್ತೇವೆ.

ಇದೇ ಸಂದರ್ಭದಲ್ಲಿ. ಜಿಲ್ಲಾಧ್ಯಕ್ಷರು ಗೋಪಾಲ ದೊಡ್ಡಿ, ಜಿಲ್ಲಾ ಉಪಾಧ್ಯಕ್ಷರು ದಿಲೀಪ್ ರೇಕಿ, ತಾಲ್ಲೂಕ್ಸಾ ಉಪಾಧ್ಯಕ್ಷರು ದಿಲೀಪ ನಾಯಕ, ನಾಗಪ್ಪಾ ಕುರಿಕಾಯನೋರ ಘೋಡಂಪಳ್ಳಿ ಗ್ರಾಮಸ್ಥರು ಪ್ರದೀಪ ದೊಡ್ಡಮನಿ ಸದಸ್ಯರಾದ ರಜನಿಕಾಂತ್ ಕಾಂಬ್ಳೆ ಮತ್ತು ಚರಣ್ ಉಪಸ್ಥಿತರಿದ್ದರು.

# ರಕ್ತದಾನ ಇನ್ನೊಬ್ಬರ ಜೀವ ಉಳಿಸುತ್ತದೆ: ಪಟ್ಟದ್ದೇವರು




ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.22: ರಕ್ತದಾನವು ಶ್ರೇಷ್ಠ ದಾನವಾಗಿದೆ. ಅದು ತುರ್ತು ಸಂದರ್ಭದಲ್ಲಿ ಇನ್ನೊಬ್ಬ ವ್ಯಕ್ತಿಯ ಜೀವವನ್ನು ಉಳಿಸಲು ಸಹಾಯ ಮಾಡುತ್ತದೆ ಎಂದು ಹಿರೇಮಠದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು.

ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲ ಶಿಕ್ಷಣ ಸಮುಚ್ಛಯದಲ್ಲಿ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ನಿಮಿತ್ತ ಚನ್ನಬಸವೇಶ್ವರ ಗುರುಕುಲ ಪ್ರಥಮ ದರ್ಜೆ ಪದವಿ ಕಾಲೇಜು ವತಿಯಿಂದ ಆಯೋಜಿಸಿದ್ದ ರಕ್ತದಾನ ಶಿಬಿರದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಯುವ ಜನಾಂಗ ತಮಗೆ ದೊರೆಯುವ ಸತ್ಕಾರ್ಯದಲ್ಲಿ ತೊಡಗಿಸಿಕೊಳ್ಳಬೇಕು. ಸದಾ ಸಮಾಜಮುಖಿಗಳಾಗಿ ಕೆಲಸ ಮಾಡಬೇಕು. ಜನ ಸೇವೆ, ಸಮಾಜ ಸೇವೆ ಉತ್ತಮ ವ್ಯಕ್ತಿತ್ವವನ್ನು ನಿರ್ಮಿಸುತ್ತದೆ ಎಂದು ಹೇಳಿದರು.

ಆರೋಗ್ಯವಂತ ವ್ಯಕ್ತಿಗಳು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡುವುದರ ಲಾಭ ರೋಗಿಗಳು, ಗರ್ಭಿಣಿಯರು, ಅಪಘಾತಕ್ಕೀಡಾದವರು ಹಾಗೂ ಶಸ್ತ್ರಚಿಕಿತ್ಸೆಗೊಳಗಾದವರು ಪಡೆ–ಯುತ್ತಾರೆ ಎಂದು ತಿಳಿಸಿದರು.

ಅಪೇಕ್ಸ್ ಕೇಂದ್ರದ ಡಾ. ಮಯೂರಿ ಪಾಠಕ್ ಮಾತನಾಡಿ, ರಕ್ತದಾನದಿಂದ ಆರೋಗ್ಯ ವೃದ್ಧಿಯಾಗುತ್ತದೆ. ಯುವ ಜನತೆ ಉತ್ತಮ ಆಹಾರ ಸೇವನೆ, ಉತ್ತಮ ಹವ್ಯಾಸಗಳನ್ನು ಹೊಂದಿರಬೇಕು ಎಂದು ಹೇಳಿದರು.

> ನಾಡೋಜ ಡಾ. ಬಸವಲಿಂಗ ಪಟ್ಟದೇವರ ಅಮೃತ ಮಹೋತ್ಸವ ನಿಮಿತ್ತ ಯುವಕರು, ಸಿಬ್ಬಂದಿ, ವಿದ್ಯಾರ್ಥಿಗಳು ಸೇರಿದಂತೆ ಸುಮಾರು 75 ಜನರು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿರುವುದು ಸಂತಸದ ಸಂಗತಿ.
>
> –ಗುರುಬಸವ ಪಟ್ಟದ್ದೇವರು, ಹಿರೇಮಠದ ಪೀಠಾಧಿಪತಿ

ಸಂಸ್ಥೆಯ ಆಡಳಿತಾಧಿಕಾರಿ ಮೋಹನರೆಡ್ಡಿ, ಪ್ರಾಚಾರ್ಯರಾದ ಬಸವರಾಜ ಮೊಳಕೀರೆ, ಕಿರಣ ಸಜ್ಜನಶೆಟ್ಟಿ, ಸುಧಾಕರ ಬಿರಾದಾರ, ಮನೋಹರ ಕಾಡೋದೆ, ಪಾಂಚಾಳ ಸರ್, ಅಪೇಕ್ಸ್ ಕೇಂದ್ರದ ಸಿಬ್ಬಂದಿ ದೇವೇಂದ್ರ, ಭರತ, ಸುರೇಶ, ಜಾನ್ಸನ್, ರೋಶನಿ, ಸುಷ್ಮಾ, ವಿಷ್ಣುಕಾಂತ ಸೇರಿದಂತೆ ಇತರರು ಇದ್ದರು.

# ಬೀದಿ ನಾಯಿಗಳ ಹಾವಳಿ ತಡೆಗೆ ಕ್ರಮ ಕೈಗೊಳ್ಳುವಂತೆ ಆಗ್ರಹ



ಔರಾದ:ಅ.22: ಪಟ್ಟಣ ಪಂಚ್ಯಾಯತ ಮುಖ್ಯಧಿಕಾರಿ ಹಾಗೂ ಪಶು ವೈದ್ಯಾಧಿಕಾರಿಗಳು

ಪಶು ಅಸ್ಪತ್ರೆ ಬೀದಿ ನಾಯಿಗಳ ಹಾವಳಿ ತಡೆಗೆ ಕ್ರಮ ಕೈಗೊಳ್ಳುವಂತೆ ವೀರಶೈವ ಲಿಂಗಾಯತ ಸಂಘಟನೆ ಅಧ್ಯಕ್ಷರು ಆನಂದ ದ್ಯಾಡೆ ಮನವಿ ಸಲ್ಲಿಸಿದ್ದರು. ಪಟ್ಟಣದಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು ರಸ್ತೆಗೆ ತೆರಳುವ ಅಮಾಯಕರ ಮೇಲೆ ದಾಳಿ ಮಾಡುತ್ತಿವೆ. ಇದ–ರಿಂದ ಪಟ್ಟಣದ ನಿವಾಸಿಗಳು ಕಲ್ಲು ಹಿಡಿದು ಭಯದ ವಾತಾವರಣದಲ್ಲಿ ಓಡಾಡುವಂತಾಗಿದೆ. ಕುರುಬರ ಓಣಿ, ಬಸ್ ಡಿಪೋ ರಸ್ತೆ, ಶೆಟಕಾರ ಓಣಿ, ಬುಟ್ಟೆ ಗಲ್ಲಿ, ಪತಗೆ ಗಲ್ಲಿ, ಗೀರಣೆ ಲೇಔಟ್, ಶಿಕ್ಷಕರ ಕಾಲೋನಿ ಸೇರಿದಂತೆ ಪಟ್ಟಣದ ನಾನಾ ಬಡಾವಣೆಗಳಲ್ಲಿ ಬೀದಿ ನಾಯಿಗಳು ಬಿಡು ಬಿಟ್ಟಿದ್ದು ಹಲವರ ಮೇಲೆ ದಾಳಿ ನಡೆಸಿವೆ. ಬಡಾವಣೆ ನಿವಾಸಿಗಳು ತನ್ನ ಮಕ್ಕಳಿಗೆ ಹೊರಗಡೆ ಬಿಡಲು ಭಯ ಬೀಳುತ್ತಿದ್ದಾರೆ, ಪಟ್ಟಣದ ನಿವಾಸಿಗಳ ಮೇಲೆ ದಾಳಿ ನಡೆಸಿ ಕಚ್ಚಿ ಗಾಯಗೊಳಿಸಿದ ಘಟನೆ ನಿನ್ನೆ ನಡೆದಿದೆ. ಗಾಯಾಳು ಗೆ ಆಸ್ಪತ್ರೆಗೆ ದಾಖಲಿಸಲಾಗಿದೆ. ಹೀಗೆ ಮುಂದುವರಿದರೆ ಶಾಲಾ ಕಾಲೇಜುಗಳಿಗೆ ತೆರಳುವ ಮಕ್ಕಳಲ್ಲಿ ಭಯ ಆವರಿಸಿದೆ. ಕೂಡಲೇ ಪಟ್ಟಣ ಪಂಚಾಯಿತಿ ಅಧಿಕಾರಿಗಳು ಹಾಗೂ ಪಶು ಆಸ್ಪತ್ರೆ ಸಿಬ್ಬಂದಿಗಳು ಬೀದಿ ನಾಯಿಗಳನ್ನು ಹಿಡಿದು ಜನಸಾಮಾನ್ಯರ ಓಡಾಟ–ಕ್ಕೆ ಅನುವು ಮಾಡಿಕೊಡಬೇಕು ಎಂದು ಮನವಿ ಮಾಡಿದ್ದಾರೆ ಈ ಸಂದರ್ಭದಲ್ಲಿ ತಾಲೂಕು ಅಧ್ಯಕ್ಷ ಆನಂದ ಪಿ.ದ್ಯಾಡೆ, ನಗರಾಧ್ಯಕ್ಷ ಅಮರಸ್ವಾಮಿ ಸ್ಥಾವರಮಠ, ಚನ್ನಬಸವ ಗಜರೆ, ವಿವೇಕಾನಂದ ಉಪ್ಪೆ, ಶ್ರೀಕಾಂತ ಎಡವೆ, ಅವಿನಾಶ ಪಾಂಚಾಳ, ಆನಂದ ಸೋನಾರ, ಗಣೇಶ ಭಾಲ್ಕೆ, ಕಿರಣ ಫುಲಾರಿ, ಸೇರಿದಂತೆ ಇನ್ನಿತರರಿದ್ದರು.

# ಬೆಳೆ ಹಾನಿ ವರದಿ ಕುರಿತು ಜಂಟಿ ಕೃಷಿ ನಿರ್ದೇಶಕರಿಂದ ಸ್ಪಷ್ಟೀಕರಣ

ಕಲಬುರಗಿ:ಆ.22: ಕಲಬುರಗಿ ಜಿಲ್ಲೆಯಲ್ಲಿ ಆಗಸ್ಟ್ ಎರಡನೇ ವಾರದಿಂದ ಸತತವಾಗಿ ಸುರಿದ ಮಳೆಯಿಂದ ಬೆಳೆ ಹಾನಿಯಾಗಿರುವ ಪ್ರಯುಕ್ತ ಈಗಾಗಲೇ ಕಲಬುರಗಿ ಜಿಲ್ಲಾಧಿಕಾರಿಗಳು ಕೃಷಿ, ಕಂದಾಯ ಮತ್ತು ತೋಟಗಾರಿಕೆ ಇಲಾಖೆಗಳನ್ನೊಳಗೊಂಡಂತೆ ಜಂಟಿ ಸಮೀಕ್ಷೆಗೆ ಆದೇಶಿಸಿದ್ದು, ಜಂಟಿ ಕೃಷಿ ನಿರ್ದೇಶಕರಿಂದ ಯಾವುದೇ ಬೆಳೆ ಹಾನಿ ನಷ್ಟದ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವುದಿಲ್ಲ ಎಂದು ಕಲಬುರಗಿ ಕೃಷಿ ನಿರ್ದೇಶಕರು ಸ್ಪಷ್ಟೀಕರಣ ನೀಡಿದ್ದಾರೆ. ಅದ್ದರಿಂದ ರೈತಬಾಂಧವರು ಬೆಳೆ ಹಾನಿಯ ಕುರಿತು ಯಾವುದೇ ಸುಳ್ಳು ವದಂತಿಗೆ ಕಿವಿಗೊಡಬಾರದು.

ರೈತವಾರು ಬೆಳೆ ಹಾನಿ ಜಂಟಿ ಸಮೀಕ್ಷೆ ಕಾರ್ಯ ಪ್ರಗತಿಯಲ್ಲಿದ್ದು, ಜಂಟಿ ಬೆಳೆ ಹಾನಿ ಸಮೀಕ್ಷೆ ಪೂರ್ಣಗೊಂಡ ನಂತರ ನಿಖರವಾದ ಬೆಳೆಹಾನಿಯ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

# ಮುಖ್ಯಮಂತ್ರಿಗಳಿಗೆ ಧನ್ಯವಾದ ತಿಳಿಸಿದ ಮಾದಿಗ ಸಮಾಜದ ಮುಖಂಡರು

ಮಲ್ಲಮ್ಮ ನುಡಿ ವಾರ್ತೆ

ಕಲ್ಬುರ್ಗಿಯಲ್ಲಿ ಜಿಲ್ಲಾ ಮಾದಿಗ ಸಮನ್ವಯ ಸಮಿತಿ ವತಿಯಿಂದ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಶಾಮ್ ನಾಟಿಕರ್ ಅವರು ಮಾದಿಗ ಮೀಸಲಾತಿಯನ್ನು ಸುಮಾರು 1989–90 ರಲ್ಲಿ ಒಳಮೀಸಲಾತಿ ಹೋರಾಟವನ್ನು ಅನೇಕ ಮುಖಂಡರಿಂದ ಪ್ರಾರಂಭಗೊಂಡು ಹೋರಾಟಕ್ಕೆ ಹಿಂದಿನ ಸುಮಾರು 35–40 ವರ್ಷ ಸಿದ್ರಾಮಯ್ಯ ರವರು ಮಾನ್ಯ ಮುಖ್ಯಮಂತ್ರಿಗಳು, ಇವರ ಅನುಪಸ್ಥಿತಿಯಲ್ಲಿ ನಾಗಮೋಹನ ದಾಸ ವರದಿ ಅನುಸಾರವಾಗಿ ನಮ್ಮ ಸಮುದಾಯಕ್ಕೆ ಒಳಮೀಸಲಾತಿಯನ್ನು ದಿನಾಂಕ:18/08/2025 ರಂದು ಘೋಷಣೆ ಆಗಿದ್ದಕ್ಕೆ ನಮ್ಮ ಮಾದಿಗ ಸಮಾಜದ ವತಿಯಿಂದ ಕೃತಜ್ಞತೆಗಳು.



ಒಳಮಿಸಲಾತಿ ಮಾದಿಗರ ಹೋರಾಟದಿಂದ ಪರಿಶಿಷ್ಟರ 101 ಜಾತಿ 3 ಗುಂಪಾಗಿ ವಿಂಗಡನೆಗೆ ಒಳಮೀಸಲಾತಿ ಜಾರಿ ಆಗಿರುತ್ತದೆ. ಕರ್ನಾಟಕದ ಅನೇಕ ಸಮುದಾಯದ ಎಲ್ಲಾ ಜಾತಿ ವರ್ಗದವರು ಪರೋಕ್ಷವಾಗಿ ಬೆಂಬಲ ನೀಡಿರುತ್ತಾರೆ. ಮತ್ತು ಅನೇಕ ಸರ್ಕಾರಿ / ಅರೆ ಸರ್ಕಾರಿ ನೌಕರರು, ರಾಜಕೀಯ ಮುಖಂಡರು ಈ ಹೋರಾಟಕ್ಕೆ ಬೆಂಬಲ ನೀಡಿರುತ್ತಾರೆ. ಈ ಒಳ ಮೀಸಲಾತಿ ಹೋರಾಟಕ್ಕೆ ಅನೇಕ ಮುಖಂಡರುಗಳು 35–40 ವರ್ಷಗಳಿಂದ ಹೋರಾಟ ಮಾಡಿದಕ್ಕಾಗಿ ಪ್ರತಿಫಲ ಸಿಕ್ಕಂತಾಗಿದೆ. ಈ ಹೋರಾಟಕ್ಕೆ ಸಂಬಂಧಪಟ್ಟ ಕಲಬುರಗಿ ಜಿಲ್ಲೆಯ, ಮಾಪಣ್ಣ ಹದನೂರ, ಶಾಮ ನಾಟಕಾರ, ಶ್ರೀ ಭೀಮಣ್ಣ ಬಿಲ್ಲವ, ಶ್ರೀ ಪರಮೇಶ್ವರ ಖಾನಾಪೂರ, ದಿ॥ ಜಿ.ರಾಮಕೃಷ್ಣ ಮಾಜಿ ಸಚಿವರು, ಡಾ. ಗೋಪಾಲರಾವ ತೆಲಂಗಿ, ವಿಜಯಕುಮಾರ ಜಿ. ರಾಮಕೃಷ್ಣ, ರಾಜು ವಾಡೇಕರ್, ಲಿಂಗರಾಜ್ ತಾರಫೈಲ್, ನಾಗೇಶ ನಿವೃತ್ತ ಅಧಿಕಾರಿ, ಶ್ರೀ ಗೋಪಿಕೃಷ್ಣ ಗುಡೆನವರು, ಶ್ರೀ ದಶರಥ ಕಲಗುರ್ತಿ, ಮಲ್ಲಪ್ಪ ಚಿಗಾನೂರ, ಶ್ರೀ ರಮೇಶ ವಾಡೇಕರ್, ಮಲ್ಲಿಕಾರ್ಜುನ ಜೀನಕೇರಿ, ಬಾಬು ಸುಂತಾಣ, ಶ್ರೀ ಪ್ರದೀಪ ಭಾವೆ, ಶ್ರೀ ರಂಜಿತ ಮೂಲಿಮನಿ, ಶ್ರೀ ರುಕ್ಕಪ್ಪ ಕಾಂಬಳೆ, ನಾಗಪ್ಪ ಇದ್ದರು.

# ಗಣೇಶೋತ್ಸವ: ಭೂಮಿ ಪೂಜಾ ಸಮಾರಂಭ

ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಆಗಸ್ಟ್ 27ರಂದು ಪಟ್ಟಣದಲ್ಲಿ ಶ್ರೀ ಬಾಲಗಂಗಾಧರ ತಿಲಕ ಯುವಕ ಮಂಡಳಿ ವತಿಯಿಂದ ಮಹಾವೀರ ಟಾಕೀಸ್ ಹತ್ತಿರದ ರಥದ ಮನೆ ಮುಂಭಾಗದಲ್ಲಿ ಒಂದನೇ ವರ್ಷದ ಗಣೇಶೋತ್ಸವ ಅಂಗವಾಗಿ ಪ್ರತಿಷ್ಠಾಪನೆಗೊಳ್ಳಲಿರುವ ಗಣೇಶ ಮೂರ್ತಿಯ ಸ್ಥಳಕ್ಕೆ ಭೂಮಿ ಪೂಜೆಯನ್ನು ಶ್ರೀ ಖಾಸ್ಗತೇಶ್ವರ ಮಠದ ಪರಮ ಪೂಜ್ಯ ಸಿದ್ದಲಿಂಗ



ದೇವರ ಸಾನಿಧ್ಯದಲ್ಲಿ ಶುಕ್ರವಾರ ನೆರವೇರಿಸಲಾಯಿತು. ಭೂಮಿ ಪೂಜ ಸಮಾರಂಭದಲ್ಲಿ ಗಣೇಶೋತ್ಸವ ಸಮಿತಿಯ ಪದಾಧಿಕಾರಿಗಳಾದ ರಾಘವೇಂದ್ರ ಮೂಲಿಮನಿ, ರಾಜೇಶ ಹಜೇರಿ, ಅಭಿಷೇಕ್ ಹಜೇರಿ, ರಾಜು ಕಟ್ಟಿಮನಿ, ಷಣ್ಮುಖ ವಿಭೂತಿ, ಕಾಸು ವಿಭೂತಿ, ರಿತೇಶ ಗೌಡಗೇರಿ, ಮೀನಾಕ್ಷಿ ಹಜೇರಿ, ತಾರಾಬಾಯಿ ಹಜೇರಿ ಹಾಗೂ ರೇಣುಕಾ ರಜಪೂತ ಇದ್ದರು.

## ತೋಟಗಾರಿಕೆ ಬೆಳೆಗಳಲ್ಲಿ ಪಾರ್ಥೇನಿಯಂ ಕಳೆಯ ಹಾವಳಿ, ಇಳುವರಿ ಮೇಲೆ ಆಗುತ್ತಿರುವ ದುಷ್ಪರಿಣಾಮಗಳ ಬಗ್ಗೆ ಬೆಳಕು ಚೆಲ್ಲಿದರು

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಆಗಸ್ಟ್ 22: ತೋಟಗಾರಿಕೆ ಬೆಳೆಗಳಲ್ಲಿ ಪಾರ್ಥೇನಿಯಂ ಕಳೆಯ ಹಾವಳಿ ಮತ್ತು ಇಳುವರಿ ಮೇಲೆ ಆಗುತ್ತಿರುವ ದುಷ್ಪರಿಣಾಮಗಳ ಬಗ್ಗೆ ಬೆಳಕು ಚೆಲ್ಲಿದರು. ಪಾರ್ಥೇನಿಯಂ ಭಾರತ ದೇಶಕ್ಕೆ ಮೆಕ್ಸಿಕೋ ದೇಶದಿಂದ ಗೋಧಿ ಬೆಳೆಯೊಂದಿಗೆ 1950 ದಶಕದಲ್ಲಿ ಬಂದು ದೇಶದ ತುಂಬೆಲ್ಲಾ ಹರಡಿಕೊಂಡು ಮನುಕುಲಕ್ಕೆ, ಪ್ರಾಣಿಗಳಿಗೆ ಹಾಗೂ ಪರಿಸರದ ಮೇಲೆ ಕೆಟ್ಟ ಪ್ರಭಾವ ಬೀರಿ ಬಹಳಷ್ಟು ನಷ್ಟ ಉಂಟು ಮಾಡುತ್ತಿದೆ ಎಂದು ಯಾದಗಿರಿ ತೋಟಗಾರಿಕೆ ವಿಸ್ತರಣಾ ಶಿಕ್ಷಣ ಘಟಕ ವಿಸ್ತರಣಾ ಮುಂದಾಳು ಡಾ.ಶಶಿಕಲಾ ಎಸ್.ರುಳಿ ಅವರು ಹೇಳಿದರು.



ಯಾದಗಿರಿ ತೋಟಗಾರಿಕೆ ವಿಸ್ತರಣಾ ಶಿಕ್ಷಣ ಘಟಕ ವತಿಯಿಂದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಕಟಗಿ ಶಹಪೂರದಲ್ಲಿ 2025ರ ಆಗಸ್ಟ್ 22 ರಂದು ಪಾರ್ಥೇನಿಯಂ ಜಾಗೃತಿ ಸಪ್ತಾಹ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪಾರ್ಥೇನಿಯಂ ಗಿಡವು ಮೊಳಕೆಯೊಡೆದ 40 ದಿನಗಳೊಳಗಾಗಿ ಪ್ರತಿ ದೊಡ್ಡ ಗಿಡವು ಒಂದು ಲಕ್ಷಕ್ಕೂ ಅಧಿಕ ಬೀಜಗಳನ್ನು ಉತ್ಪಾದಿಸುವುದಾಗಿ ತಿಳಿಸಿದರು. ಅಲ್ಲದೇ ಪಾರ್ಥೇನಿಯಂ ಗಿಡಗಳ ನಿರ್ಮೂಲನೆಯ ವಿವಿಧ ಭೌತಿಕ, ರಾಸಾಯನಿಕ, ಜೈವಿಕವಾಗಿ ಹತೋಟಿ ಮಾಡುವ ಬಗ್ಗೆ ವಿವರಿಸಿದರು. ಕಛೇರಿಯ ಸುತ್ತಮುತ್ತಲ್ಲಿರುವ ಪಾರ್ಥೇನಿಯಂ ತೆಗೆಯುವ ಮೂಲಕ ಅರಿವು ಮೂಡಿಸಿದರು.

ಶಾಲೆಯ ಮುಖ್ಯೋಪಾಧ್ಯಾಯರಾದ ಶ್ರೀ ಈಶ್ವರಪ್ಪ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು, ಪಾರ್ಥೇನಿಯಂ ಗಿಡದಿಂದ ಆರೋಗ್ಯಕ್ಕೆ ಹಾಗೂ ಬೆಳೆಗಳಿಗೆ ಆಗುವ ಹಾನಿಯ ಬಗ್ಗೆ ವಿವರಣೆ ನೀಡಿದರು. ಪ್ರಗತಿಪರ ರೈತರಾದ ಶ್ರೀ ಅಮ್ಮರಣ್ಣ, ಮಕ್ಕಳಿಗೆ ತೋಟಗಾರಿಕೆ ಬೆಳೆಗಳ ಬಗ್ಗೆ ಹಾಗೂ ಪಾರ್ಥೇನಿಯಂ ಕಳೆಯಿಂದ ಉಂಟಾಗುವ ರೋಗಗಳ ಬಗ್ಗೆ ಮಕ್ಕಳಿಗೆ ಜಾಗೃತಿ ಮೂಡಿಸಿದರು. ಈ ಸಂದರ್ಭದಲ್ಲಿ ಶಾಲೆಯ ಸಿಬ್ಬಂದಿ ವರ್ಗ ಹಾಗೂ ನೂರಾರು ವಿದ್ಯಾರ್ಥಿಗಳು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಸಮಾಜ ಕಲ್ಯಾಣ ಸಚಿವ ಶ್ರೀ ಡಾ.ಹೆಚ್.ಸಿ ಮಹದೇವಪ್ಪ ಅವರ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಆಗಸ್ಟ್ 22– ಸಮಾಜ ಕಲ್ಯಾಣ ಸಚಿವರು ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಡಾ.ಹೆಚ್.ಸಿ ಮಹದೇವಪ್ಪ ಅವರು ಇದೇ ಆಗಸ್ಟ್ 24 ರಂದು ಯಾದಗಿರಿ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ ಪ್ರವಾಸವು ಕೆಳಗಿನಂತಿದೆ ಎಂದು ಸಚಿವರ ವಿಶೇಷ ಕರ್ತವ್ಯಾಧಿಕಾರಿ ಎಂ ಶಿವಣ್ಣ ಅವರು ತಿಳಿಸಿದ್ದಾರೆ.

2025ರ ಆಗಸ್ಟ್ 24 ರಂದು ಭಾನುವಾರ ರಂದು ಮಧ್ಯಾಹ್ನ 1.15 ಗಂಟೆಗೆ ಶಹಾಪೂರ ಆಗಮಿಸಿ, ಯಾದಗಿರಿ ಜಿಲ್ಲೆಯ ಶಹಾಪೂರ ತಾಲೂಕಿನ ಬಿ.ಬಿ. ರೋಡ ಆರಬೋಳ ಕಲ್ಯಾಣ ಮಂಟಪದಲ್ಲಿ ಶೋಷಿತ ವರ್ಗಗಳ ಐಕ್ಯತಾ ಸಮಾವೇಶ ಕಾರ್ಯಕ್ರಮದಲ್ಲಿ ಭಾಗವಹಿಸುವರು. ನಂತರ ಸಂಜೆ 5 ಗಂಟೆಗೆ ಹೈದರಾಬಾದ್‌ಗೆ ಪ್ರಯಾಣ ಬೆಳೆಸುವರು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಅಗಸ್ಟ್ 22– ಮೈಸೂರು ವಿಶ್ವವಿದ್ಯಾನಿಲಯಕ್ಕೆ ಶಾಶ್ವತ ಸಂಯೋಜನೆಗೊಂಡಿರುವ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ), ಸಿದ್ಧಾರ್ಥನಗರ, ಮೈಸೂರು ಸಂಸ್ಥೆಯಲ್ಲಿ ಮಾಸ್ಟರ್ ಆಫ್ ವಿಜ್ಯುಯಲ್ ಆರ್ಟ್ಸ್(ಎಂ.ವಿ.ಎ.) (ಎರಡು ಶಯಕ್ಷಣಿಕ ವರ್ಷದ ನಾಲ್ಕು ಸೆಮಿಸ್ಟರ್ ಸಿ.ಬಿ.ಸಿ.ಎಸ್.ಪದ್ಧತಿ) ದೃಶ್ಯ ಕಲೆಯಲ್ಲಿ 2025–26ನೇ ಶೈಕ್ಷಣಿಗೆ ಸಾಲಿಗೆ ಪ್ರಥಮ ಸ್ನಾತಕೋತ್ತರ ಪದವಿ ಪ್ರವೇಶಾತಿಗಾಗಿ ಬಿ.ವಿ.ಎ.ಸ್ನಾತಕ ಪದವಿಯಲ್ಲಿ ಉತ್ತೀರ್ಣ ರಾದ ವಿದ್ಯಾರ್ಥಿಗಳಿಂದ ಆಫ್ ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಮೈಸೂರು ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ) ಡೀನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸ್ನಾತಕೋತ್ತರ ಪದವಿಯಲ್ಲಿ ಚಿತ್ರಕಲೆ ವಿಭಾಗ, ಗ್ರಾಫಿಕ್ಸ್ ವಿಭಾಗ ಮತ್ತು ಶಿಲ್ಪಕಲೆ ವಿಭಾಗಗಳಲ್ಲಿ ವಿಶೇಷ ಅಧ್ಯಯನದ ಸ್ನಾತಕೋತ್ತರ ಪದವಿಯಾಗಿರುತ್ತದೆ. ಪ್ರಥಮ ವರ್ಷದ ಮಾಸ್ಟರ್ ಆಫ್ ವಿಜ್ಯುಯಲ್ ಆರ್ಟ್ಸ್(ಎಂ.ವಿ.ಎ.) ಪ್ರವೇಶತಿಗಾಗಿ ಚಿತ್ರಕಲೆ ವಿಭಾಗ, ಗ್ರಾಫಿಕ್ಸ್ ವಿಭಾಗ ಮತ್ತು ಶಿಲ್ಪಕಲೆ ವಿಭಾಗಗಳಿಗೆ ಕಛೇರಿಯಿಂದ ಅರ್ಜಿಗಳನ್ನು ಪಡೆದು ದಿನಾಂಕ: 30–08–2025 ರೊಳಗಾಗಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳಿಗೆ ಅರ್ಹತಾ ಪರೀಕ್ಷೆ ಹಾಗೂ ವಯಕ್ತಿಕ ಸಂದರ್ಶನದ ದಿನಾಂಕವನ್ನು ತಿಳಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಕಾರ್ಯಾಲಯದ ದೂರವಾಣಿ ಸಂಖ್ಯೆ: 0821–2438931 ನ್ನು ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

## ಮಾನವ ಸಂಪನ್ಮೂಲ ಪೂರೈಸಲು ನೊಂದಾಯಿತ ಏಜೆನ್ಸಿಗಳಿಂದ ಅರ್ಜಿ ಆಹ್ವಾನ


ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ ಆಗಸ್ಟ್ 22 –ಇಲ್ಲಿನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯದ ಸಂಕೀರ್ಣ ಯಾದಗಿರಿ, ಶಹಾಪುರ ಮತ್ತು ಸುರಪುರ ತಾಲೂಕು ನ್ಯಾಯಾಲಯಗಳ ಸಂಕೀರ್ಣಗಳಲ್ಲಿ ಸ್ವಚ್ಛತ ಕೆಲಸ (ಖಇಂ ಫಂಐ) ಮಾನವ ಸಂಪನ್ಮೂಲ ಪೂರೈಸಲು ನೊಂದಾಯಿತ ಮಾನವ ಸಂಪನ್ಮೂಲ ಏಜೆನ್ಸಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಏಜೆನ್ಸಿಗಳು ಸೇವಾ ಪೂರೈಕೆದಾರರು ಕಾನೂನಿನಡಿಯಲ್ಲಿ ಅಗತ್ಯವಿರುವಂತೆ ಶಾಸನಬದ್ಧ ಸಂಸ್ಥೆಗಳಲ್ಲಿ ನೋಂದಾಯಿಸಲ್ಪಟ್ಟಿರಬೇಕು. ಮತ್ತು ಸೇವಾ ತೆರಿಗೆಗಾಗಿ ಕಮ್ಯುನಿಸ್ಟ್ರೇಟರ್‌ನಲ್ಲಿಯೂ ನೋಂದಾಯಿಸಲ್ಪಟ್ಟಿರಬೇಕು. ಮತ್ತು ಟೆಂಡರ್ ಜೊತೆಗೆ ನೋಂದಣಿ ಪ್ರಮಾಣಪತ್ರದ ಪ್ರತಿಯನ್ನು ಒದಗಿಸಬೇಕು. ಸೇವಾ ಪೂರೈಕೆದಾರರು ಅಂತಹ ಐಎಮ್ ಸಿ ಐ ಎ ಸೇವೆಗಳು/ ಮಾನವಶಕ್ತಿಯನ್ನು ಪ್ರತಿಷ್ಠಿತ ಸಂಸ್ಥೆಗಳಿಗೆ ಒದಗಿಸುವಲ್ಲಿ ಅನುಭವ ಹೊಂದಿರಬೇಕು. ಸೇವಾ ಪೂರೈಕೆದಾರರು ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶ ಯಾದಗಿರಿ ಅವರ ಪರವಾಗಿ ಒಟ್ಟು ಮೊತ್ತದ 2% ರಷ್ಟು ಇಎಮ್ ಡಿ ಆರ್ ಎಫ್‌ನ್ನು ಡಿಡಿ ಮೂಲಕ ಸಲ್ಲಿಸಬೇಕು.

ಸೇವೆಗಳು ಹೈಡ್ರೋಸಿಸಿ ಮೂಲಭೂತ ಶುಚಿಗೊಳಿಸುವಿಕೆ ಮತ್ತು 8 ನ್ಯಾಯಾಲಯದ ಸಭಾಂಗಣಗಳನ್ನು ಒಳಗೊಂಡಿರುವ ಗ್ಯಾಬ್ ಡಿಲ್ಗಾನ್‌ಗೆ ಸುಮಾರು 3000 ಚದರ ಮೀಟರ್‌ಗಳ ಒಟ್ಟು ಪ್ರದೇಶದ ಆಳವಾದ ಶುಚಿಗೊಳಿಸುವಿಕೆಯನ್ನು ಒಳಗೊಂಡಿರಬೇಕು. 01 ಮಿನಿ ಕೋರ್ಟ್ ಹಾಲ್, 08 ನ್ಯಾಯಾಂಗಕೊಡುಗೆ ಕೊಠಡಿಗಳು, "ಓಎಸ್ ಸ್ಟೆನೋ ಕೊಠಡಿಗಳು, 02 ಆಸ್ತಿ ಕೊಠಡಿ, 02 ರೆಕಾರ್ಡ್ ಕೊಠಡಿ, 01 ಕೇಂದ್ರ ರೆಕಾರ್ಡ್ ಕೊಠಡಿ, 02 ನ್ಯಾಯಾಂಗ ಸೇವಾ ಕೇಂದ್ರ, 02 ಸರ್ವರ್ ಕೊಠಡಿಗಳು, 1 ಕಂಪ್ಯೂಟರ್ ಕೊಠಡಿ, 101 ಪ್ರಕ್ರಿಯೆ ಕೊಠಡಿ, 01 ನಕಲು ವಿಭಾಗ, 01 ಬಾಕಿ ಕೊಠಡಿ, 1 ಒಜೆವಿಸಿ ಸಮ್ಮೇಳನ ಕೊಠಡಿ, 02 ಸಾರ್ವಜನಿಕ ಶೌಚಾಲಯಗಳು ಮತ್ತು ಮೊದಲ ಮತ್ತು ಎರಡನೆಯದರಲ್ಲಿ 12 ಖಾಸಗಿ ಶೌಚಾಲಯಗಳು, 02 ಲಾಕಪ್ ಕೊಠಡಿಗಳು, 01 ಸ್ಟೇಷನರಿ ಕೊಠಡಿ, 02 ತಾಯಿ ಮಗುವಿನ ಕೊಠಡಿಗಳು, 02 ಸ್ನಾನಗೃಹಗಳು ಮತ್ತು ನ್ಯಾಯಾಲಯ ಕಟ್ಟಡವನ್ನು ಸುತ್ತುವರೆದಿರುವ 02 ಸಣ್ಣ ಕಾರಿಡಾರ್‌ಗಳು, ನ್ಯಾಯಾಲಯ ಸಂಕೀರ್ಣದ ಎಲ್ಲಾ ಪ್ರದೇಶಗಳು ಪೊರಕೆಗಳು ಮತ್ತು ಮಾಪಿಂಗ್‌ನೊಂದಿಗೆ ಸುರಕ್ಷಿತ ಉಪಯೋಗವಸ್ತುಗಳ ಬಳಕೆಯಿಂದ ಸ್ವಚ್ಛ ಮತ್ತು ಆರೋಗ್ಯಕರ ಸ್ಥಿತಿಯನ್ನು ಕಾಪಾಡಿಕೊಳ್ಳಲು ನ್ಯಾಯಾಲಯ ಸಂಕೀರ್ಣವನ್ನು ಎಲ್ಲಾ ಸಮಯದಲ್ಲೂ ಸ್ವಚ್ಛ ಮತ್ತು ಆರೋಗ್ಯಕರವಾಗಿಸಬೇಕು. ಕಾರ್ಮಿಕ ಇಲಾಖೆಯ ನಿಯಮಗಳ ಅನುಸರಣೆಯು ಸೇವಾ ಪೂರೈಕೆದಾರರ ಜವಾಬ್ದಾರಿಯಾಗಿರುತ್ತದೆ ಎಂದು ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಮುಖ್ಯ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಕ್ಷವನ್ನು ಸಂಘಟಿಸಲು ಮಧು ಬಂಗಾರಪ್ಪ ಸಲಹೆ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ರಾಜ್ಯ ಕಾಂಗ್ರೆಸ್ ಸರ್ಕಾರ ಎಲ್ಲ ಸಮುದಾಯದವರ ಏಳ್ಗೆಗೆ ಶ್ರಮಿಸುತ್ತಿದೆ.

ವಿಶೇಷವಾಗಿ ಹಿಂದುಳಿದವರು, ದಲಿತರು ಮತ್ತು ಅಲ್ಪಸಂಖ್ಯಾತರ ಸಬಲೀಕರಣಕ್ಕೆ ಹೆಚ್ಚು ಒತ್ತು ನೀಡುತ್ತಿದ್ದು ಪಕ್ಷವನ್ನು ತಳಮಟ್ಟದಲ್ಲಿ ಸಂಘಟಿಸಿ, ಸರ್ಕಾರದ ಯೋಜನೆಗಳ ಬಗ್ಗೆ ಜನರಿಗೆ ಅರಿವು ಮೂಡಿಸಬೇಕೆಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಪಕ್ಷ ಹಿಂದುಳಿದ ವರ್ಗಗಳ ರಾಜ್ಯ ಘಟಕದ ಅಧ್ಯಕ್ಷರಾದ ಮಧು ಬಂಗಾರಪ್ಪ ಸಲಹೆ ನೀಡಿದರು.

ಡಾ.ಸಿದ್ರಾಮ ದಾದಾರಾವ್ ವಾಘಮಾರೆ ಅವರಿಗೆ ಕೆಪಿಸಿಸಿ ಹಿಂದುಳಿದ ವರ್ಗಗಳ ರಾಜ್ಯ ಘಟಕದ ಉಪಾಧ್ಯಕ್ಷರನ್ನಾಗಿ ನಿಯೋಜಿಸಿರುವ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ನೇತೃತ್ವದ ಸರ್ಕಾರ ಸುಲಲಿತವಾಗಿ ಮುನ್ನಡೆಯುತ್ತಿದೆ. ಪಂಚಗ್ಯಾರಂಟಿ ಯೋಜನೆಗಳು ಕೋಟ್ಯಾಂತರ ಜನರ ಬಾಳಲ್ಲಿ ಬೆಳಕು ನೀಡುತ್ತಿವೆ. ಹಿಂದುಳಿದ ಸಮುದಾಯದವರು ತಮ್ಮ ಮಕ್ಕಳಿಗೆ ಹೆಚ್ಚಿನ ಶಿಕ್ಷಣ ಒದಗಿಸಬೇಕು. ಸಮುದಾಯಗಳನ್ನು ಸಂಘಟಿಸಿ ಮುಖ್ಯ ವಾಹಿನಿಗೆ ಬರಬೇಕು. ಈ ದಿಸೆಯಲ್ಲಿ ಕಾಂಗ್ರೆಸ್ ಪಕ್ಷ ಎಲ್ಲ ರೀತಿಯಿಂದ ನೆರವಾಗಲಿದ್ದು ಡಾ.ಸಿದ್ರಾಮ ವಾಘಮಾರೆ ಅವರು ಈ ದಿಸೆಯಲ್ಲಿ ಕಾರ್ಯಪ್ರವೃತ್ತರಾಗಲಿದ್ದಾರೆ ಎನ್ನುವ ವಿಶ್ವಾಸವಿದೆ ಎಂದು ಮಧು ಬಂಗಾರಪ್ಪ ತಿಳಿಸಿದರು.

ಬೆಂಗಳೂರಿನ ಸದಾಶಿವ ನಗರದಲ್ಲಿರುವ ನಿವಾಸದಲ್ಲಿ ಮಧು ಬಂಗಾರಪ್ಪನವರನ್ನು ಭೇಟಿಯಾಗಿ ಅಭಿನಂದಿಸಿದ ಡಾ.ಸಿದ್ರಾಮ ವಾಘಮಾರೆ ಅವರಿಗೆ ಮಧು ಬಂಗಾರಪ್ಪ ಈ ಸಲಹೆ ನೀಡಿದರು. ಕಳೆದ ನಾಲ್ಕು ದಶಕಗಳಿಂದ ಡಾ.ಸಿದ್ರಾಮ ವಾಘಮಾರೆ ಅವರು ಪಕ್ಷಕ್ಕಾಗಿ ಶ್ರಮಿಸುತ್ತಿದ್ದಾರೆ. ಸಚಿವರಾದ ಈಶ್ವರ್ ಖಂಡ್ರೆ, ರಹೀಂ ಖಾನ್, ಪ್ರಿಯಾಂಕ್ ಖರ್ಗೆ, ಮಾಜಿ ಸಚಿವ ರಾಜಶೇಖರ ಪಾಟೀಲ್ ಸೇರಿದಂತೆ ಹಲವಾರು ನಾಯಕರೊಂದಿಗೆ ಒಡನಾಟ ಇರಿಸಿಕೊಂಡಿದ್ದಾರೆ. ಎಐಸಿಸಿ ವರಿಷ್ಠರು ಮತ್ತು ಕೆಪಿಸಿಸಿ ನಾಯಕರೊಂದಿಗೆ ಗುರುತಿಸಿಕೊಂಡಿರುವ ಇವರು ರಾಜ್ಯಮಟ್ಟದ ಜಾನಪದ ಕಲಾವಿದರು ಕೂಡ. ಇವರು ಪಕ್ಷದ ಸಂಘಟನೆಗೆ ಮತ್ತು ಪಕ್ಷದ ನಿಷ್ಠೆ ಗಮನಿಸಿ ವರಿಷ್ಠರು ಈ ಸ್ಥಾನಮಾನ ನೀಡಿದ್ದಾರೆ. ಕಲ್ಯಾಣ ಕರ್ನಾಟಕವಲ್ಲದೇ ನಾಡಿನಾದ್ಯಂತ ಸಂಚರಿಸಿ ಪಕ್ಷದ ತತ್ವ, ನಿಷ್ಠೆಗಳು ಮತ್ತು ಸರ್ಕಾರದ ಯೋಜನೆಗಳನ್ನು ಜನರಿಗೆ ಮನವರಿಕೆ ಮಾಡಿ ಕೊಡುವ ಇಂಗಿತವನ್ನು ಡಾ.ಸಿದ್ರಾಮ ವಾಘಮಾರೆ ವ್ಯಕ್ತಪಡಿಸಿದ್ದಾರೆ.

# ಡೆಂಗೂ ಜ್ವರ ನಿರ್ಲಕ್ಷ್ಯ ಬೇಡ: ಡಾ.ಮಹೇಶ ಬಿರಾದರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಆ:22–ಮಳೆಗಾಲದ ಮಳೆ ಮತ್ತು ಅಕಾಲಿಕ ಮಳೆಯಿಂದಾಗಿ ಕಲುಷಿತ ನೀರು ಸಂಗ್ರಹವಾಗಿ ಸೊಳ್ಳೆ, ಡೆಂಗೂ ವೈರಾಣುಗಳು ಹುಟ್ಟಿ ಮಾನವ ದೇಹ ಹೊಕ್ಕು ಅನಾರೋಗ್ಯಕ್ಕೆ ಕಾರಣವಾಗುವಂತಹ ವಾತಾವರಣ ಈಗ ಇದ್ದು, ಜನರು ಎಚ್ಚರಿಕೆಯಿಂದ ಇದ್ದು ಮುಂಜಾಗ್ರತಾ ಕ್ರಮಗಳನ್ನು ಪಾಲಿಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಮಹೇಶ ಬಿರಾದಾರ್ ಹೇಳಿದರು.

ನಗರದ ಗಾಂಧಿ ವೃತ್ತದಲ್ಲಿ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳು, ಜಿಲ್ಲಾ ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಂಯುಕ್ತವಾಗಿ ಡೆಂಗೂ ಜ್ವರ ನಿಯಂತ್ರಣ ಮತ್ತು ಮುಂಜಾಗೃತ ಕ್ರಮಗಳ ಕುರಿತು ಹಮ್ಮಿಕೊಂಡಿದ್ದ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮುಖ್ಯವಾಗಿ ಸೋಂಕಿತ ಈಡಿಸ್ ಸೊಳ್ಳೆಗಳು ಕಚ್ಚುವುದರಿಂದ ಇದು ಉಂಟಾಗುತ್ತದೆ. ಡೆಂಗ್ಯೂ ವೈರಸ್‌ಗಳನ್ನು ಮನುಷ್ಯರಿಗೆ ಹರಡುತ್ತವೆ. ವೈರಸ್ ದೇಹವನ್ನು ಪ್ರವೇಶಿಸಿದ ನಂತರ ಜ್ವರ, ತಲೆನೋವು ಮತ್ತು ಸ್ನಾಯು ನೋವಿನಂತಹ ಲಕ್ಷಣಗಳನ್ನು ಉಂಟುಮಾಡುತ್ತವೆ ಎಂದರು.

ಈಡಿಸ್ ಈಜಿಪ್ಟಿ ಮತ್ತು ಈಡಿಸ್ ಅಲ್ಬೋಪಿಕ್ಟಸ್ ಎಂಬ ಹೆಣ್ಣು ಸೊಳ್ಳೆಗಳು ಡೆಂಗ್ಯೂವನ್ನು ಹರಡುವಲ್ಲಿ ಪ್ರಮುಖ ಪಾತ್ರವಹಿಸುತ್ತವೆ ಎಂದು ಡಾ.ಮಹೇಶ ಬಿರಾದಾರ ವಿವರಿಸಿದರು.

ಜಿಲ್ಲಾ ಮಲೇರಿಯಾ ಅಧಿಕಾರಿ ಡಾ.ಸಾಜಿದ್ ಮುದಸಿರ್ ಮಾತನಾಡಿ, ಡೆಂಗೂ ಸೋಂಕಿತ ಸೊಳ್ಳೆಯು ವ್ಯಕ್ತಿಯನ್ನು ಕಚ್ಚಿದಾಗ, ಡೆಂಗ್ಯೂ ವೈರಸ್ ರಕ್ತಪ್ರವಾಹದಲ್ಲಿ ಸೇರಿ ಯಕೃತ್ತು ಮತ್ತು ಇತರ ಅಂಗಗಳಿಗೆ ಹರಡುತ್ತದೆ.

ಡೆಂಗ್ಯೂ ವೈರಸ್‌ನ ನಾಲ್ಕು ವಿಭಿನ್ನ ಸಿರೊಟೈಪ್‌ಗಳಿವೆ. ಮೊದಲ ಸೋಂಕು ಒಂದು ನಿರ್ದಿಷ್ಟ ಸಿರೊಟೈಪ್‌ಗೆ ಜೀವಿತಾವಧಿಯ ಪ್ರತಿರಕ್ಷೆಯನ್ನು ನೀಡುತ್ತದೆ, ಆದರೆ ನಂತರದ ಸೋಂಕುಗಳು ತೀವ್ರ ರೋಗಲಕ್ಷಣಗಳ ಅಪಾಯವನ್ನು ಹೆಚ್ಚಿಸುತ್ತವೆ ಎಂದರು.

ಕಾರಣ ಕೂಡಲೇ ಹತ್ತಿರದ ಆಸ್ಪತ್ರೆಗೆ ಭೇಟಿ ನೀಡಿ ಪ್ರಥಮ ಹಂತ ಪರೀಕ್ಷೆಗಳನ್ನು ಮಾಡಿಸಿಕೊಂಡು ಸೂಕ್ತ ಚಿಕಿತ್ಸೆ ಪಡೆಯಬೇಕೆಂದು ಡಾ.ಮುದಸಿರ್ ಹೇಳಿದರು.

ತಾಲೂಕು ಆರೋಗ್ಯ ಅಧಿಕಾರಿ ಡಾ.ಹಣಮಂತರೆಡ್ಡಿ, ವೈದ್ಯಾಧಿಕಾರಿ ಡಾ ಶೀತಿಸ್, ಡಾ. ವಿನಿತಾ, ಡಾ ನಗರಾಜ ಗೌಳಿ, ಪರಿಸರ ಅಭಿಯಂತರರಾದ ಪ್ರಶಾಂತ , ಆರೋಗ್ಯ ನಿರೀಕ್ಷಕರಾದ ಶರಣಮ್ಮ, ಸಿದ್ದಾರ್ಥ ಸೇರಿದಂತೆ ಶ್ರೀಹರಿ, ಪ್ಯಾರಾ ಮೇಡಿಕಲ್ ಕಾಲೇಜಿನ ವಿದ್ಯಾರ್ಥಿಗಳು ಜಾಥಾದಲ್ಲಿ ಭಾಗವಹಿಸಿದ್ದರು.

## ಹತ್ತಿಕುಣಿ – ಸೌದಾಗರ್ ಜಲಾಶಯಗಳ ಅಭಿವೃದ್ಧಿಗೆ ಅನುಧಾನ ನೀಡಲು ಶಾಸಕ ಕಂದಕೂರ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಗುರುಮಿಠಕಲ್ ಮತಕ್ಷೇತ್ರದ ಹತ್ತಿಕುಣಿ ವಲಯದ ಹತ್ತಾರು ಹಳ್ಳಿಗಳ ರೈತರ ಜೀವನಾಡಿಯಾಗಿರುವ ಹತ್ತಿಕುಣಿ – ಸೌದಾಗರ್ ಜಲಾಶಯಗಳ ಅಭಿವೃದ್ಧಿಗೆ ರಾಜ್ಯ ಸರ್ಕಾರ ಅನುಧಾನ ನೀಡುವ ಮೂಲಕ ರೈತರಿಗೆ ಅನುಕೂಲತೆ ಒದಗಿಸಬೇಕೆಂದು ಶಾಸಕ ಶರಣಗೌಡ ಕಂದಕೂರ ವಿಧಾನಸಭೆ ಅಧಿವೇಶನದಲ್ಲಿ ಒತ್ತಾಯಿಸಿ ಸರ್ಕಾರದ ಗಮನ ಸೆಳೆದರು.

ಕರ್ನಾಟಕ ನೀರಾವರಿ ನಿಗಮ ನಿಯಮಿತದ ಅಧೀನದಲ್ಲಿ ಬರುವ 2 ಜಲಾಶಯಗಳ ವ್ಯಾಪ್ತಿಯಲ್ಲಿ 9 ಸಾವಿರ ಎಕರೆ ರೈತರ ಭೂಮಿ ನೀರಾವರಿ ಕ್ಷೇತ್ರಕ್ಕೆ ಒಳಪಡುತ್ತದೆ. ಆದರೆ ಜಲಾಶಯಗಳ ಕಾಲುವೆಗಳ ದುರಸ್ಥಿಗೆ ಹಾಗೂ ಸಂರಕ್ಷಣೆಗೆ ಹಲವಾರು ವರ್ಷಗಳಿಂದ ಸರಿಯಾಗಿ ಅನುಧಾನ ಬಿಡುಗಡೆಯಾಗುತ್ತಿಲ್ಲ. ಪರಿಣಾಮ ಪ್ರತಿವರ್ಷ ರೈತರು ಸಂಕಷ್ಟಗಳನ್ನು ಎದುರಿಸುತ್ತಿದ್ದಾರೆ. ಎಳೆ ಎಳೆಯಾಗಿ ಸದನದಲ್ಲಿ ವಿವರಿಸಿದರು.

ಜಲಾಶಯಗಳ ನಿರ್ವಹಣೆಗೆ ಸೂಕ್ತ ಸಿಬ್ಬಂದಿಗಳಿಲ್ಲ ಪರಿಣಾಮ ಜಲಾಶಯಗಳಿಗೆ ಅಪಾಯವಾಗುವ ಲಕ್ಷಣಗಳು ಅಲ್ಲಿ ನಾವು ಕಾಣುತ್ತೇವೆ. ಈ ಭಾಗದಲ್ಲಿ ರೈತರಿಗೆ ಕಡಿಮೆ ಪ್ರಮಾಣದಲ್ಲಿ ಜಮೀನಿಗೆ ಅದರಲ್ಲಿಯೇ ಕೃಷಿಯನ್ನೇ ಅವಲಂಬಿಸಿ ಜೀವನ ಸಾಗಿಸುತ್ತಿದ್ದಾರೆ. ಆದರೆ ಕೆಲವು ವರ್ಷಗಳಿಂದ ಅವರು ಬೇಸತ್ತು ಉದ್ಯೋಗ ಅರಸಿ ಬೃಹತ್ ನಗರಗಳಿಗೆ ಹೊಟ್ಟೆಪಾಡಿಗಾಗಿ ಗುಳೆ ಹೋಗುತ್ತಿದ್ದಾರೆ. ಅಲ್ಲದೇ ಕೊನೆಯ ಭಾಗದ ರೈತರ ಜಮೀನುಗಳಿಗೆ ನೀರು ತಲುಪುತ್ತಿಲ್ಲ. ಸರ್ಕಾರ ಕೂಡಲೇ 2 ಜಲಾಶಯಗಳನ್ನು ಕೆಬಿಜೆಎನ್ಎಲ್ (ಕೃಷ್ಣಾ ಭಾಗ್ಯ ಜಲನಿಗಮ ನಿಯಮಿತ) ಅಥವಾ ಸಣ್ಣ ನೀರಾವರಿ ಇಲಾಖೆಗೆ ಸೇರ್ಪಡೆ ಮಾಡಿ ನಿರ್ವಹಣೆಗೆ ಹೆಚ್ಚಿನ ಅನುದಾನ ನೀಡಿ ಹೊಸ ಕಾಯಕಲ್ಪ ನೀಡಿ ರೈತರ ಹಿತ ಕಾಪಾಡಬೇಕೆಂದು ಮನವಿ ಮಾಡಿದರು.

ಇದಕ್ಕೆ ಉತ್ತರಿಸಿದ ವಿಧಾನ ಸಭಾಧ್ಯಕ್ಷ ಯು.ಟಿ. ಖಾದರ್ ನಾಳೆ ನೀರಾವರಿ ಸಚಿವರು ನಿಮ್ಮ ಪ್ರಶ್ನೆಗೆ ಸಮರ್ಪಕವಾಗಿ ಉತ್ತರಿಸಲಿದ್ದಾರೆ ಎಂದು ಬರವಸೆ ನೀಡಿದರು.

# ಅಪಘಾತ ವಿಮೆ ಪಾವತಿಸುವಂತೆ ಜಿಲ್ಲಾ ಗ್ರಾಹಕರ ಆಯೋಗ ಆದೇಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, ಆ.22–ನಗರದ ಗುಗ್ಗರಹಟ್ಟಿಯ ನಿವಾಸಿ ರಾಜೇಶ್.ಎ ಅವರಿಗೆ ಸಂಗನಕಲ್ಲು ಗ್ರಾಮದ ವ್ಯಾಪ್ತಿಯಲ್ಲಿ ಎತ್ತಿನಗಾಡಿಯ ವೇಗ ಮತ್ತು ನಿರ್ಲಕ್ಷ ತನದ ಚಾಲನೆಯಿಂದ ಅಪಘಾತದಲ್ಲಿ ಗಾಯಗೊಂಡು ಎಡಗಾಲು ಮತ್ತು ಕಣ್ಣಿಗೆ ತೀವ್ರ ಪೆಟ್ಟಾಗಿದ್ದು, ಅಪಘಾತದ ವಿಮಾ ಮೊತ್ತದ ಪರಿಹಾರ ಪಾವತಿಸುವಂತೆ ಬೆಂಗಳೂರಿನ ಚೋಲಾ ಎಂ.ಎಸ್. ಜನರಲ್ ಇನ್ಸೂರೆನ್ಸ್ ಕಂಪನಿಗೆ ಜಿಲ್ಲಾ ಗ್ರಾಹಕರ ಆಯೋಗವು ಆದೇಶಿಸಿದೆ.

ರಾಜೇಶ್.ಎ ಅವರು ತಮ್ಮ ದ್ವಿಚಕ್ರ ವಾಹನ ಸಂಖ್ಯೆ ಕೆ.ಎ.34/ಇ.ಎಪ್.2692 ಗೆ 5 ವರ್ಷಗಳ ಅವಧಿಗೆ ರೂ.8,706 ಗಳ ವಿಮಾ ಕಂತು ಹಾಗೂ ರೂ.375 ಗಳನ್ನು ವೈಯಕ್ತಿಕ ಅಪಘಾತದ ವಿಮಾ ಪಾಲಿಸಿಗೆ ಕಂತು ಪಾವತಿಸಿದ್ದು, ಪಾಲಿಸಿ ಚಾಲ್ತಿ ಅವಧಿಯೊಳಗೆ 29–01–2022 ರಂದು ಅಪಘಾತ ಸಂಭವಿಸಿ, ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದರು ಮತ್ತು ವಿಮಾ ಕಂಪನಿಗೆ ವೈಯಕ್ತಿಕ ಅಪಘಾತದ ವಿಮಾ ಮೊತ್ತದ ಪರಿಹಾರ ರೂ.7,50,000 ಮತ್ತು ಇತರೆ ವೆಚ್ಚ ಪಾವತಿಸುವಂತೆ ದೂರು ಸಲ್ಲಿಸಿದ್ದರು.

ವಿಮಾ ಕಂಪನಿಯು ಅಪಘಾತವಾಗಿ ಮರಣ ಹೊಂದಿದ್ದರೆ ಮಾತ್ರ ಪಾಲಿಸಿ ಮೊತ್ತ ಅರ್ಹ. ಆದರೆ ಗಾಯಗೊಂಡಲ್ಲಿ ಪರಿಹಾರ ಅರ್ಹವಿಲ್ಲ ಎಂದು ಕ್ಲೈಮ್‌ನ್ನು ತಿರಸ್ಕರಿಸಿದ್ದರು.

ಆಯೋಗದ ಅಧ್ಯಕ್ಷರಾದ ಎನ್. ತಿಪ್ಪೇಸ್ವಾಮಿ ಹಾಗೂ ಸದಸ್ಯರಾದ ಮಾರ್ಲಾ ಶಶಿಕಲಾ ಅವರು ಉಭಯ ಪಕ್ಷಕಾರರ ವಾದ ವಿವಾದ ಆಲಿಸಿ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಪಾಲಿಸಿ ಶೆಡ್ಯೂಲ್‌ನಲ್ಲಿರುವಂತೆ ಒಂದು ವೇಳೆ ಒಂದು ಕಣ್ಣಿನ ದೃಷ್ಟಿ ಕಳೆದುಕೊಂಡಲ್ಲಿ ಶೇ.50 ಪರಿಹಾರ ಅರ್ಹವಿರುತ್ತದೆ. ಶೆಡ್ಯೂಲ್‌ನಲ್ಲಿರುವ ಅಂಶವನ್ನು ಪರಿಗಣಿಸದೇ ಕ್ಲೈಮ್‌ನ್ನು ತಿರಸ್ಕರಿಸುವುದು ಎದುರುದಾರರ ಸೇವಾ ನ್ಯೂನತೆ ಆಗಿದೆ ಎಂದು ಆಯೋಗ ಅಭಿಪ್ರಾಯಪಟ್ಟಿತು.

ಹಾಗಾಗಿ ದೂರುದಾರರಿಗೆ ಪಾಲಿಸಿ ಮೊತ್ತದ ಶೇ.50 ರಷ್ಟು ಮೊತ್ತ ರೂ. 7,50,000 ವೈಯಕ್ತಿಕ ಅಪಘಾತದ ಪರಿಹಾರದ ಮೊತ್ತ, ಸೇವಾ ನಿರ್ಲಕ್ಷ ತೆಗೆ ರೂ.10,000 ಪರಿಹಾರ ಮತ್ತು ರೂ.5000 ದೂರಿನ ವೆಚ್ಚವನ್ನು 45 ದಿನಗಳೊಗಾಗಿ ಪಾವತಿಸುವಂತೆ ಆಯೋಗ ಆದೇಶಿಸಿದೆ.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾಧ್ಯಕ್ಷ ಕೆ.ಇ.ಚಿದಾನಂದಪ್ಪ ಹೇಳಿಕೆ

# ಬಳ್ಳಾರಿ ಜಿಲ್ಲೆಯಲ್ಲಿ ಗ್ಯಾರಂಟಿ ಯೋಜನೆಗಳು ಉತ್ತಮ ಪ್ರಗತಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.22–ಕರ್ನಾಟಕ ಸರ್ಕಾರವು ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳು ಜನರಲ್ಲಿ ಉತ್ತಮ ಪ್ರತಿಕ್ರಿಯೆ ಪಡೆದಿದ್ದು,ಬಳ್ಳಾರಿ ಜಿಲ್ಲೆಯಾದ್ಯಂತ ಮಹತ್ತರ ಪ್ರಮಾಣದಲ್ಲಿ ಅನುಷ್ಠಾನಗೊಳಿಸಲಾಗಿದೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಹೇಳಿದರು.

ನಗರದ ಕೋಟೆ ಪ್ರದೇಶದ ಜಿಲ್ಲಾ ಪಂಚಾಯತ್ ನಜೀರ್ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ಐದು ಗ್ಯಾರಂಟಿ ಯೋಜನೆಗಳ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದ ಅವರು ಜಿಲ್ಲೆಯಲ್ಲಿ ಐದು ಗ್ಯಾರಂಟಿ ಯೋಜನೆಗಳ ಪ್ರಗತಿ ಉತ್ತಮವಾಗಿದೆ ಎಂದರು.

ಗೃಹಲಕ್ಷ್ಮೀ ಯೋಜನೆಯಡಿ ಜಿಲ್ಲೆಯ ಒಟ್ಟು 54.49 ಲಕ್ಷ ಫಲಾನುಭವಿಗಳಿಗೆಸಹಾಯಧನನೆರವು ತಲುಪಿದ್ದು, ಈ ಯೋಜನೆಯಡಿ ಜಿಲ್ಲೆಗೆ 1089.80 ಕೋಟಿ ರೂ. (2025ರಫೆಬ್ರವರಿ ಮತ್ತು ಮಾರ್ಚ್ ಮಾಹೆ ಹೊರತುಪಡಿಸಿ) ಸರ್ಕಾರ ಪಾವತಿಸಿದೆ. ಇದೊಂದು ಮಹತ್ತರ ಮೈಲಿಗಲ್ಲಾಗಿದೆ ಎಂದರು.

*ವಿಶೇಷ ಶಿಬಿರ ಆಯೋಜಿಸಿ:*

ಜಿಲ್ಲೆಯಲ್ಲಿಗೃಹಲಕ್ಷ್ಮೀಯೋಜನೆಯಡಿ ನೋಂದಾಯಿಸಿಕೊಂಡಫಲಾನುಭವಿಗಳಿಗೆ ವಿವಿಧ ಕಾರಣಗಳಿಂದ ಹಣ ಪಾವತಿಯಾಗುತ್ತಿಲ್ಲ ಎಂದು ದೂರು ಕೇಳಿಬರುತ್ತಿವೆ. ಅವರಿಗೆ ಸೂಕ್ತ ಮಾಹಿತಿ ನೀಡಲು ಹಾಗೂ ಇತ್ಯರ್ಥಕ್ಕೆ ಗ್ರಾಪಂ ವ್ಯಾಪ್ತಿಯಲ್ಲಿ ವಿಶೇಷ ಶಿಬಿರ ಆಯೋಜಿಸಬೇಕು ಎಂದು ತಾಪಂ ಇಒ ಗಳಿಗೆ ನಿರ್ದೇಶನ ನೀಡಿದ ಅವರು, ಎನ್‌ಸಿಪಿಐ ಲಿಂಕ್ ಮಾಡಿಸದೇ ಇರುವ 1098 ಮತ್ತು ಆಧಾರ್ ಇ–ಕೆವೈಸಿ ಮಾಡಿಸದೇ ಇರುವ 109 ಫಲಾನುಭವಿಗಳ ಮಾಹಿತಿ ಪಡೆದು ಕೂಡಲೇ ಪರಿಹರಿಸಬೇಕು ಎಂದು ಹೇಳಿದರು.

ಅನ್ನಭಾಗ್ಯ ಯೋಜನೆಯಡಿ ಜಿಲ್ಲೆಯ ಒಟ್ಟು 1.81 ಕೋಟಿ ಪಡಿತರ ಚೀಟಿಗಳ ಫಲಾನುಭವಿಗಳಿಗೆ ಒಟ್ಟು 292.29 ಕೋಟಿ ರೂ. ಡಿಬಿಟಿ ಮೂಲಕ ಹಣ ಪಾವತಿಸಲಾಗಿದ್ದು, 2025 ರ ಫೆಬ್ರವರಿ ತಿಂಗಳಿನಿಂದ ಹಣ ಬದಲಾಗಿ, ಪಡಿತರ ಅಕ್ಕಿ ಮತ್ತು ಬದಲಾಗಿ ಜೋಳ ಸಹ ವಿತರಿಸಲಾಗುತ್ತಿದೆ ಎಂದು ಆಹಾರ ಇಲಾಖೆಯ ಉಪನಿರ್ದೇಶಕರಾದ ಸಕೀನ ಅವರು ಸಭೆಗೆ ತಿಳಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಅಧ್ಯಕ್ಷರು, ಜಿಲ್ಲೆಯಲ್ಲಿ ಕಾಳಸಂತೆಯಲ್ಲಿ ಪಡಿತರ ಅಕ್ಕಿ ಸಾಗಣೆ ಮಾಡುವವರು ಕಂಡುಬಂದಲ್ಲಿ ಕೂಡಲೇ ಆ ವಾಹನ ಮತ್ತು ಮಾಲೀಕರ ವಿರುದ್ಧ ಎಫ್‌ಐಆರ್ ದಾಖಲಿಸಬೇಕು ಎಂದು ನಿರ್ದೇಶನ ನೀಡಿದರು.

ಗೃಹಜ್ಯೋತಿ ಯೋಜನೆಯಡಿ ನೋಂದಾಯಿಸಿಕೊಂಡ 2.86 ಲಕ್ಷ ಮನೆಗಳಿಗೆ ಉಚಿತ ವಿದ್ಯುತ್ ಪ್ರಯೋಜನ ತಲುಪಿದ್ದು, ಪ್ರಗತಿ ಪ್ರಮಾಣ ಶೇ.95 ಪ್ರಗತಿಯಾಗಿದೆ. ಈ ಯೋಜನೆಗೆ ರೂ.322 ಕೋಟಿ ಜಿಲ್ಲೆಯ ಅರ್ಹ ಫಲಾನುಭವಿಗಳಿಗೆ ವೆಚ್ಚವಾಗಿದೆ ಎಂದು ಜೆಸ್ಕಾಂ ಅಧಿಕಾರಿಗಳು ಸಭೆಗೆ ತಿಳಿಸಿದರು.

ಯುವನಿಧಿ ಯೋಜನೆ ಮೂಲಕ 8647 ನೋಂದಾಯಿಸಿಕೊಂಡ ಅರ್ಹ ಅಭ್ಯರ್ಥಿಗಳಿಗೆ ಇಲ್ಲಿಯವರೆಗೆ ರೂ.16.72 ಕೋಟಿ ಹಣಕಾಸು ನೆರವು ತಲುಪಿದ್ದು, ಇದರಿಂದ ನಿರುದ್ಯೋಗ ಯುವಕರಿಗೆ ಸಹಕಾರಿಯಾಗಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿ ಹಟ್ಟಪ್ಪ ಅವರು ಸಭೆಗೆ ತಿಳಿಸಿದರು.

ಇದೇ ವೇಳೆ ಜಿಪಂ ಮುಖ್ಯ ಕಾರ್ಯನಿರ್ವಾಹ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್ ಅವರು ಮಾತನಾಡಿ, ಜಿಲ್ಲೆಯಲ್ಲಿ ಆಯೋಜಿಸಲಾಗುವ ಉದ್ಯೋಗ ಮೇಳಗಳಲ್ಲಿ 'ಯುವ ನಿಧಿ' ಯೋಜನೆ ಕುರಿತು ಹೆಚ್ಚು ಪ್ರಚಾರ ನೀಡಬೇಕು ಎಂದು ಅಧಿಕಾರಿಗಳಿಗೆ ಮಾರ್ಗದರ್ಶನ ನೀಡಿದರು.

ಅದೇರೀತಿ ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಸೌಲಭ್ಯ ಒದಗಿಸಲಾಗಿದ್ದು, 5.36 ಕೋಟಿ ಪ್ರಯಾಣಗಳು ದಾಖಲಾಗಿವೆ. ಈ ಯೋಜನೆಯು ಕೂಡ ಶೇ.100 ರಷ್ಟು ಯಶಸ್ವಿಯಾಗಿ ಅನುಷ್ಠಾನಗೊಂಡಿದ್ದು, ಯೋಜನೆ ಜಾರಿಯಾದಾಗಿನಿಂದ ಇಲ್ಲಿಯವರೆಗೆ ರೂ.207.20 ಕೋಟಿ ವೆಚ್ಚವಾಗಿದೆ ಎಂದು ಕೆಕೆಆರ್‌ಟಿಸಿ ಬಳ್ಳಾರಿ ವಿಭಾಗದ ಅಧಿಕಾರಿಗಳು ಸಭೆಗೆ ತಿಳಿಸಿದರು.

ಇದಕ್ಕೆ ಜಿಪಂ ಸಿಇಒ ಅವರು ಪ್ರತಿಕ್ರಿಯಿಸಿ, ಬಳ್ಳಾರಿ ಜಿಲ್ಲೆಯು ಗಡಿಭಾಗವಾಗಿರುವುದರಿಂದ ಸಾಕಷ್ಟು ಮಹಿಳಾ ಪ್ರಯಾಣಿಕರು ಸಂಚರಿಸುತ್ತಾರೆ. ಈ ಸಂದರ್ಭದಲ್ಲಿ ಪೂರಕ ದಾಖಲೆ ಪರಿಶೀಲಿಸಿ ಟಿಕೇಟ್ ನೀಡಬೇಕು. ನಿಗಮಕ್ಕೂ ಒಳ್ಳೆಯ ಆದಾಯ ಬರುತ್ತಿರುವುದರಿಂದ ಹೊಸ ಬಸ್ ಗಳ ಖರೀದಿಗೆ ಯೋಜನೆ ರೂಪಿಸಬೇಕು ಎಂದು ತಿಳಿಸಿದರು.

ಕುರುಗೋಡು ಬಸ್ ನಿಲ್ದಾಣದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದಿರುವುದರಿಂದ ಕೂಡಲೇ ಅನುವು ಮಾಡಿಕೊಡಬೇಕು ಎಂದು ಕುರುಗೋಡು ತಾಲ್ಲೂಕು ಅಧ್ಯಕ್ಷರು ಸಭೆಯ ಗಮನಕ್ಕೆ ತಂದರು. ಇದಕ್ಕೆ ಜಿಪಂ ಸಿಇಒ ಅವರು, ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿ, ಕುಡಿಯುವ ನೀರಿನ ವ್ಯವಸ್ಥೆ, ನಿಲ್ದಾಣದ ಸ್ವಚ್ಛತೆ ಸೇರಿದಂತೆ ಇತರೆ ವ್ಯವಸ್ಥೆ ಕೈಗೊಳ್ಳಬೇಕು ಎಂದು ಸೂಚಿಸಿದರು.

ಗ್ಯಾರಂಟಿ ಜಿಲ್ಲಾಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳ ಸಕಾಲಿಕ ಜಾರಿಗೆ ಜನರಿಂದ ಉತ್ತಮ ಪ್ರತಿಕ್ರಿಯೆ ದೊರಕಿದ್ದು, ಸರ್ಕಾರದ ಕಲ್ಯಾಣ ಕಾರ್ಯಗಳು ತಲುಪುತ್ತಿರುವುದಕ್ಕೆ ಇದೊಂದು ಸಾಕ್ಷಿಯಾಗಿದೆ. ಅದೇರೀತಿಯಾಗಿ ತಾಪಂ ಮಟ್ಟದಲ್ಲಿಯೂ ಪ್ರಗತಿ ಪರಿಶೀಲನಾ ಸಭೆ ನಡೆಸಬೇಕು ಎಂದು ಸರ್ಕಾರದ ನಿರ್ದೇಶನವಿದ್ದು, ತಾಲ್ಲೂಕು ಅಧ್ಯಕ್ಷರ ನೇತೃತ್ವದಲ್ಲಿ ಎಲ್ಲಾ ತಾಲ್ಲೂಕಿನಲ್ಲಿ 3–4 ಗ್ರಾಮ ಪಂಚಾಯತ್ ಫಲಾನುಭವಿಗಳ ಸಮಸ್ಯೆ ಕುರಿತು ಗ್ರಾಮ ಸಭೆ ಅಥವಾ ಇನ್ನಿತರೆ ಪೂರಕ ಸಭೆ ಜರುಗಿಸಲು ಸೂಕ್ತ ಕಾರ್ಯಯೋಜನೆ ರೂಪಿಸಬೇಕು. ತಾಲ್ಲೂಕು ಸಮಿತಿ ರಚಿಸಬೇಕಿದೆ. ಈ ಕುರಿತು ಸರ್ಕಾರದ ನಿರ್ದೇಶನವಿದೆ ಎಂದರು.

ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರುಗಳು, ತಾಲ್ಲೂಕು ಅಧ್ಯಕ್ಷರುಗಳು, ಜಿಲ್ಲಾ ಸಮಿತಿ ಸದಸ್ಯರುಗಳು ಪಾಲ್ಗೊಂಡು ಗ್ಯಾರಂಟಿ ಅನುಷ್ಠಾನಕ್ಕೆ ಹಾಗೂ ಅರ್ಹರಿಗೆ ಯೋಜನೆ ತಲುಪಿಸುವಲ್ಲಿ ಇರುವ ಸಮಸ್ಯೆ ಹಾಗೂ ಪರಿಹಾರ ಕುರಿತು ಚರ್ಚಿಸಿದರು. ಈ ಸಂದರ್ಭದಲ್ಲಿ ಬಳ್ಳಾರಿ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಗೋನಾಳ್ ಎಂ.ನಾಗಭೂಷಣ ಗೌಡ, ಕುರುಗೋಡು ತಾಲ್ಲೂಕು ಅಧ್ಯಕ್ಷ ಜಿ.ಬಸವನಗೌಡ, ಕಂಪ್ಲಿ ತಾಲ್ಲೂಕು ಅಧ್ಯಕ್ಷ ಶ್ರೀನಿವಾಸ್‌ರಾವ್, ಸಿರುಗುಪ್ಪ ತಾಲ್ಲೂಕು ಅಧ್ಯಕ್ಷ ಮಾರುತಿ ವರಪ್ರಸಾದ್ ರೆಡ್ಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ ಸೇರಿದಂತೆ ತಾಪಂ ಇಒಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಆ.24 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.22–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–2 ರ ವ್ಯಾಪ್ತಿಯ 110/11ಕೆ.ವಿ ಸೋಮಸಮುದ್ರ ವಿದ್ಯುತ್ ಉಪ–ಕೇಂದ್ರದಲ್ಲಿ ವಿದ್ಯುತ್ ಲೈನ್‌ಗಳ ನಿರ್ವಹಣೆ ಕಾರ್ಯ ಕೈಗೊಳ್ಳುತ್ತಿರುವುರಿಂದ ಆ.24 ರಂದು ಬೆಳಿಗ್ಗೆ 09 ರಿಂದ ಮಧ್ಯಾಹ್ನ 12 ಗಂಟೆಯವರೆಗೆ ಎಫ್–06 ಮತ್ತು ಎಫ್–10 ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

*ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:*

ಎಫ್–06 ಫೀಡರ್ ಮಾರ್ಗದ ತಾಳೂರು ರೋಡ್, ಸ್ನೇಹ ಕಾಲೋನಿ, ಶ್ರೀನಗರ, ರೇಣುಕಾ ನಗರ, ಭಗತ್‌ಸಿಂಗ್ ನಗರ, ಕನ್ನಡ ನಗರ, ಮಹಾನಂದಿ ಕೊಟ್ಟಂ, ಪಾರ್ವತಿ ನಗರ, ಎಸ್.ಪಿ.ಸರ್ಕಲ್, ಶಾಸ್ತ್ರೀ ನಗರ, ಬ್ಯಾಂಕ್ ಕಾಲೋನಿ, ಬಸವನಕುಂಟೆ, ಸಿರುಗುಪ್ಪ ರೋಡ್, ರಾಮ ನಗರ, ಅವಂಬಾವಿ.

ಎಫ್–10 ಫೀಡರ್ ಮಾರ್ಗದ ಅಶೋಕ ನಗರ, ಅವಂಭಾವಿ, ಟಿ.ಎಂ.ಜಿ ಲೇಔಟ್, ರಾಮ ನಗರ, ಜಯನಗರ, ಗಾಯತ್ರಿ ನಗರ, ಭುವನಗಿರಿ ಕಾಲೋನಿ, ವೀರನಗೌಡ ಕಾಲೋನಿ, ಗಣೇಶ ನಗರ ಸೇರಿದಂತೆ ಮುಂತಾದ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶರಣಬಸವ ಅಮರಪ್ಪ ಗೆ ಪಿಹೆಚ್‌ಡಿ ಪದವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.22–ಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಸಸ್ಯಶಾಸ್ತ್ರ ಅಧ್ಯಯನ ವಿಭಾಗದ ಸಂಶೋಧನಾ ವಿದ್ಯಾರ್ಥಿಯಾದ ಶರಣಬಸವ ಅಮರಪ್ಪ ಅವರಿಗೆ ಪಿಹೆಚ್‌ಡಿ ಪದವಿ ಲಭಿಸಿದೆ.

ವಿಶ್ವವಿದ್ಯಾಲಯದ ಸಸ್ಯಶಾಸ್ತ್ರ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಕವಿತಾ ಸಾಗರ್ ಅವರ ಮಾರ್ಗದರ್ಶನದಲ್ಲಿ "ಟ್ಯಾಕ್ಸೋನೋಮಿಕ್ ಸ್ಟಡೀಸ್ ಆಫ್ ದಿ ಫ್ಯಾಮಿಲಿ ಪ್ಯಾಬೇಸಿ ಆಫ್ ಕರ್ನಾಟಕ" ಎಂಬ ಮಹಾಪ್ರಬಂಧ ಮಂಡಿಸಿದ್ದಕ್ಕಾಗಿ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯವು ಪಿಹೆಚ್‌ಡಿ ಪದವಿ ಪ್ರದಾನ ಮಾಡಿದೆ ಎಂದು ವಿವಿ ಪ್ರಕಟಣೆ ತಿಳಿಸಿದೆ.

# ಆ.24 ರಂದು ಬಳ್ಳಾರಿ ಗ್ರಾಮೀಣದಲ್ಲಿ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.22–ಬಳ್ಳಾರಿ ಗ್ರಾಮೀಣ ಜೆಸ್ಕಾಂ ಉಪ–ವಿಭಾಗ ವ್ಯಾಪ್ತಿಯ 110ಕೆ.ವಿ ಅಲ್ಲಿಪುರ–ಬಳ್ಳಾರಿ ಉತ್ತರ ಮಾರ್ಗದ ಎಲ್‌ಐಎಲ್‌ಓ ನಿರ್ಮಾಣ ಕಾರ್ಯವನ್ನು ತುರ್ತಾಗಿ ಕೈಗೊಳ್ಳುತ್ತಿರುವುದರಿಂದ 110/11ಕೆ.ವಿ ಯ ಸೋಮಸಮುದ್ರ ವಿದ್ಯುತ್ ಉಪ–ಕೇಂದ್ರ ಮತ್ತು 33/11ಕೆ.ವಿ ಗುಡದೂರು ವಿದ್ಯುತ್ ಉಪಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಎಲ್ಲಾ 11ಕೆ.ವಿ ಮಾರ್ಗಗಳಲ್ಲಿ ಆ.24 ರಂದು ಬೆಳಿಗ್ಗೆ 09 ರಿಂದ ಮಧ್ಯಾಹ್ನ 01 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:**

110/11ಕೆ.ವಿ ಶ್ರೀಧರಗಡ್ಡೆ ಉಪ–ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಎಲ್ಲಾ 11ಕೆ.ವಿ ಫೀಡರ್‌ಗಳು ಮತ್ತು 33/11ಕೆ.ವಿ ಗುಡದೂರು ಉಪ–ಕೇಂದ್ರದಿಂದ ವಿದ್ಯುತ್ ಸರಬರಾಜು ಎಲ್ಲಾ 11ಕೆ.ವಿ. ಫೀಡರ್‌ಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆ.24 ರಂದು ಬಳ್ಳಾರಿ ನಗರ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.22–

ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–2 ರ ವ್ಯಾಪ್ತಿಯ 11 ಕೆ.ವಿ.ಫೀಡರ್ ನ ವಿದ್ಯುತ್ ಲೈನ್ ಗಳ ನಿರ್ವಹಣೆ ಕಾರ್ಯ ಕೈಗೊಳ್ಳುತ್ತಿರುವುರಿಂದ ಆ.24 ರಂದು ಬೆಳಿಗ್ಗೆ 10 ರಿಂದ ಸಂಜೆ 05 ಗಂಟೆಯವರೆಗೆ ಎಫ್–09 ಮತ್ತು ಎಫ್–07 ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:**

ಎಫ್–09 ಫೀಡರ್ ಮಾರ್ಗದ ನೆಹರು ಕಾಲೋನಿ, ಎಸ್.ಎನ್.ಪೇಟೆ 1ನೇ, 2ನೇ, 4ನೇ, 5ನೇ, 6ನೇ ಅಡ್ಡರಸ್ತೆ, ಶಂಕರ್ ಕಾಲೋನಿ, ಡಿಎಆರ್ ಗ್ರೌಂಡ್, ಕೂಲ್ ಕಾರ್ನರ್, ಡಬಲ್ ರಸ್ತೆ, ಕೋಲಾಚಲಂ ಕಾಂಪೌಂಡ್, ರಾಯಲ್ ಸರ್ಕಲ್, ಗಾಂಧಿಭವನ, ಸಿಎಂಸಿ, ಅಂಬಲಿ ಬಾಗ್, ಹಳೆಯ ತಾಲ್ಲೂಕು ಅಫೀಸ್, ಡಿಸಿ ಕಚೇರಿ, ಸ್ಟೇಷನ್ ರೋಡ್.

ಎಫ್–07 ಫೀಡರ್ ಮಾರ್ಗದ ಸಂಗನಕಲ್ಲು ರಸ್ತೆ, ಎಸ್.ಎನ್.ಪೇಟೆ 3ನೇ ಕ್ರಾಸ್, ಜಿಲ್ಲಾಸ್ಪತ್ರೆ, ರಾಘವ ಕಲಾ ಮಂದಿರ, ಅನಂತಪುರ ರಸ್ತೆ, ವಡ್ಡರ ಬಂಡೆ, ಅಗಡಿ ಮಾರೆಪ್ಪ ಕಾಂಪೌಂಡ್, ರೂಪನಗುಡಿ ರಸ್ತೆ, ಮುಬರಕ್ ಟಾಕೀಸ್, ಬಾಲಾಜಿರಾವ್ ರಸ್ತೆ, ಕೆ.ಸಿ.ರೋಡ್, ಮೀನಾಕ್ಷಿ ಸರ್ಕಲ್, ಬೆಂಗಳೂರು ರಸ್ತೆ, ದುಗ್ಗಪ್ಪ ಬೀದಿ, ರೆಡ್ಡಿ ಬೀದಿ, ಆಲ್ಲಂ ಬೀದಿ, ಮುಲ್ಲಂಗಿ ಸಂಜೀವಪ್ಪ ಬೀದಿ, ರೂಪನಗುಡಿ ನರಪ್ಪ ಬೀದಿ, ತಾಯಮ್ಮ ಕ–ಟ್ಟೆ ಸೇರಿದಂತೆ ಮುಂತಾದ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯತ್ರಾರ್ಥಿಗಳಿಂದ ಅರ್ಜಿ ಆಹ್ವಾನ

ಬೀದರ,ಅಗಸ್ಟ್ 22–ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2025–26ನೇ ಸಾಲಿನಲ್ಲಿ ಡಾ॥ ಬಿ.ಆರ್. ಅಂಬೇಡ್ಕರ್ ರವರ ಅನುಯಾಯಿಗಳನ್ನು ಮಹಾರಾಷ್ಟ್ರದ ನಾಗಪೂರದಲ್ಲಿನ ದೀಕ್ಷಾ ಭೂಮಿಯಲ್ಲಿ 2025ನೇ ಅಕ್ಟೋಬರ್ 2ನೇ ತಾರೀಖಿನಂದು ನಡೆಯಲಿರುವ ಪ್ರವರ್ತನಾ ದಿನಕ್ಕೆ (ವಿಜಯದಶಮಿ ದಿನದಂದು) ನಾಗಪೂರ ದೀಕ್ಷಾಭೂಮಿಗೆ ಕಳುಹಿಸುವ ಸಂಬಂಧ ಅರ್ಹ ಯಾತ್ರಾರ್ಥಿಗಳನ್ನು ದಿನಾಂಕ: 30–09–2025 ರಿಂದ 04–10–2025ರ ವರೆಗೆ ವಿವಿಧ ಜಿಲ್ಲೆಗಳಿಂದ ಪ್ರಯಾಣಿಸಲು ಹಾಗೂ ಹಿಂದಿರುಗಿ ಬರುವ ಸಂಬಂಧ ಕೆ.ಎಸ್.ಆರ್.ಟಿ ಸಾರಿಗೆ ಬಸ್ಸು ಮತ್ತು ರೈಲಿನ ಮೂಲಕ ಕಳಹಿಸಲು ವ್ಯವಸ್ಥೆಯನ್ನು ಕಲ್ಪಿಸಲಾಗುತ್ತಿದ್ದು, ಯಾತ್ರಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ದಿನಾಂಕ: 25–08–2025 ರಿಂದ 09–09–2025 ರವರೆಗೂ ಸಮಾಜ ಕಲ್ಯಾಣ ಇಲಾಖೆಯ https://swd.karnataka.gov.in/website ನಲ್ಲಿ ಅವಕಾಶ ಕಲ್ಪಿಸಲಾಗಿದೆ ಎಂದು ಬೀದರ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಗ್ರೇಡ್–1 ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂತರಾಷ್ಟ್ರೀಯ ತೋಳ ದಿನ ಆಚರಣೆ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಗಂಗಾವತಿ ಕರ್ನಾಟಕ ಅರಣ್ಯ ಇಲಾಖೆ, ಕೊಪ್ಪಳ ವಿಭಾಗದ ಗಂಗಾವತಿ ಪ್ರಾದೇಶಿಕ ಅರಣ್ಯ ವಲಯದ ವತಿಯಿಂದ ಅಂತರಾಷ್ಟ್ರೀಯ ತೋಳ ದಿನ – 2025 ಕಾರ್ಯಕ್ರಮವನ್ನು ಆಗಸ್ಟ್ 21ರಂದು ಗಂಗಾವತಿ ಟಿ.ಎಂ.ಎ.ಇ . ಸಂಸ್ಥೆ (ಬಿ) ಶಿಕ್ಷಣ ಮಹಾವಿದ್ಯಾಲಯದಲ್ಲಿ ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ಗಂಗಾವತಿ ಟಿ.ಎಂ.ಎ.ಇ . ಸಂಸ್ಥೆ (ಬಿ) ಶಿಕ್ಷಣ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಕೆ.ಸಿ. ಕುಲಕರ್ಣಿ ಉದ್ಘಾಟಿಸಿದರು.

ಉಪಅರಣ್ಯಸಂರಕ್ಷಣಾಧಿಕಾರಿಗಳಾದ ಶ್ರೀಮತಿ ನಿರ್ಮಲ .ಎನ್.ಕೆ. ಅರಣ್ಯಸಂರಕ್ಷಣೆಯ ಮಹತ್ವವನ್ನು ವಿವರವಾಗಿ ಹೇಳಿದರು ತೋಳದ ಜೀವನ ಚಕ್ರ, ಪರಿಸರದಲ್ಲಿ ಅದರ ಪಾತ್ರ ಹಾಗೂ ಸಂರಕ್ಷಣೆಯ ಅಗತ್ಯತೆಯನ್ನು ವಿವರಿಸಿದರು. ತೋಳವು ಪ್ರಕೃತಿಯ ಆಹಾರ ಸರಪಳಿಯಲ್ಲಿ ಸಮತೋಲನ ಕಾಪಾಡುವ ಪ್ರಮುಖ ಪ್ರಾಣಿ ಆಗಿದ್ದು, ಅದರ ಸಂರಕ್ಷಣೆ ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು.

ಕೊಪ್ಪಳದಲ್ಲಿ ಕಂಡುಬರುವ ಸಾಮಾನ್ಯ ಪ್ರಾಣಿಗಳೆಂದರೆ ಚಿರತೆ, ಕರಡಿ, ಕಾಡು ಹಂದಿ, ಮೊಲ, ಮುಳ್ಳು ಹಂದಿ, ಹೈನಾ, ನರಿ, ಕಾಡು ಬೆಕ್ಕು, ಅನೇಕ ಜಾತಿಯ ಸರೀಸೃಪಗಳು, ಪಕ್ಷಿಗಳು, ಹತ್ತಿರದ ಸಂರಕ್ಷಿತ ಪ್ರದೇಶಗಳಲ್ಲಿ ನಾವು ನೋಡಬಹುದು. ಕೊಪ್ಪಳ ಜಿಲ್ಲೆಯು ವನ್ಯಜೀವಿಗಳ ಸಮೃದ್ಧ ತಾಣವಾಗಿದೆ ಎಂದು ಕೊಪ್ಪಳದ ಉಪ ವಿಭಾಗದ ಪ್ರಾದೇಶಿಕ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳಾದ ಅಬ್ದುಲ್ ಖಾದರ್ ಮುಲ್ಲಾ ಮಕ್ಕಳಿಗೆ ಹಳಿದರು. ಬಸವರಾಜ ಮುಳಗೆ, ವನ್ಯಜೀವಿ ಸಂಶೋಧಕರು, ಉಪನ್ಯಾಸ ನೀಡಿದರು. ತೋಳ ದಿನಾಚರಣೆಯ ಅಂಗವಾಗಿ ಪ್ರಬಂಧ ಸ್ಪರ್ಧೆ ಹಾಗೂ ಚಿತ್ರಕಲೆಯನ್ನು ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದು ಅದರಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತಿಯ ಬಂದವರಿಗೆ ಬಹುಮಾನ ನೀಡಿದರು. ಪ್ರಬಂಧ ಪ್ರಥಮ ಭೀಮಾಶ್ರೀ ನಾಗರಾಜ. ದ್ವಿತೀಯ ಮಹ್ಮದ್ ಸಾಬ ಮರ್ದನಸಾಬ್, ತೃತೀಯ ಶಿಲ್ಪಾ ಈಶಪ್ಪ, ಚಿತ್ರಕಲೆ ಸ್ಪರ್ಧೆ ಪ್ರಥಮ ಕೃಷ್ಣ ಯಂಕಪ್ಪ, ದ್ವಿತೀಯ ವೀರೇಂದ್ರ ಪಾಟೀಲ, ತೃತೀಯ ಶಿವಮೂರ್ತಿ ಬಸವರಾಜ, ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಹುಸೇನಬಾಷಾ ಪೆಂಡಾರಿ ಡಿಸಿಎಫ್ , ಅಬ್ದುಲ್ ಖಾದರ್ ಮುಲ್ಲಾ ಎಸಿಎಫ್ , ಗಾಯತ್ರಿ ಲೋಕಣ್ಣನವರ್ ಎಸಿಎಫ್ ,ಚೈತ್ರಾ ಮೆಣಸಿನಕಾಯಿ ಆರ್‌ಎಫ್‌ಒ , ಸಂಸ್ಥೆಯ ಉಪನ್ಯಾಸಕರು ಪ್ರಶಿಕ್ಷಣಾರ್ಥಿಗಳು ಗಂಗಾವತಿ, ಇವರು ಹಾಜರಿದ್ದರು.

# ಗಣೇಶ ಹಾಗೂ ಈದ್ ಮಿಲಾದ್ ಹಬ್ಬಗಳಲ್ಲಿ ಅಹಿತಕರ ಘಟನೆಗಳು– ನಡೆಯದಂತೆ ಮುಂಜಾಗ್ರತೆ ವಹಿಸಬೇಕು– ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಗಣೇಶ ಹಾಗೂ ಈದ್ ಮಿಲಾದ್ ಹಬ್ಬಗಳ ಸಂದರ್ಭದಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಯಾವುದೇ ಅಹಿತಕರ ಘಟನೆಗಳನ್ನು ನಡೆಯದಂತೆ ಮುಂಜಾಗ್ರತೆವಹಿಸಬೇಕೆಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗಣೇಶ ಹಾಗೂ ಈದ್ ಮಿಲಾದ್ ಹಬ್ಬದ ಅಂಗವಾಗಿ ಕಂದಾಯ, ಪೊಲೀಸ್, ಜೆಸ್ಕಾಂ, ಅರಣ್ಯ ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳಿಗೆ ಕರೆದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ರಸ್ತೆಗಳಲ್ಲಿ ಎಲ್ಲಾಕಡೆ ಬೀದಿ ದೀಪಗಳನ್ನು ಅಳವಡಿಸಬೇಕು ಮತ್ತು ಅವಶ್ಯಕತೆ ಇರುವಲ್ಲಿ ಸಿಸಿಟಿವಿಗಳನ್ನು ಹಾಕಬೇಕು. ಜೆಸ್ಕಾಂ ಅಧಿಕಾರಿಗಳು ಲೋ ಲೈನ್ ಹ್ಯಾಂಗಿಂಗ್ ವಯರುಗಳಿದ್ದರೆ ಅವುಗಳನ್ನು ಸರಿಪಡಿಸಬೇಕು. ಗಣಪತಿ ಪ್ರತಿಷ್ಠಾಪನೆ ಸಂದರ್ಭದಲ್ಲಿ ಶ್ಯಾಟ ಸರ್ಕೂಟ್ ಆಗದಂತೆ ಪ್ರತಿಷ್ಠಾಪನಾ ಮಂಡಳಿಯರಿಗೆ ಈ ಕುರಿತು ಮುಂಜಾಗ್ರತೆವಹಿಸುವಂತೆ ಅಧಿಕಾರಿಗಳು ತಿಳಿಸಬೇಕು. ಜಿಲ್ಲೆಯ ಆಯಾ ತಾಲ್ಲೂಕಿನ ತಹಶಿಲ್ದಾರರು ಮತ್ತು ಪೊಲೀಸ್ ಅಧಿಕಾರಿಗಳು ತಮ್ಮ ಹಂತಗಳಲ್ಲಿ ಈ ಕುರಿತು ಸಭೆಗಳನ್ನು ನಡೆಸಬೇಕೆಂದು ಹೇಳಿದರು.

ಯಾವುದೇ ಸಮಸ್ಯೆಗಳಿದ್ದರೆ ತಕ್ಷಣ ತಮ್ಮ ಮೇಲಧಿಕಾರಿಗಳ ಗಮನಕ್ಕೆತರಬೇಕು. ತಹಶಿಲ್ದಾರರು, ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು, ಜೆಸ್ಕಾಂ, ಅಗ್ನಿ ಶ್ಯಾಮಕದಳ, ಅರಣ್ಯ ಇಲಾಖೆ ಸೇರಿದಂತೆ ಇತರೆ ಅಧಿಕಾರಿಗಳು ಪರಸ್ಪರ ಸಹಕಾರದೊಂದಿಗೆ ತಮಗೆ ವಹಿಸಿದ ಕೆಲಸವನ್ನು ಜವಾಬ್ದಾರಿಯಿಂದ ನಿರ್ವಹಿಸಬೇಕೆಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ ಅವರು ಮಾತನಾಡಿ, ಗಣಪತಿ ವಿಸರ್ಜನಾ ಸ್ಥಳಗಳಾದ ದಾಸನಾಳ ಬ್ರಿಜ್, ಕೊಪ್ಪಳದ ಹುಲಿಕೆರಿ ಸೇರಿದಂತೆ ಇತರೆ ಸ್ಥಳಗಳಲ್ಲಿ ಬ್ಯಾರಿಕೇಡ್ ಹಾಕುವುದರ ಜೊತೆಗೆ ಲೈಟಿಂಗ್ ವ್ಯವಸ್ಥೆ ಮತ್ತು ಸಿಸಿಟಿವಿ ಅಳವಡಿಸಬೇಕು. ಅಧಿಕಾರಿಗಳು ಕಾನೂನು ಸುವ್ಯವಸ್ಥೆಗೆ ಸಂಬಂಧಿಸಿದ ಯಾವುದೇ ಮಾಹಿತಿಗಳಿದ್ದರೆ ನಮ್ಮ ಪೊಲೀಸರ ಗಮನಕ್ಕೆ ತರಬೇಕು. ಗಣೇಶ ದರ್ಶನಕ್ಕಾಗಿ ಬರುವ ಸಾರ್ವಜನಿಕರಿಗೆ ತೊಂದರೆಯಾಗದಂತೆ ನೋಡಿಕೊಳ್ಳುವುದರ ಜೊತೆಗೆ ಪೊಲೀಸ್ ಅಧಿಕಾರಿಗಳು ತಮ್ಮ ಠಾಣೆಗಳ ವ್ಯಾಪ್ತಿಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಬೇಕೆಂದು ಹೇಳಿದರು.

ಈ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಟಿ. ಕೃಷ್ಣಮೂರ್ತಿ. ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಆರ್. ಹೇಮಂತಕುಮಾರ್. ಸಹಾಯಕ ಆಯುಕ್ತರಾದ ಕ್ಯಾ. ಮಹೇಶ್ ಮಾಲಗಿತ್ತಿ. ಡಿವೈಎಸ್ಪಿಗಳಾದ ಮುತ್ತಣ್ಣ ಸವರಗೋಳ. ಸಿದ್ದನಗೌಡ ಪಾಟೀಲ್. ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಹಶಿಲ್ದಾರರು. ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು. ನಗರ ಸ್ಥಳೀಯ ಸಂಸ್ಥೆ ಮತ್ತು ಪರಿಸರ ಹಾಗೂ ಅರಣ್ಯ. ಪೊಲೀಸ್ ಇಲಾಖೆ ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಬೌದ್ಧಿಕ ಆಸ್ತಿ ಹಕ್ಕುಗಳು ಕಾರ್ಯಾಗಾರ: ಹೆಸರು ನೋಂದಣಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಆ.22–ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ವತಿಯಿಂದ "ಬೌದ್ಧಿಕ ಆಸ್ತಿ ಹಕ್ಕುಗಳು" (Intellectual Property Rights [IPR]) ವಿಷಯ ಕುರಿತು 2025ರ ಸೆಪ್ಟೆಂಬರ್ 10 ರಿಂದ 12 ರವರೆಗೆ ಮೂರು ದಿನಗಳ ಕಾಲ ಕುರಿತು ಅಕಾಡೆಮಿಯ ಕಚೇರಿಯಲ್ಲಿ ಕಾರ್ಯಾಗಾರವನ್ನು ಆಯೋಜಿಸಲಾಗಿದೆ ಎಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

ಈ ಕಾರ್ಯಾಗಾರದಲ್ಲಿ ವಿವಿಧ ಪ್ರತಿಷ್ಠಿತ ಸಂಸ್ಥೆಗಳ ಹೆಸರಾಂತ ವಿಜ್ಞಾನಿಗಳು ತಾಂತ್ರಿಕ ಉಪನ್ಯಾಸಗಳನ್ನು ನೀಡಲಿದ್ದು, ಆಸಕ್ತ ವಿಜ್ಞಾನ ಪದವಿ, ಸ್ನಾತ–ಕೋತ್ತರ ವಿಜ್ಞಾನ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಉಪನ್ಯಾಸಕರು/ಪ್ರಾಧ್ಯಾಪಕರು ಹಾಗೂ ವಿಜ್ಞಾನಾಸಕ್ತರು ಭಾಗವಹಿಸಬಹುದಾಗಿದೆ. ಆಸಕ್ತ ಪ್ರತಿನಿಧಿಗಳು ಗೋಗಲ್ ಫಾರ್ಮ್ (Googleform-https://forms.gle/oPz-dXFMRGy3yBEEb8) ಮೂಲಕ 2025ರ ಸೆಪ್ಟೆಂಬರ್ 8 ರೊಳಗಾಗಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಕಾರ್ಯಾಗಾರದ ಸಂಯೋಜಕರು ಹಾಗೂ ವೈಜ್ಞಾನಿಕಾಧಿಕಾರಿ ಉಮೇಶ ಘಾಟಗೆ ಇವರ ಮೊಬೈಲ್ ಸಂಖ್ಯೆ 9743084194ಗೆ ಸಂಪರ್ಕಿಸಲು ಅಥವಾ ಅಕಾಡೆಮಿಯ https://kstacademy.in ವೆಬ್‌ಸೈಟ್‌ನ್ನು ವೀಕ್ಷಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಸಾರ್ವಜನಿಕ ದೂರುಗಳಿಗೆ ಸ್ಪಂದನೆ – ಉಚಿತ ಕಾನೂನು ಸಲಹೆ ಡಿಸಿ, ಎಸ್‌ಪಿ ಕಚೇರಿಯಲ್ಲಿ ಕಾನೂನು ಸಲಹಾ ಕೇಂದ್ರ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.22–ಜಿಲ್ಲಾಧಿಕಾರಿಗಳ ಕಚೇರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿ ಸ್ಥಾಪಿಸಲಾದ ಕಾನೂನು ಸೇವಾ ಕೇಂದ್ರಗಳಿಗೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎನ್.ವಿ.ವಿಜಯ್ ಶುಕ್ರವಾರ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕಾನೂನು ಸಲಹೆ ಮತ್ತು ಸೇವೆಗಳನ್ನು ಒದಗಿಸಲು ಜಿಲ್ಲಾಧಿಕಾರಿಗಳ ಕಚೇರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿ ಕಾನೂನು ಸಲಹಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ತಿಳಿಸಿದರು.

ಮುಖ್ಯವಾಗಿ ಜಿಲ್ಲಾಡಳಿತ ಭವನಕ್ಕೆ ಕಚೇರಿ ಕೆಲಸದ ನಿಮಿತ್ತ ರೈತರು, ಮಹಿಳೆಯರು, ವೃದ್ದರು ಹಾಗೂ ಸಾರ್ವಜನಿಕರು ದಿನಂಪ್ರತಿ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುತ್ತಿರುತ್ತಾರೆ. ಅವರಿಗೆ ಅಲೆದಾಡುವದನ್ನು ತಪ್ಪಿಸುವ ಸಲುವಾಗಿ ಈ ಕಾರ್ಯಕ್ಕೆ ಮುಂದಾಗಿರುವುದಾಗಿ ವಿಜಯ್ ತಿಳಿಸಿದರು.

ಆಯಾ ತಾಲೂಕಿನ ತಹಶೀಲ್ದಾರ ಕಚೇರಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಸರಕಾರಿ ಆಸ್ಪತ್ರೆಗಳಲ್ಲಿರುವ ಎ.ಆರ್.ಟಿ ಕೇಂದ್ರಗಳಲ್ಲಿ ಹಾಗೂ ಜಿಲ್ಲಾ ಕಾರಾಗೃಹದಲ್ಲಿಯೂ ಸಹ ಕಾನೂನು ಸಲಹಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಅವರು ಹೇಳಿದರು.

ಈ ಕೇಂದ್ರದಲ್ಲಿ ಕೃಷಿ, ಮಹಿಳಾ ಹಕ್ಕು, ಭೂಮಿ, ಕುಟುಂಬ ಕಲಹ, ಹಿರಿಯ ನಾಗರಿಕರ ಹಕ್ಕು, ಕಾರ್ಮಿಕ, ಬಾಡಿಗೆ–ಗುತ್ತಿಗೆ, ಅಪರಾಧ, ದೌರ್ಜನ್ಯ, ಆರ್ಥಿಕ ಸೇರಿದಂತೆ ಇತರೆ ಸಮಸ್ಯೆಗಳ ಕುರಿತಂತೆ ಕಾನೂನು ಸಲಹೆ ಹಾಗೂ ಸೇವೆಗಳನ್ನು ನೀಡಲಾಗುತ್ತದೆ.

ಆರ್ಥಿಕ ಅಥವಾ ಇತರ ಅಸಾಮರ್ಥ್ಯಗಳಿಂದಾಗಿ ಯಾರೂ ನ್ಯಾಯ ಪಡೆಯುವುದರಿಂದ ವಂಚಿತರಾಗಬಾರದು ಎಂಬ ದೃಷ್ಟಿಯಿಂದ ಜಿಲ್ಲಾ ಮತ್ತು ತಾಲೂಕಾ ಹಂತದಲ್ಲಿ ಕಾನೂನು ಸೇವೆ ಪ್ರಾಧಿಕಾರ ಕಾರ್ಯನಿರ್ವಹಿಸುತ್ತಿದೆ. ಜನರಲ್ಲಿ ಕಾನೂನಿನ ಅರಿವು ಮತ್ತು ನೆರವು ನೀಡುವುದು ಪ್ರಾಧಿಕಾರದ ಉದ್ದೇಶವಾಗಿದೆ. ಈ ಕಾನೂನು ಸಲಹಾ ಕೇಂದ್ರದ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಲು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಹಾಂತೇಶ್ವರ ಜಿದ್ದಿ, ವಕೀಲರ ಸಂಘದ ಅಧ್ಯಕ್ಷರ ಬಸವರಾಜ ಗದ್ದಿ, ಕಾನೂನು ನೆರವು ಅಭಿರಕ್ಷಕರ ಕಚೇರಿಯ ವಕೀಲರಾದ ಎಂ.ಎಂ.ಕಂದಗಲ್, ಪ್ರಶಾಂತ ನಾರಾಯಣಕರ, ಪ್ರವೀಣ ಕಮ್ಮಾರ್, ವಿಜಯಕುಮಾರ ಬೇವಿನಕಟ್ಟಿ, ಅಕ್ಷತಾ ದೇವರೆಡ್ಡಿ, ಪೂಜಾ ಬಾರಾಟಕ್ಕೆ ಹಾಗೂ ಪ್ಯಾನೆಲ್ ವಕೀಲರಾದ ಗೀತಾ ಪಾಟೀಲ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮಕ್ಕಳ ಆರೋಗ್ಯಕ್ಕೆ ಕ್ರೀಡಾ ಚಟುವಟಿಕೆ ಪೂರಕ–ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.22–ವಿದ್ಯಾರ್ಥಿಗಳಿಗೆ ಶಿಕ್ಷಣದಷ್ಟೇ ಕ್ರೀಡಾ ಚಟುವಟಿಕೆಗಳು ಮುಖ್ಯ.ಬೆಳೆಯುವ ಮಕ್ಕಳ ಆರೋಗ್ಯಕ್ಕೆ ಕ್ರೀಡಾ ಚಟುವಟಿಕೆಗಳು ಪೂರಕವಾಗಿವೆ ಎಂದು ದೈಹಿಕ ಶಿಕ್ಷಣ ಪರಿವೀಕ್ಷಕ ಆರ್.ಆರ್.ಪಾಟೀಲ ಹೇಳಿದರು.

ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ, ಸಮೂಹ ಸಂಪನ್ಮೂಲ ಕೇಂದ್ರ ಮತ್ತು ಅಮರ ಉರ್ದು ಪ್ರೌಢಶಾಲೆಯ ಸಂಯುಕ್ತ ಆಶ್ರಯದಲ್ಲಿ ಬಾಗಲಕೋಟೆ ನಗರ ವಲಯ ಮಟ್ಟದ ಪ್ರೌಢಶಾಲೆಗಳ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.


ಕ್ರೀಡಾ ಚಟುವಟಿಕೆಗಳು ಸಮಗ್ರ ಶಿಕ್ಷಣದ ಭಾಗ. ಕ್ರೀಡೆಯಿಂದ ಆರೋಗ್ಯ ಸುಧಾರಿಸುತ್ತದೆ. ಓದಿನಲ್ಲಿ ಆಸಕ್ತಿ ಮೂಡಿಸಲು ಕ್ರೀಡಾ ಚಟುವಟಿಕೆಗಳು ಸಹಕಾರಿ ಎಂದು ತಿಳಿಸಿದ ಪಾಟೀಲ, ಉತ್ತಮ ಕಲಿಕೆಗೆ ಮಕ್ಕಳು ಆರೋಗ್ಯವಂತರಾಗಿರಬೇಕು. ಓದಿಗಷ್ಟೇ ಸೀಮಿತವಾದರೆ ಮಾನಸಿಕ ಒತ್ತಡ ಹೆಚ್ಚುತ್ತದೆ. ಕ್ರೀಡಾ ಚಟುವಟಿಕೆಗಳಲ್ಲಿ ತಮ್ಮನ್ನು ತೊಡಗಿಸಿಕೊಂಡಾಗ ಒತ್ತಡ ನಿವಾರಣೆಯಾಗುತ್ತದೆ. ಕ್ರೀಡೆಗಳಿಂದ ಸ್ಪರ್ಧಾ ಮನೋಭಾವ ಮೂಡುತ್ತದೆ ಎಂದು ಹೇಳಿದರು.

ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ನಾಗರಾಜ ದೇಶಪಾಂಡೆ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಪೋಷಕರು ಮಕ್ಕಳನ್ನು ಓದಿಗಷ್ಟೇ ಸೀಮಿತಗೊಳಿಸುತ್ತಿದ್ದಾರೆ. ಮಕ್ಕಳು ಹೆಚ್ಚು ಅಂಕ ಗಳಿಸಿದರೆ ಸಾಕು ಎಂಬ ಮನೋಭಾವದಿಂದ ಕ್ರೀಡೆಗಳು ಕಣ್ಮರೆಯಾಗುತ್ತಿವೆ. ಮಕ್ಕಳು ಕ್ರೀಡೆಗಳಲ್ಲಿ ಪಾಲ್ಗೊಳ್ಳಲು ಪೋಷಕರು ಪ್ರೋತ್ಸಾಹಿಸಬೇಕು. ಕ್ರೀಡೆಯಲ್ಲಿ ಸೋಲು, ಗೆಲುವು ಮುಖ್ಯವಲ್ಲ. ಭಾಗವಹಿಸುವಿಕೆ ಮುಖ್ಯ ಎಂದು ಹೇಳಿದರು.

ಅಧ್ಯಕ್ಷತೆಯನ್ನು ಅಮರ ಎಜ್ಯುಕೇಶನ್ ಮತ್ತು ವೆಲ್‌ಫೇರ್ ಸಂಸ್ಥೆಯ ಕಾರ್ಯದರ್ಶಿ ಮಹಮ್ಮದ ಇರ್ಫಾನ್ ಕಂಟ್ರಾಕ್ಟರ ವಹಿಸಿದ್ದರು. ಉರ್ದು ಶಿಕ್ಷಣ ಸಂಯೋಜಕ ವೈ.ಬಿ.ಸಾಲಿ, ಉರ್ದು ಸಿಆರ್‌ಪಿ ಇಬ್ರಾಹಿಂ ಮನಿಯಾರ, ಅಮರ ಉರ್ದು ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರಾದ ಶ್ರೀಮತಿ ಎ.ಯು.ಸಾರವಾಡ, ಎಂ.ಎ.ಜಮಾದಾರ ಇದ್ದರು.

ಪ್ರಕಾಶ ಗೌಡರ ಸ್ವಾಗತಿಸಿದರು. ಎಂ.ಎಲ್.ಬಾಗೇವಾಡಿ ವಂದಿಸಿದರು. ಅರ್ಜುನ ಮಾಳಿ ನಿರೂಪಿಸಿದರು.

# ರೆಡ್‌ಕ್ರಾಸ್ ಸಂಸ್ಥೆಯಿಂದ ಪತ್ರಕರ್ತ ಶಾಲಗಾರಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.22–ಸ್ವಾತಂತ್ರ್ಯೋತ್ಸವ ಜಿಲ್ಲಾ ಪ್ರಶಸ್ತಿ ಪಡೆದಿರುವ ಯುವ ಪತ್ರಕರ್ತ ಸಮಾಜವೀರ ಪತ್ರಿಕೆಯ ಸಂಪಾದಕ ಮುಜಫರ ಶಾಲಗಾರ ಅವರನ್ನು ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಜಿಲ್ಲಾ ಶಾಖೆ ವತಿಯಿಂದ ಸನ್ಮಾನಿಸಲಾಯಿತು.

ರೆಡ್‌ಕ್ರಾಸ್ ಸಂಸ್ಥೆಯ ಜಿಲ್ಲಾ ಚೇರ್ಮನ್ ಆನಂದ ಜಿಗಜಿನ್ನಿ ಮಾತನಾಡಿ, ಎನ್.ಎಚ್.ಶಾಲಗಾರ ನೇತೃತ್ವದಲ್ಲಿ ಕಳೆದ 40 ವರ್ಷಗಳಿಂದ ಪ್ರಕಟಗೊಳ್ಳುತ್ತಿರುವ ಸಮಾಜವೀರ ಪತ್ರಿಕೆ ಜಿಲ್ಲೆಯಲ್ಲಿ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದೆ. ಅವರ ಅಗಲಿಕೆಯ ನಂತರ ಅವರ ಪುತ್ರ ಮುಜಾಫರ್ ಶಾಲಗಾರ ಪತ್ರಿಕೆಯನ್ನು ಪ್ರಾದೇಶಿಕ ಪತ್ರಿಕೆಯನ್ನಾಗಿ ಪ್ರಕಟಿಸುತ್ತಿದ್ದು ಸಂತೋಷದ ವಿಚಾರವಾಗಿದೆ ಎಂದು ಹೇಳಿ, ಪತ್ರಿಕೆ ರಾಜ್ಯಮಟ್ಟಕ್ಕೂ ಬೆಳೆಯಲಿ ಎಂದು ಆಶಿಸಿದರು.

ಬಾಗಲಕೋಟೆ ಯೂನಿಯನ್ ಆಫ್ ಮರ್ಚಂಟ್ಸ್ ಅಸೋಸಿಯೇಷನ್ ಅಧ್ಯಕ್ಷ ರವಿ ಕುಮಟಗಿ ಮಾತನಾಡಿ, ನಿರ್ಭಿಡೆಯಿಂದ ಪತ್ರಿಕೆ ಉದ್ಯಮವನ್ನು ನಡೆಸುತ್ತಿರುವ ಶಾಲಗಾರ ಇನ್ನೂ ಹೆಚ್ಚಿನ ಸಾಧನೆ ಮಾಡಲಿ ಎಂದು ಹಾರೈಸಿದರು. ಉದ್ಯಮಿಗಳಾದ ಮಲ್ಲಿಕಾರ್ಜುನ ಶೀಲವಂತರ, ಶಾಮ ಭಟ್ಟಡ, ಡಾ. ಪ್ರಭಯ್ಯಾ ಪ್ರಭುಸ್ವಾಮಿಮಠ, ಡಾ.ರಾಘವೇಂದ್ರ ವನಕಿ ಮತ್ತಿತರರು ಉಪಸ್ಥಿತರಿದ್ದರು.

# ಭೂಮಿಗೆ ಸಾವಿಲ್ಲ, ನಾವು ಸಾಯಿಸುತ್ತಿದ್ದೇವೆ–ಗುರುಪಾದ ಶ್ರೀಗಳು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.22–ಸಂಪಾದಿಸಿದ ಹಣ ಬ್ಯಾಂಕಿನಲ್ಲಿಟ್ಟು, ಕಲುಷಿತ ಆಹಾರ ಸೇವನೆ ಮಾಡುವುದರಿಂದ ಆಯುಷ್ಯ ಕ್ಷೀಣಿಸುತ್ತದೆ. ಶ್ರೀಮಂತರಾಗುವುದು ಮುಖ್ಯವಲ್ಲ, ಆಯುಷ್ಯವಂತರಾಗುವುದು ಮುಖ್ಯ ಎಂದು ಜಾನಮಟ್ಟಿ–ಮರೇಗುದ್ದಿ ಅಡವಿಸಿದ್ಧೇಶ್ವರ ಗುರುಪಾದ ಮಹಾಸ್ವಾಮಿಗಳು ಹೇಳಿದರು.

ಜಿಲ್ಲೆಯ ಬೀಳಗಿ ತಾಲೂಕಿನ ಜಾನಮಟ್ಟಿ ಗ್ರಾಮದಲ್ಲಿ ಅಡವಿಸಿದ್ಧೇಶ್ವರ ಮಠದಲ್ಲಿ ಶ್ರಾವಣ ಮಾಸದ ಅಂಗವಾಗಿ ಜರುಗಿದ್ದ 30ನೇ ಪುರಾಣ ಪ್ರವಚನ ಮಹಾಮಂಗಲೋತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಭೂಮಿಗೆ ಸಾವಿಲ್ಲ. ಆದ–ರೆ ಅತಿಯಾದ ರಾಸಾಯನಿಕ ರಸಗೊಬ್ಬರ, ಕ್ರಿಮಿನಾಶಕಗಳ ಬಳಕೆಯಿಂದ ನಾವು ಭೂಮಿಯನ್ನು ಸಾಯಿಸುತ್ತಿದ್ದು, ಸಾವಯವ ಕೃಷಿ ಮಾಡುವ ಮೂಲಕ ಭೂಮಿಯನ್ನು ಜೀವಂತವಾಗಿರಸಬೇಕೆಂದು ಹೇಳಿದ ಪೂಜ್ಯರು, ಸಾವಯವ ಕೃಷಿಯಿಂದ ಆರೋಗ್ಯ ವೃದ್ಧಿಸಿಕೊಳ್ಳುವುದರ ಜೊತೆಗೆ ಭೂಮಿಯ ಫಲವತ್ತತೆ ಹೆಚ್ಚಿಸಬೇಕು. ಕೃಷಿ ಕುಟುಂಬಗಳು ದೇಶೀಯ ಆಕಳು ಸಾಕಿ ಹಾಲು, ಹೈನು ಸೇವನೆ ಮಾಡಿ ಆರೋಗ್ಯವಂತರಾಗಿ ಧೀರ್ಘಾಯುಷಿಗಳಾಗಬೇಕು ಎಂದು ಹೇಳಿದರು.

ಓದುವುದರಿಂದ ಜ್ಞಾನ ವೃದ್ಧಿಯಾಗುತ್ತದೆ. ಜಾಣ್ಮೆಯಿಂದ ಮಾತು ಕಟ್ಟಬೇಕು. ನಮ್ಮ ಮಾತುಗಳು ಮತ್ತೊಬ್ಬರಿಗೆ ಇರಿಸು ಮುರಿಸನ್ನುಂಟು ಮಾಡಬಾರದು. ಮಾತು ಮುತ್ತಿನ ಹಾರದಂತೆ ಇರಬೇಕೆಂದು ಗುರುಪಾದ ಸ್ವಾಮೀಜಿ ಹೇಳಿದರು.

ಪ್ರವಚನಕಾರ ಹುಚ್ಚಯ್ಯ ಹಿರೇಮಠ ಪುರಾಣ ಮಹಾಮಂಗಲಗೊಳಿಸಿದರು.

ಕನ್ನಡ ಜಾನಪದ ಪರಿಷತ್ ಜಿಲ್ಲಾಧ್ಯಕ್ಷ ಡಿ.ಎಂ.ಸಾವಕಾರ ಮಾತನಾಡಿ, ಪುರಾಣ ಪ್ರವಚನಗಳು ಮನುಷ್ಯನಿಗೆ ನೆಮ್ಮದಿ ನೀಡುತ್ತವೆ. ಶರಣರು, ಸಂತರು, ಮಹಾಂತರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಸುಂದರವಾದ ಬದುಕು ಕಟ್ಟಿಕೊಳ್ಳಬಹುದು ಎಂದರು.

ಪ್ರವಚನಕಾರ ಹುಚ್ಚಯ್ಯ ಹಿರೇಮಠ ಪುರಾಣ ಮಹಾಮಂಗಲಗೊಳಿಸಿದರು. ಶಂಕರ ಡಬರಿ ಸ್ವಾಗತಿಸಿದರು. ಅಡಿಯಪ್ಪ ಹಳ್ಳೂರ ನಿರೂಪಿಸಿದರು. ಜಗದೀಶ ವಟವಟಿ ವಂದಿಸಿದರು.

# ಬ್ರಾಹ್ಮಣ ಸಮುದಾಯದ ಸಂಘಟನೆಗೆ ಒತ್ತು–ಜೋಶಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.22–ಬ್ರಾಹ್ಮಣ ಸಮಾಜವನ್ನು ಆಧ್ಯಾತ್ಮಿಕ, ರಾಜಕೀಯ, ಸಾಮಾಜಿಕ ಹಾಗೂ ಆರ್ಥಿಕವಾಗಿ ಬಲಪಡಿಸುವ ಕಾರ್ಯವನ್ನು ಅಖಿಲ ಭಾರತೀಯ ಬ್ರಾಹ್ಮಣ ಮಹಾಸಂಘ ಮಾಡುತ್ತಿದೆ ಎಂದು ಮಹಾಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ವಿಶ್ವನಾಥ ಜೋಶಿ ಹೇಳಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬ್ರಾಹ್ಮಣ ಮಹಾಸಂಘ 15 ವರ್ಷ ಹಿಂದೆ ಪುಣೆಯಲ್ಲಿ ಪ್ರಾರಂಭವಾಯಿತು. ನಂತರ ಈಗ 22 ರಾಜ್ಯಗಳಲ್ಲಿ ಸಂಘಟನೆ ಮಾಡಲಾಗಿದ್ದು, ಬಾಗಲಕೋಟೆ ಜಿಲ್ಲೆಯಲ್ಲಿಯೂ ಸಂಘಟನೆ ಮಾಡಲಾಗುತ್ತಿದೆ ಎಂದರು.

ಸಂಘಟನೆಯ ರಾಷ್ಟ್ರೀಯ ಅಧ್ಯಕ್ಷ ಗೋವಿಂದ ಕುಲಕರ್ಣಿ ನೇತೃತ್ವದಲ್ಲಿ ಸಮುದಾಯದ ಅಭಿವೃದ್ಧಿ ಕೆಲಸ ಮಾಡುತ್ತಿದ್ದೇವೆ. ಸಮುದಾಯವನ್ನು ಆರ್ಥಿಕವಾಗಿ ಬಲಗೊಳಿಸಲು ಬ್ರಹ್ಮ ಉದ್ಯೋಗ ಎಂಬ ಕಾರ್ಯಕ್ರಮ ರೂಪಿಸಲಾಗಿದೆ ಎಂದು ಜೋಶಿ ಹೇಳಿದರು.

ಸಂಘಟನೆಯ ರಾಜ್ಯ ಉಪಾಧ್ಯಕ್ಷರನ್ನಾಗಿ ನಾರಾಯಣ ದೇಸಾಯಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿಯನ್ನಾಗಿ ನವೀನ ದೇಶಪಾಂಡೆ, ಮಹಿಳಾ ಅಧ್ಯಕ್ಷರನ್ನಾಗಿ ಮೋಹಿನಿ ಗಾಂವಕರ ಮತ್ತು ಜಿಲ್ಲಾ ಪ್ರಧಾನ ಕಾರ್ಯದರ್ಶಿಯನ್ನಾಗಿ ಶಿಲ್ಪಾ ಮನಗೂಳಿ ಅವರನ್ನು ನೇಮಕ ಮಾಡಲಾಗಿದೆ ಎಂದು ಅವರು ತಿಳಿಸಿದರು.

ಸಮಾಜದ ಮುಖಂಡ ರಾಘವೇಂದ್ರ ಅಲಗೂರ ಮಾತನಾಡಿ, ಉತ್ತರ ಕರ್ನಾಟಕದಲ್ಲಿ ಬ್ರಾಹ್ಮಣ ಸಂಘಟನೆ ಬಲಪಡಿಸುವ ನಿಟ್ಟಿನಲ್ಲಿ ಕೆಲಸ ಮಾಡಬೇಕಾಗಿದೆ. ಸಾಮಾಜಿಕ ನ್ಯಾಯದ ಅಡಿಯಲ್ಲಿ ಬ್ರಾಹ್ಮಣರು ಬರುತ್ತಾರೆ ಆದರೆ ನಮಗೆ ಆ ಆದ್ಯತೆ ಇಲ್ಲದಿರುವುದು ಅಸಮಾಧಾನದ ಸಂಗತಿಯಾಗಿದೆ ಎಂದರು.

ಸಮಾಜದಲ್ಲಿನ ಬಡ ಮಹಿಳೆಯರನ್ನು ಗುರುತಿಸಿ ಅವರಿಗೆ ನೆರವಾಗಬೇಕು, ಆಗ ಮಾತ್ರ ಈ ಸಂಘಟನೆಗೆ ಒಂದು ಅರ್ಥ ಬರುತ್ತದೆ. ಬಾಗಲಕೋಟೆ ಸಂಘಟನೆ ರಾಜ್ಯದಲ್ಲಿ ಮಾದರಿಯಾಗಿ ಬೆಳೆಯಲಿ ಎಂದರು.

ರಾಜ್ಯ ಉಪಾಧ್ಯಕ್ಷ ನಾರಾಯಣ ದೇಸಾಯಿ ಮಾತನಾಡಿ, ತ್ರಿಮತಸ್ಥ ಸಂಘಟನೆ ಮಾಡಬೇಕು. ಆಗ ಎಲ್ಲರನ್ನು ಒಂದೇ ವೇದಿಕೆಯಲ್ಲಿ ತಂದು ಎಲ್ಲರಿಗೂ ಬ್ರಾಹ್ಮಣ ಸಂಘಟನೆ ಶಕ್ತಿ ತೋರಿಸಬಹುದು ಎಂದರು.

ಶಿಲ್ಪಾ ಮನಗೂಳಿ, ಮೋಹಿನಿ ಗಾಂವಕರ, ಪವನ ಸೀಮಿಕೇರಿ ಇತರರು ಇದ್ದರು.

# ಪಕ್ಷ ಸಂಘಟನೆ, ಪ್ರಚಾರಕ್ಕೆ ಒತ್ತು ವಿನಯಕುಮಾರ ಸೊರಕೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.22– ಎಲ್ಲ ಹಂತಗಳಲ್ಲೂ ಕೆಪಿಸಿಸಿ ಪ್ರಚಾರ ಸಮಿತಿಗಳನ್ನು ರಚಿಸುವ ಮೂಲಕ ಪಕ್ಷ ಸಂಘಟನೆ ಹಾಗೂ ಪ್ರಚಾರಕ್ಕೆ ಹೆಚ್ಚಿನ ಒತ್ತು ನೀಡಲಾಗುವುದು ಎಂದು ಕೆಪಿಸಿಸಿ ಪ್ರಚಾರ ಸಮಿತಿ ಅಧ್ಯಕ್ಷ ವಿನಯಕುಮಾರ ಸೊರಕೆ ಹೇಳಿದರು.

ನಗರಕ್ಕೆ ಗುರುವಾರ ಭೇಟಿ ನೀಡಿದ್ದ ಅವರು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಕಿತ್ತೂರು ಕರ್ನಾಟಕದ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡಿ–ದ್ದು, ಪ್ರತಿ ಹಂತದಲ್ಲಿ ಪೂರ್ಣ ಪ್ರಮಾಣದ ಸಮಿತಿ ರಚಿಸಿ, ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರನ್ನು ಪ್ರಚಾರ ಕಾರ್ಯದಲ್ಲಿ ತೊಡಗಿಸಿಕೊಂಡು ಕಾರ್ಯಕರ್ತರ ಜತೆಗೂ ಸಮನ್ವಯ ಸಾಧಿಸುವ ಕೆಲಸ ಮಾಡಲಾಗುವುದು ಎಂದರು.

ಮೊದಲು ಪ್ರಚಾರ ಸಮಿತಿ ಕೇವಲ ಚುನಾವಣೆಗೆ ಮೀಸಲು ಎನ್ನುವಂತಾಗಿತ್ತು. ಈಗ ಪಕ್ಷ ಸಂಘಟನೆ ಮತ್ತು ಸರ್ಕಾರದ ಅಭಿವೃದ್ಧಿ ಕಾರ್ಯಗಳನ್ನು ಜನತೆಗೆ ತಿಳಿಸುವ ಕೆಲಸ ಕೂಡ ನಡೆ–ಯುತ್ತಿದೆ. ಹಾಗಾಗಿ ಪ್ರಚಾರ ಸಮಿತಿ ಜವಾಬ್ದಾರಿ ಹೆಚ್ಚಿದೆ ಎಂದು ಸೊರಕೆ ಹೇಳಿದರು.

ಮತಗಳ್ಳತನ ಕುರಿತು ಮಾತನಾಡಿದ ಅವರು, ಒಂದೊಂದು ಕ್ಷೇತ್ರದಲ್ಲಿ 20 ರಿಂದ 30 ಸಾವಿರ ಹೆಚ್ಚುವರಿ ಮತಗಳಿವೆ. ಈ ವಿಷಯ ಬಯಲಿಗೆ ತರಲಾಗಿದೆ. ಮಹಾರಾಷ್ಟ್ರದಲ್ಲಿ 41 ಲಕ್ಷ ಮತಗಳು ಹೆಚ್ಚುವರಿ ಆಗಿ ಸೇರ್ಪಡೆ ಆಗಿವೆ. ರಾಹುಲ್ ಗಾಂಧಿ ಅವರ ನೇತೃತ್ವದಲ್ಲಿ ಮತಗಳ್ಳತನ ಕುರಿತು ಹೋರಾಟ ಆರಂಭವಾದ ಬಳಿಕ ಬಿಹಾರದಲ್ಲಿ ಚುನಾವಣೆಗೂ ಮುನ್ನ ಹೆಚ್ಚುವರಿ ಮತ ತೆಗೆದು ಹಾಕುವ ಕೆಲಸ ನಡೆದಿದೆ. ಎಲ್ಲ ಕಡೆಗಳಲ್ಲೂ ಈ ಕೆಲಸ ನಡೆದಿದೆ. ಈ ಬಗ್ಗೆ ರಾಷ್ಟ್ರದಾದ್ಯಂತ ಜಾಗೃತಿ ಮೂಡಿಸುವ ಕೆಲಸ ಕಾಂಗ್ರೆಸ್ಸಿನಿಂದ ನಡೆದಿದೆ ಎಂದು ಅವರು ತಿಳಿಸಿದರು.

ಸಂವಿಧಾನದಿಂದ ಸಮಾಜವಾದ ತೆಗೆಯಬೇಕು ಎನ್ನುವ ಪ್ರಯತ್ನ ನಡೆದಿದೆ. ಇದರ ವಿರುದ್ಧವೂ ಪ್ರತಿಭಟನೆ ನಡೆಸಲಾಗುವುದು. ಸಮಸಮಾಜ ನಿರ್ಮಾಣ ಸಮಾಜವಾದದ ಉದ್ದೇಶವಾಗಿದೆ. ಅಂತಹ ಉದ್ದೇಶಕ್ಕೆ ಧಕ್ಕೆ ತರುವ ಪ್ರಯತ್ನಗಳು ನಡೆದಿವೆ ಎಂದು ಸೊರಕೆ ದೂರಿದರು.

ಧರ್ಮಸ್ಥಳ ವಿಚಾರದಲ್ಲಿ ಸತ್ಯಾಸತ್ಯತೆ ಹೊರ ಬರಬೇಕು ಎನ್ನುವ ಕಾರಣಕ್ಕೆ ಸರ್ಕಾರ ಎಸ್ ಐಟಿ ರಚನೆ ಮಾಡಿದೆ. ತನಿಖೆ ಆರಂಭಗೊಂಡಿದೆ. ಇಂತಹ ಸಮಯದಲ್ಲಿ ಬಿಜೆಪಿ ಅನಗತ್ಯ ಗೊಂದಲ ಸೃಷ್ಟಿಸುತ್ತಿದೆ. ಈ ವಿಷಯದಲ್ಲಿ ಹಿಂದೂ ಸಂಘಟನೆ ಮುಖಂಡ ಕಲ್ಲಡ್ಕ ಪ್ರಭಾಕರ ಭಟ್ ಅವರು ಏಕೆ ಮೌನ ವಹಿಸಿದ್ದಾರೆ ಎಂದು ಪ್ರಶ್ನಿಸಿದ ಅವರು, ಪ್ರಭಾಕರ ಭಟ್ ಅವರೇ ಉತ್ತರ ನೀಡಬೇಕು ಎಂದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಸ್.ಜಿ.ನಂಜಯ್ಯನಮಠ, ಮಾಜಿ ಸಚಿವ ಅಜಯಕುಮಾರ ಸರನಾಯಕ, ಶರಣಪ್ಪ ಕೊಟಗಿ, ಪಿ.ಕೆ.ನೀರಲಕಟ್ಟಿ, ನಾಗರಾಜ ಹದ್ಲಿ, ಗಸ್ತಿ ಇದ್ದರು.

# ಸಾರ್ವಜನಿಕರಿಗೆ ಬಿಟಿಡಿಎ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.22–ಘಟಪ್ರಭಾನದಿ ನೀರನ್ನು ಗದ್ದನಕೇರಿ ಕ್ರಾಸ್‌ನಲ್ಲಿರುವ ಜಲಶುದ್ಧೀಕರಣ ಘಟಕದಿಂದ ಶುದ್ಧೀಕರಿಸಿದ ನೀರನ್ನು ಬಾಗಲಕೋಟೆ ನವನಗರಕ್ಕೆ ಪೂರೈಸಲಾಗುತ್ತಿದ್ದು, ಪ್ರಸ್ತುತ ಮಳೆಗಾಲ ಇರುವುದರಿಂದ ನಿರಂತರವಾಗಿ ಮಳೆ ಸುರಿಯುತ್ತಿದ್ದು, ಘಟಪ್ರಭಾ ನದಿಗೆ ಹೊಸ ನೀರು ಹರಿದು ಬಂದಿರುವ ಕಾರಣ ಸಾರ್ವಜನಿಕರು ಆರೋಗ್ಯದ ದೃಷ್ಟಿಯಿಂದ ಕುಡಿಯುವ ನೀರನ್ನು ಸೋಸಿ, ಕಾಯಿಸಿ, ಆರಿಸಿ ಉಪಯೋಗಿಸಬೇಕೆಂದು ಕಾರ್ಯನಿರ್ವಾಹಕ ಇಂಜಿನಿಯರರು, ಬಿಟಿಡಿಎ ವಿಭಾಗ ನಂ: 01 ಬಾಗಲಕೋಟೆ ಇವರು ಪ್ರಾಧಿಕಾರದ ವತಿಯಿಂದ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಆ.24 ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.22–110 ಕೆವಿ ಹುನಗುಂದ ವಿ.ವಿ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣೆ ಕಾಮಗಾರಿ ಕೈಗೊಳ್ಳುವ ಪ್ರಯುಕ್ತ ಆಗಸ್ಟ್ 24 ರಂದು ಬೆಳಿಗ್ಗೆ 10 ಗಂಟೆಯಿಂದ ಸಾಯಂಕಾಲ 6 ಗಂಟೆಯವರೆಗೆ 110 ಕೆವಿ ಇಳಕಲ್ ವಿ.ವಿ ಕೇಂದ್ರ, 33 ಕೆವಿ ಕಂದಗಲ್ ವಿ.ವಿ ಕೇಂದ್ರ, 33 ಕೆವಿ ಗುಡೂರ ವಿ.ವಿ ಕೇಂದ್ರ, 110ಕೆವಿ–33ಕೆವಿ ಐಪಿಪಿ–ಇಎಚ್ಟಿ ಉಪಕೇಂದ್ರಗಳಿಂದ ಸರಬರಾಜಾಗುವ 110ಕೆವಿ, 33ಕೆವಿ ಮತ್ತು 11ಕೆವಿ ವಿದ್ಯುತ್ ಮಾರ್ಗಗಳ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು ಗ್ರಾಹಕರು ಸಹಕರಿಸಬೇಕೆಂದು ಕಾರ್ಯ ಮತ್ತು ಪಾಲನಾ ವಿಭಾಗ ಹೆಸ್ಕಾಂ, ಬಾಗಲಕೋಟೆಯ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಗಸ್ಟ್ 24 ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಕಲಬುರಗಿ,ಆ.22–ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ವಿಭಾಗ–1ರ 33/11ಕೆವಿ ಅಜಾದಪೂರ ವಿದ್ಯುತ್ ವಿತರಣಾ ಕೇಂದ್ರದಲ್ಲಿ 33 ಕೆವಿ ಲೈನ್‌ಬ್ರೇಕರ್ ತುರ್ತು ನಿರ್ವಹಣೆ ಕಾರ್ಯಕೈಗೊಂಡಿರುವ ಪ್ರಯುಕ್ತ ಸದರಿ ವಿತರಣಾ ಕೇಂದ್ರದಿಂದ ಹೊರಹೊಗುವ 11ಕೆವಿ ಫೀಡರ್‌ಗಳ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಮಗಳಲ್ಲಿ ಇದೇ ಆಗಸ್ಟ್ 24 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ಎಲ್ಲಾ ಗ್ರಾಹಕರು ಇದಕ್ಕೆ ಸಹಕರಿಸಬೇಕೆಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ವಿಭಾಗ–1ರ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

33 ಕೆವಿ ಅಜಾದಪೂರ: ಎಫ್–2 ಅಜಾದಪೂರ (ಎನ್.ಜೆ.ವೈ.) ಎಫ್–5 ಹಾಗರಗಾ (ಐಪಿ) ಫೀಡರಿನ ಅಜಾದಪೂರ, ಮಂಡೆಲ್ಕರ ಕಾಲೋನಿ, ಹಾಗರಗಾ, ಖಾಜಾ ಕೂಟನೂರ. ಇಟಗಾ, ಕಾಲಬೆನ್ನೂರ, ಬೊಲೆವಾಡ ಹಾಗೂ ಶ್ರೀನಿವಾಸ ಸರಡಗಿ.

# ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.22–2025–26 ನೇ ಸಾಲಿನ ಆತ್ಮ ಯೋಜನೆಯಡಿಯಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ವಿವಿಧ ಕೃಷಿ ಚಟುವಟಿಕೆಗಳಲ್ಲಿ ಸಾಧನೆ ಮಾಡಿದ ಸಾಮಾನ್ಯ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರು ಹಾಗೂ ರೈತ ಮಹಿಳೆಯರು ಅರ್ಜಿ ಸಲ್ಲಿಸಬಹುದು. ಬಾದಾಮಿ, ಬಾಗಲಕೋಟೆ, ಬೀಳಗಿ, ಹುನಗುಂದ, ಜಮಖಂಡಿ ಮತ್ತು ಮುಧೋಳ ತಾಲ್ಲೂಕುಗಳ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗಳಲ್ಲಿ ಆ.22 ರಿಂದ ಅರ್ಜಿ ಲಭ್ಯವಿದ್ದು, ಭರ್ತಿ ಮಾಡಿದ ಅರ್ಜಿಯನ್ನು ಸೆಪ್ಟೆಂಬರ್, 10ರ ಸಂಜೆ 5:30 ಗಂಟೆಯೊಳಗಾಗಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಸಹಾಯಕ ಕೃಷಿ ನಿರ್ದೇಶಕರ ಕಛೇರಿ ಅಥವಾ ರೈತ ಸಂಪರ್ಕ ಕೇಂದ್ರವನ್ನು ಸಂಪರ್ಕಿಸಲು ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಎಸ್. ಕಳ್ಳೆನ್ನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರವರ್ತನಾ ದಿನ ಕಾರ್ಯಕ್ರಮ–ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.22–2025–26ನೇ ಸಾಲಿನಲ್ಲಿ ಮಹಾರಾಷ್ಟ್ರದ ನಾಗಪುರ ದೀಕ್ಷಾಭೂಮಿಯಲ್ಲಿ ಅಕ್ಟೋಬರ್ 2 ರಂದು ನಡೆಯುವ ಪ್ರವರ್ತನಾ ದಿನ (ವಿಜಯದಶಮಿ) ಕಾರ್ಯಕ್ರಮಕ್ಕೆ ಡಾ.ಬಿ.ಆರ್. ಅಂಬೇಡ್ಕರ ಅನುಯಾಯಿಗಳ ಯಾತ್ರೆಯನ್ನು ಸರ್ಕಾರ ಅನುಮೋದಿಸಿದೆ.

ಜಿಲ್ಲಾವಾರು ಒಟ್ಟು 7,700 ಅರ್ಹ ಯಾತ್ರಾರ್ಥಿಗಳನ್ನು ಆಯ್ಕೆ ಮಾಡಿ ಕೆ.ಎಸ್.ಆರ್.ಟಿ.ಸಿ ಬಸ್ಸು ಹಾಗೂ ರೈಲಿನ ಮೂಲಕ ಸೆಪ್ಟೆಂಬರ್ 30 ರಿಂದ ಅಕ್ಟೋಬರ್ 4 ರವರೆಗೆ ಪ್ರಯಾಣ ವ್ಯವಸ್ಥೆ ಕಲ್ಪಿಸಲಾಗುತ್ತದೆ.

ಆಸಕ್ತ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಅರ್ಹ ಯಾತ್ರಾರ್ಥಿಗಳು ಆ.25 ರಿಂದ ಸೆಪ್ಟೆಂಬರ್ 9ರ ಒಳಗಾಗಿ ಸಮಾಜ ಕಲ್ಯಾಣ ಇಲಾಖೆಯ ಅಧಿಕೃತ ಜಾಲತಾಣ https://swd.karnataka.gov.in ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಬೇಕು.

ಭರ್ತಿ ಮಾಡಿದ ಅರ್ಜಿಯ ಪ್ರತಿಗಳು ಹಾಗೂ ಅಗತ್ಯ ದಾಖಲೆಗಳನ್ನು ಸಂಬಂಧಿಸಿದ ಸಹಾಯಕ ಸಮಾಜ ಕಲ್ಯಾಣ ನಿರ್ದೇಶಕರ ಕಛೇರಿಗೆ ನಿಗದಿತ ಅವಧಿಯಲ್ಲಿ ಸಲ್ಲಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೌದ್ಧಿಕ ಆಸ್ತಿ ಹಕ್ಕುಗಳು ಕಾರ್ಯಾಗಾರ: ಹೆಸರು ನೋಂದಣಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಆ.22–ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ವತಿಯಿಂದ "ಬೌದ್ಧಿಕ ಆಸ್ತಿ ಹಕ್ಕುಗಳು" (Intellectual Property Rights [IPR]) ವಿಷಯ ಕುರಿತು 2025ರ ಸೆಪ್ಟೆಂಬರ್ 10 ರಿಂದ 12 ರವರೆಗೆ ಮೂರು ದಿನಗಳ ಕಾಲ ಕುರಿತು ಅಕಾಡೆಮಿಯ ಕಚೇರಿಯಲ್ಲಿ ಕಾರ್ಯಾಗಾರವನ್ನು ಆಯೋಜಿಸಲಾಗಿದೆ ಎಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

ಈ ಕಾರ್ಯಾಗಾರದಲ್ಲಿ ವಿವಿಧ ಪ್ರತಿಷ್ಠಿತ ಸಂಸ್ಥೆಗಳ ಹೆಸರಾಂತ ವಿಜ್ಞಾನಿಗಳು ತಾಂತ್ರಿಕ ಉಪನ್ಯಾಸಗಳನ್ನು ನೀಡಲಿದ್ದು, ಆಸಕ್ತ ವಿಜ್ಞಾನ ಪದವಿ, ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಉಪನ್ಯಾಸಕರು/ಪ್ರಾಧ್ಯಾಪಕರು ಹಾಗೂ ವಿಜ್ಞಾನಾಸಕ್ತರು ಭಾಗವಹಿಸಬಹುದಾಗಿದೆ. ಆಸಕ್ತ ಪ್ರತಿನಿಧಿಗಳು ಗೋಗಲ್ ಫಾರ್ಮ್ (Google form-https://forms.gle/oPzdXFM-RGy3yBEEb8) ಮೂಲಕ 2025ರ ಸೆಪ್ಟೆಂಬರ್ 8 ರೊಳಗಾಗಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಕಾರ್ಯಾಗಾರದ ಸಂಯೋಜಕರು ಹಾಗೂ ವೈಜ್ಞಾನಿಕಾಧಿಕಾರಿ ಉಮೇಶ ಘಾಟಗೆ ಇವರ ಮೊಬೈಲ್ ಸಂಖ್ಯೆ 9743084194ಗೆ ಸಂಪರ್ಕಿಸಲು ಅಥವಾ ಅಕಾಡೆಮಿಯ https://kstacademy.in ವೆಬ್‌ಸೈಟ್‌ನ್ನು ವೀಕ್ಷಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

## ಗೌರಿ ಗಣೇಶ ಹಬ್ಬದ ಪ್ರಯುಕ್ತ: ಕ.ಕ.ರ.ಸಾ. ನಿಗಮದಿಂದ 290 ಹೆಚ್ಚುವರಿ ಬಸ್‌ಗಳ ಕಾರ್ಯಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಆ. 22:ಗೌರಿ ಗಣೇಶ ಹಬ್ಬದ ಪ್ರಯುಕ್ತ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಕ.ಕ.ರ.ಸಾ ನಿಗಮದಿಂದ ಇದೇ ಆಗಸ್ಟ್ 21 ರಿಂದ 25ರವರೆಗೆ ಕ.ಕ.ರ.ಸಾ.ನಿಗಮದ ತಾಲ್ಲೂಕು/ಜಿಲ್ಲಾ ಕೇಂದ್ರಗಳಿಂದ ಬೆಂಗಳೂರಿಗೆ ಮತ್ತು ಇತರೆ ಪ್ರಮುಖ ಸ್ಥಳಗಳಿಗೆ ಹಾಗೂ ಆಗಸ್ಟ್ 22, 23, 25 ಮತ್ತು 26 ರಂದು ಬೆಂಗಳೂರಿನಿಂದ ಕ.ರಾ.ರ.ಸಾ.ನಿಗಮದ ವ್ಯಾಪ್ತಿಯ ವಿವಿಧ ಸ್ಥಳಗಳಿಗೆ ದೈನಂದಿನ ಕಾರ್ಯಾಚರಣೆಯಲ್ಲಿರುವ 199 ಸಾರಿಗೆಗಳನ್ನು ಹೊರತುಪಡಿಸಿ, 290 ಹೆಚ್ಚುವರಿ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದ್ದು, ಸಾರ್ವಜನಿಕ ಪ್ರಯಾಣಿಕರು ಈ ಸಾರಿಗೆ ಸೌಲಭ್ಯದ ಸದುಪಯೋಗ ಪಡೆಯಬೇಕೆಂದು ಕಲಬುರಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವ್ಯವಸ್ಥಾಪಕ ನಿರ್ದೇಶಕರು ತಿಳಿಸಿದ್ದಾರೆ.

ಹಬ್ಬ ಮುಗಿದ ನಂತರ ಆಗಸ್ಟ್ 27 ರಿಂದ 30 ರ ವರೆಗೆ ಕ.ಕ.ರ.ಸಾ ನಿಗಮದ ವ್ಯಾಪ್ತಿಯ ಎಲ್ಲಾ ಜಿಲ್ಲೆಗಳಿಂದ ಬೆಂಗಳೂರು ಮತ್ತು ಇತರೆ ಸ್ಥಳಗಳಿಗೆ ಸಂಚಾರ ದಟ್ಟಣೆಗನುಗುಣವಾಗಿ ಹೆಚ್ಚುವರಿ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುತ್ತದೆ. ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಹೆಚ್ಚುವರಿ ಸಾರಿಗೆಗಳಿಗೆ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಪ್ರಯಾಣಿಕರು ಕರ್ನಾಟಕ ಹಾಗೂ ಅಂತರ ರಾಜ್ಯದಲ್ಲಿ ಇರುವ 18 ಗಣಕೀಕೃತ ಬುಕ್ಕಿಂಗ್ ಕೌಂಟರ್‌ಗಳ ಮುಖಾಂತರ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸಬಹುದಾಗಿದೆ.

ಪ್ರಯಾಣಿಕರು ಬಸ್ ನಿಲ್ದಾಣಗಳಿಗೆ ತೆರಳುವ ಮುನ್ನ ಮುಂಗಡ ಕಾಯ್ದಿರಿಸಲಾಗುವ ಟಿಕೇಟುಗಳ ಮೇಲೆ ನಮೂದಿಸಲಾಗಿರುವ ಬಸ್ ನಿಲ್ದಾಣ/ಪಿಕ್ ಅಪ್ ಪಾಯಿಂಟ್‌ನ ಹೆಸರನ್ನು ಗಮನಿಸಬೇಕು. ನಾಲ್ಕು ಅಥವಾ ಹೆಚ್ಚು ಪ್ರಯಾಣಿಕರು ಒಟ್ಟಾಗಿ ಮುಂಗಡ ಟಿಕೆಟ್ ಕಾಯ್ದಿರಿಸಿದಲ್ಲಿ ಶೇ. 5 ರಷ್ಟು ರಿಯಾಯಿತಿ ನೀಡಲಾಗುತ್ತದೆ. ಹೋಗುವ ಮತ್ತು ಬರುವ ಪ್ರಯಾಣದ ಟಿಕೇಟನ್ನು ಒಟ್ಟಿಗೆ ಕಾಯ್ದಿರಿಸಿದಾಗ ಬರುವ ಪ್ರಯಾಣ ದರದಲ್ಲಿ ಶೇ. 10 ರಿಯಾಯಿತಿ ನೀಡಲಾಗುತ್ತದೆ. ಅಲ್ಲದೇ, ನಿಗಮದ ಕಾರ್ಯಾಚರಣೆ ವ್ಯಾಪ್ತಿಯಲ್ಲಿನ ಎಲ್ಲಾ ತಾಲ್ಲೂಕು/ಜಿಲ್ಲಾ ಬಸ್ ನಿಲ್ದಾಣಗಳಿಂದ ಸಂಚಾರ ಒತ್ತಡಕ್ಕನುಗುಣವಾಗಿ ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

## ಒಳಮೀಸಲಾತಿಗೆ ಮಾದಿಗ ಸಮನ್ವಯ ಸಮಿತಿ ಸಂಪೂರ್ಣ ಬೆಂಬಲ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಆ.22: ರಾಜ್ಯ ಸರ್ಕಾರವು ನಿವೃತ್ತ ನ್ಯಾಯಮೂರ್ತಿ ನಾಗಮೋಹನದಾಸ್ ಅವರ ವರದಿಯನ್ವಯ ಒಳಮೀಸಲಾತಿಯನ್ನು ಜಾರಿಗೆ ತರುವುದಕ್ಕೆ ಜಿಲ್ಲಾ ಮಾದಿಗ ಸಮನ್ವಯ ಸಮಿತಿ ಸಂಪೂರ್ಣ ಬೆಂಬಲಿಸಲಿದೆ ಎಂದು ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಸದಸ್ಯ ಹಾಗೂ ಸಮಾಜದ ಹಿರಿಯ ಮುಖಂಡ ಶ್ಯಾಮ್ ನಾಟೀಕಾರ್ ಅವರು ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಳಮೀಸಲಾತಿಯನ್ನು ಘೋಷಿಸಿದ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರಿಗೆ ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಿದರು.

ಒಳಮೀಸಲಾತಿ ಮಾದಿಗರ ಹೋರಾಟದಿಂದ ಪರಿಶಿಷ್ಟರ 101 ಜಾತಿ ಮೂರು ಗುಂಪಾಗಿ ವಿಂಗಡನೆಗೆ ಒಳಮೀಸಲಾತಿ ಜಾ–ರಿಯಾಗಿದೆ. ಕರ್ನಾಟಕದ ಅನೇಕ ಸಮುದಾಯದ ಎಲ್ಲ ಜಾತಿ ವರ್ಗದವರು ಪರೋಕ್ಷವಾಗಿ ಬೆಂಬಲ ನೀಡಿದ್ದಾರೆ ಮತ್ತು ಅನೇಕ ಸರ್ಕಾರಿ, ಅರೆ ಸರ್ಕಾರಿ ನೌಕರರು, ರಾಜಕೀಯ ಮುಖಂಡರು, ಸಮಾಜದ ಅನೇಕ ಹೋರಾಟಗಾರರು ಹೋರಾಟಕ್ಕೆ ಬೆಂಬಲಿಸಿದ್ದರು ಎಂದು ಅವರು ಹೇಳಿದರು.

ಕೇವಲ ನಗರವಷ್ಟೇ ಅಲ್ಲ, ಜಿಲ್ಲೆಯ ಎಲ್ಲ ತಾಲ್ಲೂಕುಗಳಿಂದ ಹಾಗೂ ಪ್ರತಿಯೊಂದು ಗ್ರಾಮ ಮಟ್ಟದಲ್ಲೂ ಸಮಾಜದ ಯುವಕರು, ಮುಖಂಡರು, ಕಾರ್ಯಕರ್ತರು ಒಳಮೀಸಲಾತಿ ಜಾರಿಗಾಗಿ ಮಾಡಿದ ಹೋರಾಟಕ್ಕೆ ಪ್ರತಿಫಲ ದೊರಕಿದೆ ಎಂದು ಅವರು ಶ್ಲಾಘಿಸಿದರು.

ಈ ಒಳ ಮೀಸಲಾತಿ ಹೋರಾಟಕ್ಕೆ ಅನೇಕ ಮುಖಂಡರುಗಳು 35–40 ವರ್ಷಗಳಿಂದ ಹೋರಾಟ ಮಾಡಿದಕ್ಕಾಗಿ ಪ್ರತಿಫಲ ಸಿಕ್ಕಂತಾಗಿದೆ. ಈ ಹೋರಾಟಕ್ಕೆ ಸಂಬಂಧಪಟ್ಟ ಕಲಬುರಗಿ ಜಿಲ್ಲೆಯ, ಮಾಪಣ್ಣ ಹದನೂರ, ಶಾಮ ನಾಟಕಾರ, ಶ್ರೀ ಭೀಮಣ್ಣ ಬಿಲ್ಲವ, ಶ್ರೀ ಪರಮೇಶ್ವರ ಖಾನಾಪೂರ, ದಿ॥ಜಿ.ರಾಮಕೃಷ್ಣ ಮಾಜಿ ಸಚಿವರು, ಡಾ. ಗೋಪಾಲರಾವ ತೆಲಂಗಿ, ವಿಜಯಕುಮಾರ ಜಿ. ರಾಮಕೃಷ್ಣ, ರಾಜು ವಾಡೇಕರ್, ಲಿಂಗರಾಜ್ ತಾರಫೈಲ್, ನಾಗೇಶ ನಿವೃತ್ತ ಅಧಿಕಾರಿ, ಶ್ರೀ ಗೋಪಿಕೃಷ್ಣ ಗುಡೆನವರು, ಶ್ರೀ ದಶರಥ ಕಲಗುರ್ತಿ, ಮಲ್ಲಪ್ಪ ಚಿಗಾನೂರ, ಶ್ರೀ ರಮೇಶ ವಾಡೇಕರ್, ಮಲ್ಲಿಕಾರ್ಜುನ ಜೀನಕೇರಿ, ಬಾಬು ಸುಂಠಾಣ, ಶ್ರೀ ಪ್ರದೀಪ ಭಾವೆ, ಶ್ರೀ ರಂಜಿತ ಮೂಲಿಮನಿ, ಶ್ರೀ ರುಕ್ಕಪ್ಪ ಕಾಂಬಳೆ, ನಾಗಪ್ಪ ಇವರಿಗೆ ಕೃತಜ್ಞತೆ ಸಲ್ಲಿಸಿದರು.

ಸುದ್ದಿಗೋಷ್ಠಿಯಲ್ಲಿ ಗೋಪಾಲರಾವ್ ಕಟ್ಟಿಮನಿ, ಎ.ಎಚ್. ನಾಗೇಶ್, ಪ್ರದೀಪ್ ಭಾವೆ, ಶ್ರೀಮಂತ ಭಂಡಾರಿ, ಶಾಮರಾವ್ ಚಿಂಚೋಳಿ, ನರಸ್ಪ, ಪರಶುರಾಮ್ ನಾಟೀಕಾರ್ ಮುಂತಾದವರು ಉಪಸ್ಥಿತರಿದ್ದರು.

## ಹನುಮಾನ ದೇವಾಲಯಕ್ಕೆ ಎತ್ತುಗಳ ಪ್ರದಕ್ಷಿಣೆ ಹಾಕಿ ಹೊಳ್ವ ಹಬ್ಬ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.22:ಹನುಮಾನ ದೇವಾಲಯಕ್ಕೆ ಎತ್ತುಗಳ ಪ್ರದಕ್ಷಿಣೆ ಹಾಕಿ ಹೊಳ್ವ ಹಬ್ಬ ಶುಕ್ರವಾರ ಸಂಭ್ರಮ ಸಡಗರ ದಿಂದ ಆಚರಣೆ ಮಾಡಲಾಯಿತು.

ಹಬ್ಬದ ಪ್ರಯುಕ್ತ ಬೆಳಿಗ್ಗೆ ಎತ್ತುಗಳನ್ನು ಸ್ವಚ್ಛ ಮಾಡಿ, ಕೊಂಬುಗಳಿಗೆ ಕಲರ್ ಹಚ್ಚಿ, ಹೊಸ ಮೋರಕಿ, ಘಂಟೆ, ದಂಡಿ, ಜುಮಾರಗಳಿಂದ ಸಿಂಗಾರಮಾಡಿ ಸಂಜೆ ಹೊತ್ತಿಗೆ ಗ್ರಾಮದ ಹನುಮಾನ ದೇವಾಲಯಕ್ಕೆ ಸುತ್ತು ಹಾಕಿಸಿ, ಮನೆಯಲ್ಲಿ ಪೂಜೆ ಮಾಡಿದರು.ನಂತರ ಹಬ್ಬದ ವಿಶೇಷ ಊಟವಾದ ಎಣ್ಣೆ ಹೋಳಗಿ, ತುಪ್ಪ,ಕೊಡಬೇಳಿ,ಹೊಳಗಿ,ಅನ್ನಾ, ಸಾಂಬಾರ ಸವಿದು ಸಂಭ್ರಮಪಟ್ಟರು.ಈ ಸಂದರ್ಭದಲ್ಲಿ ಸುಭಾಸ ಪಾಟೀಲ, ಗಿರಿರಾಜ ಶ್ರೀಗಿರೆ,ಸಂಗಮನಾಥ ಬಿರಾದಾರ,ಸತೀಶ ತಪ್ಪಸಾಳೆ,ಸುಭಾಷ ಬಿರಾದಾರ, ಶಿವಪ್ಪ ಮೆಹತ್ರೆ, ವಿಷ್ಣು ರಾಂಪುರೆ,ನಾಗರಾಜ ಸ್ವಾಮಿ,ಓಂಕಾರ ರಾಂಪುರೆ, ಚಂದ್ರಶೇಖರ ಮೆಹತ್ರೆ ಸೇರಿದಂತೆ ಇನ್ನಿತರು ಇದ್ದರು.

## ಪ್ರವಾಹ ಭೀತಿ ಹಿನ್ನೆಲೆ:ಅಧಿಕಾರಿ-ಸಿಬ್ಬಂದಿಗಳು ಕೇಂದ್ರಸ್ಥಾನದಲ್ಲಿರುವಂತೆ ಡಿ.ಸಿ.ಸೂಚನೆ

ಕಲಬುರಗಿ,ಆ.22: ಮಹಾರಾಷ್ಟ್ರ ರಾಜ್ಯದ ಉಜ್ಜನಿ ಜಲಾಶಯದಿಂದ ಭೀಮಾ ನದಿಗೆ ಅಪಾರ ಪ್ರಮಾಣದಲ್ಲಿ ನೀರು ಹರಿಬಿಡಲಾಗುತ್ತಿರುವುದರಿಂದ ಜಿಲ್ಲೆಯ ಅಫಜಲಪೂರ, ಕಲಬುರಗಿ, ಶಹಾಬಾದ, ಜೇವರ್ಗಿ ಹಾಗೂ ಚಿತ್ತಾಪೂರ ತಾಲ್ಲೂಕುಗಳ ಒಟ್ಟು 105 ಗ್ರಾಮಗಳಲ್ಲಿ ಪ್ರವಾಹ ಉಂಟಾಗುವ ಸಾಧ್ಯತೆ ಇದ್ದು, ಪ್ರವಾಹ ಪರಿಸ್ಥಿತಿ ಸಮರ್ಥವಾಗಿ ನಿಭಾಯಿಸುವ ನಿಟ್ಟಿನಲ್ಲಿ ಎಲ್ಲಾ ಜಿಲ್ಲಾ ಮತ್ತು ತಾಲೂಕಾ ಮಟ್ಟದ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿರುವಂತೆ ಡಿ.ಸಿ. ಬಿ.ಫೌಜಿಯಾ ತರನ್ನುಮ್ ಸೂಚಿಸಿದ್ದಾರೆ.

ಮಹಾರಾಷ್ಟ್ರದಿಂದ 1.35 ಲಕ್ಷ ಕ್ಯುಸೆಕ್ ನೀರು ಹರಿಬಿಟಿದ್ದರಿಂದ ನೀರ ಅಫಜಲಪೂರ ತಾಲ್ಲೂಕಿನ ಸೊನ್ನ ಬ್ಯಾರೇಜ್‌ಗೆ ತಲುಪಿ ಅಲ್ಲಿಂದ 1.84 ಲಕ್ಷ ಕ್ಯುಸೆಕ್ ನೀರು ಭೀಮಾ ನದಿಗೆ ಹೊರ ಬಿಡಲಾಗುತ್ತಿದೆ.

ಹೀಗಾಗಿ ಜಿಲ್ಲೆಯ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿ–ಸಿಬ್ಬಂದಿಗಳು ಪ್ರವಾಹ ಮತ್ತು ಭಾರಿ ಮಳೆಯಿಂದ ಯಾವುದೇ ಅಹಿತಕರ ಘಟನೆಯಾಗದಂತೆ ಕೇಂದ್ರ ಸ್ಥಾನದಲ್ಲಿದ್ದು ಮುನ್ನಚ್ಚರಿಕೆ ಕ್ರಮ ತೆಗೆದುಕೊಳ್ಳುವಂತೆ ನಿರ್ದೇಶನ ನೀಡಿದ್ದಾರೆ.

## ಉಪ ಲೋಕಾಯುಕ್ತರ ಕಾರ್ಯಕ್ರಮವು ಶಿಸ್ತುಬದ್ಧವಾಗಿ ನಡೆಯಲು ಸಿದ್ಧತೆಗೆ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆ 22:ರಾಯಚೂರು ಜಿಲ್ಲೆಯಲ್ಲಿ ಆಗಸ್ಟ್ 28 ರಿಂದ ಆಗಸ್ಟ್ 30ರವರೆಗೆ ಪ್ರವಾಸದಲ್ಲಿರುವ ಮಾನ್ಯ ಗೌರವಾನ್ವಿತ ಉಪ ಲೋಕಾಯುಕ್ತರ ಕಾರ್ಯಕ್ರಮವು ಶಿಸ್ತುಬದ್ಧವಾಗಿ ಮತ್ತು ಶಿಷ್ಟಾಚಾರದಂತೆ ನಡೆಯಲು ಎಲ್ಲಾ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಗಸ್ಟ್ 22ರ ಸಂಜೆ ನಡೆದ ಮತ್ತೊಂದು ಸುತ್ತಿನ ಪೂರ್ವಭಾವಿ ಸಿದ್ಧತಾ ಸಭೆ ನಡೆಸಿ ಅವರು ಮಾತನಾಡಿದರು.

ಗೌರವಾನ್ವಿತ ಉಪಲೋಕಾಯುಕ್ತರಾದ ನ್ಯಾ.ಬಿ.ವೀರಪ್ಪ ಅವರು ರಾಯಚೂರು ಜಿಲ್ಲೆಯಲ್ಲಿ ಆಗಸ್ಟ್ 28, 29 ಮತ್ತು 30ರಂದು ಮೂರು ದಿನಗಳ ಕಾಲ ಕೈಗೊಂಡ ನಾನಾ ಕಾರ್ಯಕ್ರಮಗಳ ಬಗ್ಗೆ ಈಗಾಗಲೇ ಅಧೀಕೃತ ಪ್ರವಾಸದ ವಿವರ ಬಂದಿರುತ್ತದೆ. ಅದರಂತೆ ಎಲ್ಲ ಕಾರ್ಯಕ್ರಮಗಳು ಸಮಯಕ್ಕೆ ಸರಿಯಾಗಿ ನಡೆಯಬೇಕು. ಶಿಷ್ಟಾಚಾರ ಉಲ್ಲಂಘನೆಯಾಗದಂತೆ ಎಲ್ಲಾ ಕಾರ್ಯಕ್ರಮಗಳು ಸಮಯಕ್ಕನುಸಾರ ಸುವ್ಯವಸ್ಥಿತವಾಗಿ ನಡೆಯಬೇಕು.

ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಜಗಜ್ಯೋತಿ ಬಸವೇಶ್ವರರ ಆಡಿಟೋ–ರಿಯಂ ಹಾಲ್, ಜಿಲ್ಲಾ ನ್ಯಾಯಾಲಯದ ಸಂಕೀರ್ಣ ಸೇರಿದಂತೆ ವಿವಿಧೆಡೆ ಕಾರ್ಯಕ್ರಮ ನಡೆಯುವ ಬಗ್ಗೆ ಮತ್ತು ಕಾರ್ಯಕ್ರಮದ ವಿವರದ ಬಗ್ಗೆ ಅಧಿಕಾರಿಗಳಿಗೆ ತಿಳಿಸಲಾಗಿದೆ. ಕಾರ್ಯಕ್ರಮದ ಸ್ಥಳದಲ್ಲಿ ಊಟ, ಉಪಹಾರ, ಚಹಾ ವಿತರಣೆ, ಕುಡಿಯುವ ನೀರು ಪೂರೈಕೆ, ಕಾರ್ಯಕ್ರಮದ ಸ್ಥಳವು ಶುಚಿಯಾಗಿರುವುದು ಮತ್ತು ಸೂಕ್ತ ಪೊಲೀಸ್ ಭದ್ರತೆ ಏರ್ಪಾಡು ಹೀಗೆ ನಾನಾ ಕಾರ್ಯಗಳ ಬಗ್ಗೆ ಈಗಾಗಲೇ ಜಿಲ್ಲಾಡಳಿತದಿಂದ ಸಮಿತಿ ರಚನೆ ಮಾಡಿ ಹಂಚಿಕೆ ಮಾಡಿದಂತೆ ಎಲ್ಲ ಕಾರ್ಯಗಳ ನಿರ್ವಹಣೆಯು ಅಚ್ಚುಕಟ್ಟಾಗಿ ನಡೆಯಬೇಕು ಎಂದು ತಿಳಿಸಿದರು.

ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣವು ಶುಚಿತ್ವದಿಂದ ಕೂಡಿರಬೇಕು. ಕಾರ್ಯಕ್ರಮದ ಸ್ಥಳವಾದ ಜಗಜ್ಯೋತಿ ಬಸವೇಶ್ವರರ ಸಭಾಂಗಣವನ್ನು ಧ್ವನಿ, ಬೆಳಕು, ಗಾಳಿ ಬರುವ ಹಾಗೆ ಅಚ್ಚುಕಟ್ಟಾಗಿ ಸಿದ್ಧಪಡಿಸಬೇಕು ಎಂದು ಸೂಚನೆ ನೀಡಿದರು.ಈ ಕಾರ್ಯಕ್ರಮದ ಬಗ್ಗೆ ಇನ್ನು ಹೆಚ್ಚಿನ ರೀತಿಯಲ್ಲಿ ಪ್ರಚಾರ ನಡಯಬೇಕು. ಫಲಕಗಳಲ್ಲಿ ಬ್ಯಾನರ್ ಅಳವಡಿಸಿ ಮಾನ್ಯ ಲೋಕಾಯುಕ್ತರು ಆಗಮಿಸುವ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ಒದಗಿಸಬೇಕು. ಆಯಾ ಕಚೇರಿಗಳ ಮುಂದೆ ಬ್ಯಾನರ್ ಅಳವಡಿಸಿ ಪ್ರಚಾರ ನಡೆಸಬೇಕು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಾನ್ಯ ಉಪ ಲೋಕಾಯುಕ್ತರ ಕಾರ್ಯಕ್ರಮಕ್ಕೆ ಕೆಲವೇ ದಿನಗಳು ಬಾಕಿ ಇದ್ದು ಬಾಕಿ ಕಾರ್ಯವನ್ನು ಬೇಗನೆ ಪೂರ್ಣಗೊಳಿಸಬೇಕು. ಕಾರ್ಯಕ್ರಮದ ದಿನಗಳಂದು ಅಧಿಕಾರಿಗಳು ಕಡ್ಡಾಯ ಹಾಜರಿರಬೇಕು ಎಂದು ಸೂಚನೆ ನೀಡಿದರು.ಸಭೆಯಲ್ಲಿ ತಹಸೀಲ್ದಾರ ಸುರೇಶ ವರ್ಮಾ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

## ನೆರೆ ಹಾನಿ ತಪ್ಪಿಸಿ, ಪರಿಹಾರ ನೀಡಲು ಒತ್ತಾಯಿಸಿ ಪ್ರತಿಭಟನೆ




ಕಲಬುರಗಿ:ಆ.22:ನೆರೆಹಾವಳಿಯನ್ನು ರಾಜ್ಯ ಸರ್ಕಾರವು ಸೂಕ್ತ ರೀತಿಯಲ್ಲಿ ನಿಯಂತ್ರಿಸುವುದರೊಂದಿಗೆ ಹಾನಿಯಾಗುವುದನ್ನು ತಪ್ಪಿಸಬೇಕು ಹಾಗೂ ಸಂತ್ರಸ್ತರಿಗೆ ಸೂಕ್ತ ಪರಿಹಾರ ಕೊಡಬೇಕು ಎಂದು ಒತ್ತಾಯಿಸಿ ಶುಕ್ರವಾರ ಭಾರತೀಯ ಕಿಸಾನ್ ಸಂಘದ ನೇತೃತ್ವದಲ್ಲಿ ರೈತರು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಬೃಹತ್ ಪ್ರತಿಭಟನೆ ಮಾಡಿದರು.

ಪ್ರತಿಭಟನೆಕಾರರು ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿ, ಸತತವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಉದ್ದು, ಹೆಸರು, ಎಳ್ಳು ಮುಂತಾದ ಬೆಳೆಗಳಿಗೆ ಹಾನಿಯಾಗಿದೆ. ರೈತರು ತೊಗರಿಯನ್ನು ಎರಡ್ಮೂರು ಬಾರಿ ಬಿತ್ತಿದರೂ ಸಹ ಅತಿವೃಷ್ಟಿಯಿಂದ ಬೆಳೆ ಹಾನಿಯಾಗಿದ್ದು, ಸೂಕ್ತ ಪರಿಹಾರ ಕೊಡಬೇಕು ಎಂದು ಒತ್ತಾಯಿಸಿದರು.

ಬೆಣ್ಣೆತೊರೆ ನದಿಯಿಂದ ಮಳೆಗಾಲದಲ್ಲಿ ನೀರು ಪ್ರಮಾಣ ಹೆಚ್ಚಾಗಿ ದ್ವಾರಗಳನ್ನು ತೆರೆಯಲಾಗುತ್ತಿದೆ. ಇದರಿಂದಾಗಿ ನದಿ ಪಾತ್ರದಲ್ಲಿ ನೆರೆ ಆವರಿಸಿ ಹೊಲ ಗದ್ದೆಗಳಿಗೆ ನೀರು ನುಗ್ಗಿ ಅಪಾರ ಬೆಳೆ ನಷ್ಟವಾಗುತ್ತಿದೆ. ಈಗ ಟೆಂಗಳಿ, ತೊನಸನಹಳ್ಳಿ, ಮಲಕೂಡ ಮುಂತಾದ ಗ್ರಾಮಗಳಲ್ಲಿ ಪ್ರವಾಹ ಪೀಡಿತಗೊಂಡು ಅಪಾರ ಪ್ರಮಾಣದಲ್ಲಿ ಹಾನಿಯಾಗಿದೆ. ಆದ್ದರಿಂದ ಆಣೆಕಟ್ಟೆಯ ನೀರಿನ ದ್ವಾರಗಳನ್ನು ಗರಿಷ್ಠ ಮಟ್ಟದ ನೀರು ಇದ್ದಾಗ ತೆರೆಯುವ ಬದಲು ಮಳೆಗಾಲ ಆರಂಭವಾದಾಗಿನಿಂದ ಸ್ವಲ್ಪ ಪ್ರಮಾಣದಲ್ಲಿ ದ್ವಾರ ತೆರೆದು ಏಕರೂಪದ ನೀರು ಹೊರಹೋಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.

ಜಿಲ್ಲೆಯು ತೊಗರಿ ಕಣಜವಾಗಿದೆ. ಕಳೆದ 2024ನೇ ಸಾಲಿನಲ್ಲಿ ತೊ–ಗರಿಯ ಮಾರುಕಟ್ಟೆ ದರವು 11000ರಿಂದ 11800ರೂ.ಗಳವರೆಗೆ ಇತ್ತು. ಈ ಅವಧಿಯಲ್ಲಿ ಸರಾಸರಿ 6200ರೂ.ಗಳಾಗಿದೆ. ಪ್ರತಿ ವರ್ಷ ತೊಗರಿ ಉತ್ಪಾದನೆ ಖರ್ಚು ಹೆಚ್ಚಾಗುತ್ತಿರುವುದರಿಂದ ರೈತರು ಆರ್ಥಿಕ ಸಂಕಷ್ಟದಲ್ಲಿದ್ದಾರೆ. ಹಾಗಾಗಿ ರೈತರು ಬೆಳೆದ ತೊಗರಿಯನ್ನು ಸರ್ಕಾರವು ಕನಿಷ್ಠ ಬೆಂಬಲ ಬೆಲೆಯಲ್ಲಿ ಖರೀದಿಸಬೇಕು ಎಂದು ಅವರು ಒತ್ತಾಯಿಸಿದರು.ತೊಗರಿ ಮತ್ತು ಇನ್ನಿತರ ಬೇಳೆಕಾಳುಗಳನ್ನು ವಿದೇಶದಿಂದ ಆಮದು ಮಾಡಿಕೊಳ್ಳುವುದನ್ನು ತಡೆಯುವಂತೆ, ರೈತರು ಉಪಯೋಗಿಸುವ ಪರಿಕರಗಳ ಮೇಲಿನ ಜಿಎಸ್‌ಟಿಯನ್ನು ರದ್ದುಪಡಿಸುವಂತೆ, ರೈತರು ತಮ್ಮ ಜಮೀನುಗಳಿಗೆ ಕೃಷಿ ಉಪಕರಣಗಳೊಂದಿಗೆ ಹೋಗಲು ಪರದಾಡುತ್ತಿದ್ದಾರೆ. ಆದ್ದರಿಂದ ಹಣಾದಿಗಳನ್ನು ಸರ್ವೆ ಮಾಡಿ ಒತ್ತುವರಿಗಳನ್ನು ತೆರವುಗೊಳಿಸುವಂತೆ, ಗೋವು ಆಧಾರಿತ ಕೃಷಿಗೆ ಉತ್ತೇಜನ ನೀಡಲು ರೈತರಿಗೆ ಹಾಗೂ ಗೋಶಾಲೆಗಳಿಗೆ ಸರ್ಕಾರದಿಂದ ನೆರವು ನೀಡುವಂತೆ, ವಿದ್ಯುತ್ ಪರಿವರ್ತಕ ಸುಟ್ಟುಹೋದರೆ ಯಾವುದೇ ಹಣ ಪಡೆಯದೇ 72 ಗಂಟೆಗಳಲ್ಲಿ ದುರಸ್ತಿಗೊಳಿಸುವಂತೆ, ರೈತರ ಪಂಪ್‌ಸೆಟ್ಟುಗಳಿಗೆ ಏಳು ತಾಸು ವಿದ್ಯುತ್ ಪೂರೈಸುವಂತೆ ಅವರು ಆಗ್ರಹಿಸಿದರು.

ಕಳೆದ 2024–2025ನೇ ಸಾಲಿನಲ್ಲಿ ಬೆಳೆ ಹಾನಿ ಬಾಕಿ ಇರುವ 326 ಕೋಟಿ ರೂ.ಗಳ ವಿಮಾ ಪರಿಹಾರವನ್ನು ಕೂಡಲೇ ವಿತರಿಸುವಂತೆ, ರೈತರಿಗೆ ಅಹವಾಲು ಸಲ್ಲಿಸಲು ರೈತ ಸಂಪರ್ಕ ಕೇಂದ್ರದ ಟೋಲ್ ಫ್ರೀ ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ಕ್ರಮ ಕೈಗೊಳ್ಳುವಂತೆ, ವಿಮಾ ಕಂಪೆನಿಯ ಮಧ್ಯವರ್ತಿಗಳ ಹಾವಳಿ ತಡೆಯುವಂತೆ, ಕೃಷಿಗೆ ಕೂಲಿ ಕಾರ್ಮಿಕರು ದೊರೆಯುವಂತೆ ನೋಡಿಕೊಳ್ಳುವಂತೆ ಅವರು ಒತ್ತಾಯಿಸಿದರು.

ಜಗತ್ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಜರುಗಿದ ಬೃಹತ್ ಪ್ರತಿಭಟನಾ ಮೆರವಣಿಗೆಯಲ್ಲಿ ನೇತೃತ್ವ ವಹಿಸಿದ್ದ ಪರಿಷತ್ ಅಧ್ಯಕ್ಷ ಡಾ. ಓಂಪ್ರಕಾಶ್ ಹೆಬ್ಬಾಳ್ ಟೆಂಗಳಿ, ಮಲ್ಲಿಕಾರ್ಜುನ್ ಬಿ. ಭೀಮನಳ್ಳಿ, ಪುಟ್ಟುಸ್ವಾಮಿ, ವಸಂತಕುಮಾರ್ ಬಿ. ಸೇಡಂ ವಕೀಲರು, ಡಾ. ಜಿ. ಮಹಿಪಾಲರೆಡ್ಡಿ ಜಟ್ಟೂರ್ ಚಿಂಚೋಳಿ ಮುಂತಾದವರು ಪಾಲ್ಗೊಂಡಿದ್ದರು.

## 9.25ಲಕ್ಷ ರೂ ಮೌಲ್ಯದ 13 ಮೋಟಾರ್ ಸೈಕಲ್ ಜಪ್ತಿ; ಮೂವರು ಆರೋಪಿಗಳ ಬಂಧನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಅ.22: ಪಟ್ಟಣದ ಮಂಕಾಲ ಲೇಔಟನಲ್ಲಿ ಆಗಸ್ಟ್ 19ರಂದು ಕಳ್ಳತನ ಪ್ರಕರಣ ಚಿಟಗುಪ್ಪ ಪೊಲೀಸ್ ಠಾಣೆಯಲ್ಲಿ ದಾಖಲಾಗಿತ್ತು.ಪ್ರಕರಣದ ತನಿಖೆಗಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟೆ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ ಪೂಜಾರಿ ಹಾಗೂ ಹುಮನಾಬಾದ ಉಪ ವಿಭಾಗದ ಪೊಲೀಸ್ ಉಪಾಧೀಕ್ಷಕ ಜೆ. ಎಸ್. ನ್ಯಾಮೇಗೌಡರ ಸಿಪಿಐ ಶ್ರೀನಿವಾಸ ಅಲ್ಲಾಪುರ್ ಇವರ ಮಾರ್ಗದರ್ಶನದಲ್ಲಿ ಪಿಎಸ್‌ಐ ಬಸಲಿಂಗಪ್ಪ ಎಂ. ಗೋಧಿಹಾಳ, ತನಿಖಾ ಪಿಎಸ್‌ಐ ಶಿವರಾಯ, ಎಎಸ್‌ಐ ಭೀಮರಾವ ರಾಠೋಡ, ಆಕಾಶ ರೆಡ್ಡಿ, ಸಿಬ್ಬಂದಿಗಳಾದ ವಿಕ್ರಮ, ಪಾಂಡುರಂಗ, ವಿಜಯಕುಮಾರ್ ಬರ್ಮಾ, ಜಗದೀಶರೆಡ್ಡಿ, ಈಶ್ವರ, ಶ್ರೀಮಂತ, ತಾಯಪ್ಪ ಇವರುಗಳ ತಂಡ ರಚಿಸಲಾಯಿತ್ತು. ಆರೋಪಿತರಿಂದ ಚಿಟಗುಪ್ಪ, ಸುಲೇಪೇಟ್, ನರೋಣ, ರಟಕಲ್, ಕಮಲಾಪುರ್, ಬಸವಕಲ್ಯಾಣದಿಂದ ಕಳವು ಮಾಡಿದ ಸುಮಾರು 9.25ಲಕ್ಷ ಮೌಲ್ಯಗಳ 13 ಮೋಟಾರ್ ಸೈಕಲಗಳು ಜಪ್ತಿ ಮಾಡಿಕೊಂಡು ಮೂವರು ಆರೋಪಿಗಳಿಗೆ ಬಂಧಿಸಿ ನ್ಯಾಯಾಂಗ ಬಂಧನ ಕಳುಹಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟೆ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಾಲೆಯ ಮೇಲ್ಛಾವಣಿ ಕುಸಿದು ಮೂವರು ವಿದ್ಯಾರ್ಥಿಗಳಿಗೆ ಗಂಭೀರ ಗಾಯ



ಕಲಬುರಗಿ:ಅ.22: ಅತ್ಯಂತ ಹಳೆಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮೇಲ್ಛಾವಣಿ ಕುಸಿದು ಮೂವರು ವಿದ್ಯಾರ್ಥಿಗಳು ಗಂಭೀರವಾಗಿ ಗಾಯಗೊಂಡ ಘಟನೆ ಸೇಡಂ ತಾಲ್ಲೂಕಿನ ಮಲ್ಕಾಪಲ್ಲಿ ಗ್ರಾಮದಲ್ಲಿ ಶುಕ್ರವಾರ ಸಂಭವಿಸಿದೆ. ಗಾಯಾಳುಗಳನ್ನು ವಿದ್ಯಾರ್ಥಿಗಳಾದ ಅಕ್ಷತಾ, ಕಾವೇರಿ, ಶ್ರೀನಿವಾಸ್ ಎಂದು ಗುರುತಿಸಲಾಗಿದೆ.

ವಿದ್ಯಾರ್ಥಿಗಳು ಮಧ್ಯಾಹ್ನದ ಊಟದ ವೇಳೆ ಶಾಲಾ ಕೋಣೆಗೆ ಮೂವರು ವಿದ್ಯಾರ್ಥಿಗಳು ತೆರಳಿದ್ದಾಗ ಶಾಲೆ ಮೇಲ್ಛಾವಣಿ ಕುಸಿದು 8ನೇ ತರಗತಿ ವಿದ್ಯಾರ್ಥಿನಿ ಅಕ್ಷತಾ (13) ತಲೆಗೆ ಗಂಭೀರ ಗಾಯಗಳಾಗಿವೆ. ಕಾವೇರಿ (13) ಕಾಲಿನ ಬೆರಳಿಗೆ ಗಂಭೀರ ಗಾಯವಾಗಿದೆ ಹಾಗೂ ಶ್ರೀನಿವಾಸ್ (13) ಕೈಗೆ ಗಂಭೀರ ಗಾಯಗೊಂಡಿದ್ದು, ಮೂವರನ್ನು ಕೂಡಲೇ ಸಮೀಪದ ಕೋಲಕುಂದಾ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ದಾಖಲಿಸಲಾಗಿದೆ. ವೈದ್ಯರು ಪರಿಶೀಲಿಸಿ ಅಕ್ಷತಾ ವಿದ್ಯಾರ್ಥಿನಿ ತಲೆಗೆ ಗಂಭೀರ ಗಾಯಗೊಂಡಿ–ದ್ದರಿಂದ ಎರಡು ಟಾಕಿ ಹಾಕಿದ್ದು, ಹೆಚ್ಚಿನ ಚಿಕಿತ್ಸೆಗಾಗಿ ಗುರುಮಿಠಕಲ್ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ ಎಂಬ ಮಾಹಿತಿ ಸಿಕ್ಕಿದೆ.

ಶಾಲೆಯಲ್ಲಿ 1ರಿಂದ 8ನೇ ತರಗತಿವರೆಗೆ ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದು, ಅದರಲಿ ನಾಲ್ಕು ಶಾಲಾ ಕೊಠಡಿಗಳಿದ್ದು, ಸುಮಾರಜ 300 ವಿದ್ಯಾರ್ಥಿಗಳಿದ್ದಾರೆ. ಕುಡಿಯುವ ನೀರು, ಶೌಚಾಲಯ ಸೇರಿದಂತೆ ಮೂಲಭೂತ ಸೌಲಭ್ಯಗಳಿಂದ ವಿದ್ಯಾರ್ಥಿಗಳು ಪರದಾಡುವಂತ ಪರಿಸ್ಥಿತಿ ಎದುರಾಗಿದೆ ಎಂದು ವಿದ್ಯಾರ್ಥಿಗಳು ಕಳವಳ ವ್ಯಕ್ತಪಡಿಸಿದರು

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330. Editor: Ramesh Reddy, Office Ph. No: +91 9449732000.